RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 79 ಪುಟ: 06 ಮಂಗಳವಾರ 18-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಸ್ಟಾರ್ ನಟರ ಜತೆ ಮಿಂಚಿದ ನಟಿಯ ದುರಂತ ಕಥೆ

ಎಷ್ಟೊಂದು ಹಾಟ್ ಊರ್ಮಿಳಾ ಮಾತೋಂಡ್ಕರ್

ನೋಲನ್ ಹೊಸ ಸಿನಿಮಾದ ಪೋಸ್ಟರ್ ಬಿಡುಗಡೆ

ಪುಟ 6

# ನೀರಾವರಿ ಯೋಜನೆಗೆ ಬದ್ಧ

## ಮೇಕೆದಾಟು ಯೋಜನೆ ಸೇರಿದಂತೆ ನೆನೆಗುದಿಗೆ ಬಿದ್ದಿರುವ ಯೋಜನೆಗಳ ಸಂಬಂಧ ಚರ್ಚೆ ನಡೆಸಲಿದ್ದೇನೆ: ಡಿಸಿಎಂ



**ಬೆಂಗಳೂರು:** ಶಾಶ್ವತ ನೀರಾವರಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ನಮ್ಮ ಸರ್ಕಾರ ಸಕಲ ಪ್ರಯತ್ನಗಳನ್ನು ಮಾಡುತ್ತಿದೆ. ಎಲ್ಲಾ ಯೋಜನೆಗಳನ್ನು ಕಾರ್ಯರೂಪಕ್ಕೆ ತರಲು ನಾವು ಸಿದ್ಧರಿದ್ದೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದ್ದಾರೆ.

"ರಾಜಸ್ಥಾನದ ಉದಯಪುರದಲ್ಲಿ ನಡೆಯಲಿರುವ ದೇಶದ ಎಲ್ಲಾ ನೀರಾವರಿ ಸಚಿವರುಗಳ ಸಭೆಯಲ್ಲಿ ಭಾಗವಹಿಸಲು ಹೊರಡುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಶಾಶ್ವತ ನೀರಾವರಿ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವುದು ನಿಶ್ಚಿತ. ಯಾವುದೊಂದು ಯೋಜನೆಯನ್ನು ಕೈಬಿಡುವುದಿಲ್ಲ. ಯೋಜನೆಗಳಿಗೆ ಇರುವಂತಹ ಅಡತಡೆಗಳ ಕುರಿತಾಗಿ ಚರ್ಚೆ ನಡೆಸಲಿದ್ದೇನೆ ಎಂದರು.

ಮೇಕೆದಾಟು ಯೋಜನೆ ಸೇರಿದಂತೆ ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ನೀರಾವರಿ ಸಂಬಂಧಿತ ಯೋಜನೆಗಳನ್ನು ಶೀಘ್ರವೇ ಕೈಗೆತ್ತಿಕೊಳ್ಳಲಾಗುವುದು ಎಂದು ಶಿವಕುಮಾರ್ ಹೇಳಿದರು.

ಸಭೆಯಲ್ಲಿ ಮೇಕೆದಾಟು, ಮಹದಾಯಿ, ನವಲಿ ಹಾಗೂ ಅಣೆಕಟ್ಟು ದುರಸ್ತಿ ಸೇರಿದಂತೆ ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಬಗ್ಗೆ ಚರ್ಚೆ ಮಾಡುತ್ತೇನೆ. ಬೇರೆ ರಾಜ್ಯಗಳ ಯೋಜನೆಗಳ ಸಂಬಂಧ ಮಾಹಿತಿ ಕಲೆಹಾಕುತ್ತೇನೆ ಎಂದು ತಿಳಿಸಿದರು.

"ರಾಜಸ್ಥಾನದಲ್ಲಿ ಅಖಿಲ ಭಾರತ ನೀರಾವರಿ ಸಚಿವ ರುಗಳ ಸಮ್ಮೇಳನ ನಡೆಯುತ್ತಿದ್ದು, ಇಲ್ಲಿ ಎಲ್ಲಾ ರಾಜ್ಯಗಳ ನೀರಾವರಿ ಸಚಿವರ ಸಭೆ ಕರೆಯಲಾಗಿದೆ. ಈ ಸಭೆಯಲ್ಲಿ ನಮ್ಮ ರಾಜ್ಯಕ್ಕೆ ನೀರಾವರಿ ವಿಚಾರದಲ್ಲಿ ಆಗಿರುವ ಅನ್ಯಾಯದ ಬಗ್ಗೆ ಪ್ರಸ್ತಾಪ ಮಾಡುತ್ತೇನೆ" ಎಂದು ತಿಳಿಸಿದರು.

"ಮೇಕೆದಾಟು, ಮಹದಾಯಿ ಯೋಜನೆ ಅನುಮತಿ, ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ಆಗಿರುವ ಅನ್ಯಾಯಗಳ ಬಗ್ಗೆ ಚರ್ಚೆ ಮಾಡುತ್ತೇನೆ. ಇದರ ಜತೆಗೆ ಈ ವರ್ಷ ನಾವು ಅನೇಕ ಇತರೆ ನೀರಾವರಿ ಯೋಜನೆಗಳನ್ನು ಪುಟ 2

## ಅನಧಿಕೃತ ಬಡಾವಣೆಗಳು ಮತ್ತೆ ತಲೆ ಎತ್ತಿದ್ರೆ ನೀವೇ ಹೊಣೆ: ಸಿಎಂ



**ಬೆಂಗಳೂರು:** ಅನಧಿಕೃತ ಬಡಾವಣೆಗಳು ನಗರ, ಪಟ್ಟಣ, ಪಾಲಿಕೆ ವ್ಯಾಪ್ತಿ ಮತ್ತು ಹಳ್ಳಿಗಳಲ್ಲೂ ಇವೆ. ಇವೆಲ್ಲಕ್ಕೂ ನಾವು ಅಂತ್ಯ ಹಾಡುತ್ತಿದ್ದೇವೆ. ಅನಧಿಕೃತ ಬಡಾವಣೆಗಳು ಮತ್ತೆ ತಲೆ ಎತ್ತಿದರೆ ಜಿಲ್ಲಾಧಿಕಾರಿ, ಮುಖ್ಯ ಅಧಿಕಾರಿ, ನಗರ ಯೋಜನಾ ಅಧಿಕಾರಿಗಳು ಜವಾಬ್ದಾರಿ ಆಗುತ್ತೀರಿ. ನಿಮ್ಮ ಮೇಲೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ವಿಡಿಯೊ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಅನಧಿಕೃತ ಬಡಾವಣೆಗಳು ನಗರ, ಪಟ್ಟಣ, ಪಾಲಿಕೆ ವ್ಯಾಪ್ತಿ ಮತ್ತು ಹಳ್ಳಿಗಳಲ್ಲೂ ಇವೆ. ಇವೆಲ್ಲಕ್ಕೂ ನಾವು ಅಂತ್ಯ ಹಾಡುತ್ತಿದ್ದೇವೆ. ಇನ್ನು ಮುಂದೆ ಅನಧಿಕೃತ ಬಡಾವಣೆಗಳಿಗೆ ಪುಟ 2




ಕೇಂದ್ರ ಜಲಶಕ್ತಿ ಸಚಿವಾಲಯ ರಾಜಸ್ಥಾನದ ಉದಯಪುರದಲ್ಲಿ ನಡೆಸುತ್ತಿರುವ "2047ರಲ್ಲಿ ಭಾರತ ಜಲ ಸಮೃದ್ಧಿ ರಾಷ್ಟ್ರ" ಎಂಬ 2ನೇ ಅಖಿಲ ಭಾರತ ರಾಜ್ಯಗಳ ಜಲಸಂಪನ್ಮೂಲ ಸಚಿವರ ಸಮ್ಮೇಳನದಲ್ಲಿ ಕರ್ನಾಟಕದ ಜಲ ಸಂಪನ್ಮೂಲ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಮಾತನಾಡಿದರು. ರಾಜಸ್ಥಾನ ಸಿಎಂ ಭಜನ್ ಲಾಲ್ ಶರ್ಮಾ, ತೆಲಂಗಾಣ ಸಚಿವರಾದ ನಲಮಾಡ ಉತ್ತಮ್ ರೆಡ್ಡಿ, ಆಂಧ್ರಪ್ರದೇಶ ಸಚಿವ ನಿಮ್ಮಲ ರಾಮನಾಯ್ಡು, ರಾಜಸ್ಥಾನ ಸಚಿವರಾದ ಸುರೇಶ್ ಸಿಂಗ್ ರಾವತ್, ಮಧ್ಯಪ್ರದೇಶ ಸಚಿವರಾದ ತುಳಸಿರಾಮ್ ಸಿಲಾವತ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಅಪಘಾತ; ಒಂದೇ ಕುಟುಂಬದ ಐವರು ಸಾವು

**ಭೀಂಡ್(ಮಧ್ಯ ಪ್ರದೇಶ):** ಡಂಪರ್ ಟ್ರಕ್‌ವೊಂದು ನಿಯಂತ್ರಣ ಕಳೆದುಕೊಂಡು ವ್ಯಾನ್‌ಗೆ ಡಿಕ್ಕಿ ಹೊಡೆದು ಒಂದೇ ಕುಟುಂಬದ ಐವರು ಸಾವನ್ನಪ್ಪಿ, 12 ಮಂದಿ ಗಾಯಗೊಂಡ ಘಟನೆ ಮಂಗಳವಾರ ಮುಂಜಾನೆ ಮಧ್ಯ ಪ್ರದೇಶದ ಭೀಂಡ್ ಜಿಲ್ಲೆಯಲ್ಲಿ ಸಂಭವಿಸಿತು. ಮದುವೆ ಸಂಭ್ರಮ ಮುಗಿಸಿ ವ್ಯಾನ್‌ನಲ್ಲಿ 8 ಮಂದಿ ವಾಪಸಾಗುತ್ತಿದ್ದರು. ಭೀಂಡ್‌ನ ಜವಾಹರಪುರ ಗ್ರಾಮದ ಬಳಿ ಮುಂಜಾನೆ 5 ಗಂಟೆಗೆ ರಸ್ತೆ ಬದಿಯಲ್ಲಿ ವ್ಯಾನ್ ನಿಲ್ಲಿಸಿದ್ದರು.ಕೆಲವರು ವಾಹನದಿಂದ ಇಳಿದು ರಸ್ತೆ ಬದಿ ನಿಂತಿದ್ದರೆ, ಇನ್ನು ಕೆಲವರು ವ್ಯಾನ್‌ನಲ್ಲೇ ಕುಳಿತಿದ್ದರು. ಈ ವೇಳೆ ವೇಗವಾಗಿ ಬಂದ ಡಂಪರ್ ಟ್ರಕ್ ಡಿಕ್ಕಿ ಹೊಡೆದಿದೆ. ಇದರ ರಭಸಕ್ಕೆ ಸ್ಥಳದಲ್ಲೇ ಮೂವರು ಸಾವನ್ನಪ್ಪಿದ್ದು, ಇಬ್ಬರು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಅಸುನೀಗಿದರು ಎಂದು ಎಸ್‌ಪಿ ಅಸಿತ್ ಯಾದವ್ ತಿಳಿಸಿದ್ದಾರೆ. ಗಾಯಾಳುಗಳನ್ನು ಸ್ಥಳೀಯ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ. ಗಂಭೀರವಾಗಿ ಪುಟ 2

## ಪ್ರಧಾನಿ ಮಾರ್ಗದರ್ಶನದಲ್ಲಿ ಯೋಗಿಜಿ ಅದ್ಭುತ ವ್ಯವಸ್ಥೆ ಕಲ್ಪಿಸಿದ್ದಾರೆ



**ಪ್ರಾಯಾಗರಾಜ್(ಉತ್ತರಪ್ರದೇಶ):** ವಿಶ್ವ ಪ್ರಸಿದ್ಧ, ಹಿಂದೂ ಧರ್ಮದ ಶ್ರೇಷ್ಠ ಪ್ರಯಾಗರಾಜ್ ಮಹಾಕುಂಭದಲ್ಲಿ ಇಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಕುಟುಂಬ ಸಹಿತ ಭಾಗಿಯಾಗಿ ತ್ರಿವೇಣಿ ಸಂಗಮದಲ್ಲಿ ಪುಣ್ಯಸ್ನಾನಗೈದರು.

ತ್ರಿವೇಣಿ ಸಂಗಮದ ಪವಿತ್ರ ಗಂಗೆಯಲ್ಲಿ ಮುಳಿಗೇಳುತ್ತ ತೀರ್ಥಸ್ನಾನ ಮಾಡಿದ ಸಚಿವರು, ಮಂತ್ರ ಪಠಣದೊಂದಿಗೆ ದೇವರಿಗೆ ನಮಸ್ಕರಿಸಿ, ಲೋಕದ ಸುಭಿಕ್ಷೆಗೆ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಬಳಿಕ ಕುಟುಂಬ ಸಮೇತರಾಗಿ ವಿಶಿಷ್ಠ ಭಂಗಿಯ ಭಗವಾನ್ ಹನುಮ ದೇವಾಲಯ ಹಾಗೂ ಅಕ್ಷಯವತ್ ಗೆ ತೆರಳಿ ದೇವರ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು.

ವಿಶ್ವದ ಅತ್ಯಂತ ದೊಡ್ಡ ಧಾರ್ಮಿಕ ಉತ್ಸವ ಮತ್ತು ಹಿಂದೂ ಧರ್ಮದ ಶ್ರೇಷ್ಠ ಆಧ್ಯಾತ್ಮಿಕ ಮಹೋತ್ಸವವೂ ಆಗಿರುವ ಈ ಮಹಾ ಕುಂಭ ಮೇಳದಲ್ಲಿ ಸಚಿವ ಪ್ರಲ್ಹಾದ ಜೋಶಿ ಅವರ ಇಡೀ ಕುಟುಂಬವೇ ಭಾಗಿಯಾಗಿ ಶ್ರದ್ಧಾಭಕ್ತಿ ಮೆರೆಯಿತು.

ಸಚಿವರೊಂದಿಗೆ ಪತ್ನಿ ಜ್ಯೋತಿ ಜೋಶಿ, ಮಕ್ಕಳಾದ ಅರ್ಪಿತಾ ಜೋಶಿ, ಅನನ್ಯಾ ಜೋಶಿ, ಅನುಷಾ ಜೋಶಿ ಹಾಗೂ ಸಹೋದರ ಗೋವಿಂದ ಪುಟ 2

## ಆನ್‌ಲೈನ್ ಬೆಟ್ಟಿಂಗ್: ಮೂವರು ಬಲಿ

**ಮೈಸೂರು:** ಐಪಿಎಲ್ ಹಾಗೂ ಆನ್‌ಲೈನ್ ಬೆಟ್ಟಿಂಗ್‌ಗೆ ಒಂದೇ ಕುಟುಂಬದ ಮೂವರು ಮೃತಪಟ್ಟಿರುವ ಘಟನೆ ಮೈಸೂರು ತಾಲೂಕಿನ ಹಂಚ್ಯಾ ಗ್ರಾಮದ ಬಳಿ ನಡೆದಿದೆ. ಜೋಶಿ ಆಂಥೋನಿ, ಜೋಬಿ ಆಂಥೋನಿ, ಶರ್ಮಿಳಾ ಅಲಿಯಾಸ್ ಸ್ವಾತಿ ಮೃತ ದುರ್ದೈವಿಗಳು. ಜೋಬಿ ಆಂಥೋನಿ ಹಾಗೂ ಜೋಷಿ ಆಂಥೋನಿ ಸಹೋದರರು. ಜೋಶಿ ಆಂಥೋನಿ ತನ್ನ ತಮ್ಮನಾದ ಜೋಬಿ ಪುಟ 2

## ಲ್ಯಾಂಡಿಂಗ್ ವೇಳೆ ವಿಮಾನ ಪಲ್ಟಿ; ಗಾಯ

**ಟೊರೊಂಟೊ(ಕೆನಡಾ):** 80 ಜನರಿದ್ದ ಡೆಲ್ಟಾ ಏರ್‌ಲೈನ್ಸ್ ವಿಮಾನ ಲ್ಯಾಡಿಂಗ್ ವೇಳೆ ರನ್‌ವೇಯಲ್ಲಿ ಪಲ್ಟಿಯಾಗಿ, ತಲೆಕೆಳಗಾಗಿ ಬಿದ್ದಿದ್ದು, 18 ಜನರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಪಿಯರ್ಸನ್ ವಿಮಾನ ನಿಲ್ದಾಣದಲ್ಲಿ ನಡೆದಿದೆ.
ಈ ಕುರಿತು ಎಕ್ಸ್ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ವಿಮಾನ ನಿಲ್ದಾಣದ ಅಧಿಕಾರಿಗಳು, " ಪುಟ 2

## ಸಿಎಂ ತೆಗೆಯಬೇಕು; ಯಾರೂ ಹೇಳುತ್ತಿಲ್ಲ

**ಬೆಳಗಾವಿ:** ಕಾಂಗ್ರೆಸ್ ನಲ್ಲಿ ಸಿಎಂ ತೆಗೆಯಬೇಕು ಅಂತಾ ಯಾರೂ ಹೇಳಿಲ್ಲ. ಅದರ ಅವಶ್ಯಕತೆ ಇಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಮಾಧ್ಯಮಗಳ ಜೊತೆ ಮಂಗಳವಾರ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, ಈ ಬಗ್ಗೆ ಚರ್ಚೆ ಆಗಬಾರದು ಸಿಎಂ ಅವರಿದ್ದಾಗ ಇವೆಲ್ಲಾ ಚರ್ಚೆ ಯಾಕೆ..? ಪುಟ 2

## ದೇಶದ ಅಭಿವೃದ್ಧಿಗಾಗಿ ಪ್ರಧಾನಿ ಹುದ್ದೆಯನ್ನು ಬೇರೆಯವರಿಗೆ ಬಿಟ್ಟುಕೊಡಲಿ



**ಗದಗ:** ದೇಶದ ಪರಿಸ್ಥಿತಿ ಈ ಪ್ರಧಾನಿ ಹುದ್ದೆಯಲ್ಲಿರೋ ಮೋದಿಯವರಿಂದ ದಿವಾಳಿ ಎದ್ದು ಹೋಗಿದ್ದು, ನಿತೀನ್ ಗಡ್ಕರಿಯಂತಹ ಸೂಕ್ತರೂ ಪ್ರಧಾನಿ ಹುದ್ದೆಗೆ ಇದ್ದಾರೆ ದೇಶದ ಹಿತದೃಷ್ಟಿಯಿಂದ ಬೇರೆಯವರಿಗೆ ಪ್ರಧಾನಿ ಹುದ್ದೆಯನ್ನು ಬಿಟ್ಟುಕೊಡುವಂತೆ ಬಿಜೆಪಿ ಕಾರ್ಯಕರ್ತರಾದಿಯಾಗಿ ಮುಖಂಡರು ಧ್ವನಿಯೆತ್ತಬೇಕೆಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಮನವಿ ಮಾಡಿದ್ದಾರೆ.

ಗದಗ ಜಿಲ್ಲಾಧಿಕಾರಿಗಳ ಸಮ್ಮೇಳನ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿ ಬಳಿಕ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದರು.

ಇಲ್ಲಿವರೆಗೆ ಸುಮಾರು 20ಕ್ಕೂ ಹೆಚ್ಚಿನ ಜಿಲ್ಲೆಗಳಿಗೆ ತಾವು ಪ್ರವಾಸ ಮಾಡಿದ್ದು, ಕಾರ್ಮಿಕ ಇಲಾಖೆಯ ಅಭಿವೃದ್ಧಿ ಪುಟ 2

## ಚುನಾವಣಾ ಆಯುಕ್ತರಾಗಿ ಜ್ಞಾನೇಶ್ ಕುಮಾರ್ ನೇಮಕ

ನವದೆಹಲಿ: ಭಾರತ ಚುನಾವಣಾ ಆಯೋಗದ ಆಯುಕ್ತರಾದ ಜ್ಞಾನೇಶ್ ಕುಮಾರ್ ಅವರನ್ನು ಮುಂದಿನ ಮುಖ್ಯ ಚುನಾವಣಾ ಆಯುಕ್ತರನ್ನಾಗಿ



ನೇಮಕ ಮಾಡಲಾಗಿದೆ ಎಂದು ಕೇಂದ್ರ ಕಾನೂನು ಸಚಿವಾಲಯ ತಿಳಿಸಿದೆ. ಜ್ಞಾನೇಶ್ ಕುಮಾರ್ ಅವರು ಚುನಾವಣಾ ಆಯೋಗಕ್ಕೆ ಸದಸ್ಯರ ನೇಮಕಾತಿಗೆ ಸಂಬಂಧಿಸಿದಂತೆ ರೂಪಿಸಲಾದ ಹೊಸ ಕಾನೂನಿನಡಿ ಮುಖ್ಯ ಚುನಾವಣಾ ಆಯುಕ್ತರಾಗಿ(ಸಿಇಸಿ) ಆಯ್ಕೆಯಾದ ಮೊದಲಿಗರು. ಪುಟ 2

## ಕತಾರ್ ದೊರೆಗೆ ಗಾರ್ಡ್ ಆಫ್ ಆನರ್ ಸಾಂಪ್ರದಾಯಿಕ ಸ್ವಾಗತ



**ನವದೆಹಲಿ:** ಎರಡು ದಿನಗಳ ಭೇಟಿಗಾಗಿ ಭಾರತಕ್ಕೆ ಆಗಮಿಸಿರುವ ಕತಾರ್ ದೊರೆ ತಮೀಮ್ ಬಿನ್ ಹಮದ್ ಅಲ್ ಥನಿ ಅವರಿಗೆ ರಾಷ್ಟ್ರಪತಿ ಭವನದಲ್ಲಿ ಇಂದು ಗಾರ್ಡ್ ಆಫ್ ಆನರ್ ಮೂಲಕ ಸರ್ಕಾರಿ ಗೌರವಗಳೊಂದಿಗೆ ಆತ್ಮೀಯವಾಗಿ ಸ್ವಾಗತಿಸಲಾಯಿತು.ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಜೊತೆಯಲ್ಲಿ ಹಿರಿಯ ಸಚಿವರು ಕತಾರ್ ದೊರೆಯನ್ನು ಆತ್ಮೀಯವಾಗಿ ಪುಟ 2

## ಉಪವಾಸ ಸತ್ಯಾಗ್ರಹ ನಿರತ ರೈತ ಮುಖಂಡರ ಜೊತೆ ಸಭೆ



**ನವದೆಹಲಿ:** ತಮ್ಮ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಈ ವರ್ಷವಿಡೀ ನಡೆದ ರೈತರ ಪ್ರತಿಭಟನೆಯ ಹಿನ್ನೆಲೆಯಲ್ಲಿ ರೈತ ಸಂಘದ ನಾಯಕ ಜಗಜಿತ್ ಸಿಂಗ್ ದಲ್ಲೇವಾಲ್ ಅವರೊಂದಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಭೆ ನಡೆಸಿದ್ದಾರೆ.

ಕಳೆದ ಕೆಲವು ದಿನಗಳಿಂದ ಉಪವಾಸ ಸತ್ಯಾಗ್ರಹ ನಡೆಸುತ್ತಿರುವ ಸಂಯುಕ್ತ ಕಿಸಾನ್ ಮೋರ್ಚಾದ ನಾಯಕರೊಂದಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾತುಕತೆ ನಡೆಸಿದರು. ಈ ಸಭೆಯ ಬಳಿಕ ಮಾತನಾಡಿದ ಅವರು, "ನಾವು ಪಂಜಾಬ್ ಸರ್ಕಾರದೊಂದಿಗೆ ರಾಜಕೀಯೇತರ ರೈತ ಸಂಘವಾದ ಸಂಯುಕ್ತ ಕಿಸಾನ್ ಮೋರ್ಚಾದ ನಾಯಕರನ್ನು ಭೇಟಿ ಮಾಡಿದ್ದೇವೆ.

ಈ ಭೇಟಿಯ ವೇಳೆ ನಡೆದ ಚರ್ಚೆಗಳು ಸಕಾರಾತ್ಮಕವಾಗಿತ್ತು. ರೈತರ ಬೇಡಿಕೆಗಳನ್ನು ವಿವರವಾಗಿ ಆಲಿಸಿದ ನಂತರ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ರೈತರಿಗಾಗಿ ಯಾವ ರೀತಿಯ ಕಾರ್ಯಕ್ರಮಗಳನ್ನು ಜಾರಿಗೊಳಿಸಲಿದೆ ಎಂಬುದನ್ನು ನಾನು ವಿವರಿಸಿದೆ" ಎಂದು ಮಾಹಿತಿ ನೀಡಿದ್ದಾರೆ. ಪುಟ 2

## ಉದಯಗಿರಿ ಗಲಭೆ: ಆರೋಪಿ ರಿಲೀಸ್

**ಮೈಸೂರು:** ವಿವಾದಿದ ಪೋಸ್ಟ್ ಹಂಚಿಕೆ ಉದಯಗಿರಿ ಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿ ಸತೀಶ್ ಜೈಲಿನಿಂದ ರಿಲೀಸ್ ಆಗಿದ್ದಾರೆ.
ನಿನ್ನೆ ಮೈಸೂರಿನ ನ್ಯಾಯಾಲಯ ಆರೋಪಿ ಸತೀಶ್ @ ಪಾಂಡುರಂಗಗೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದ್ದು, ಇಂದು ಆರೋಪಿ ಸತೀಶ್ ಜೈಲಿನಿಂದ ರಿಲೀಸ್ ಆಗಿದ್ದಾರೆ. ಜೈಲಿನಿಂದ ರಿಲೀಸ್ ಆಗಿ ಸತೀಶ್ ಗೌಪ್ಯ ಸ್ಥಳಕ್ಕೆ ತೆರಳಿದ್ದಾರೆ. ಪುಟ 2

## ಸಬ್‌ಇನ್ಸ್‌ಪೆಕ್ಟರ್ ವರ್ಗಾವಣೆ

**ಮೈಸೂರು:** ಉದಯಗಿರಿ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಉದಯಗಿರಿ ಪೊಲೀಸ್ ಠಾಣೆಯ ಸಬ್ ಇನ್ಸ್ ಪೆಕ್ಟರ್ ರೂಪೇಶ್ ರನ್ನು ವರ್ಗಾವಣೆ ಮಾಡಲಾಗಿದೆ. ನಗರ ಪೊಲೀಸ್ ಆಯುಕ್ತರ ಕಚೇರಿಯ ಆಟೋಮೇಷನ್ ಸೆಂಟರ್ ಸಬ್ ಇನ್ಸ್ ಪೆಕ್ಟರ್ ರೂಪೇಶ್ ಅವರನ್ನು ವರ್ಗಾವಣೆ ಮಾಡಿ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಆದೇಶ ಹೊರಡಿಸಿದ್ದಾರೆ. ಪುಟ 2

## ಹಾಸನ ಜೆಡಿಎಸ್ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತು ಪಡಿಸುತ್ತೇವೆ : ರೇವಣ್ಣ



**ಅರಸೀಕೆರೆ:** ಮುಂಬರುವ ತಾಲೂಕು ಹಾಗೂ ಜಿಲ್ಲಾ ಪಂಚಾಯ್ತಿ ಸೇರಿ ಯಾವುದೇ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿ ನಾವು ಲಘುವಾಗಿ ಪರಿಗಣಿಸದೆ ಎಲ್ಲೆಡೆ ಸಮರ್ಥ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದರ ಜೊತೆಗೆ ಹಾಸನ ಜೆಡಿಎಸ್‌ನ ಭದ್ರಕೋಟೆ ಎಂಬುದನ್ನು ಮತ್ತೊಮ್ಮೆ ಸಾಬೀತು ಮಾಡುತ್ತೇವೆ ಎಂದು ಮಾಜಿ ಸಚಿವ ಹಾಗೂ ಹೊಳೆನರಸೀಪುರ ಶಾಸಕ ಹೆಚ್.ಡಿ.ರೇವಣ್ಣ ಹೇಳಿದರು.

ಸ್ಥಳೀಯ ಜೆಡಿಎಸ್ ಮುಖಂಡ ಗಂಗಾಧರ್ ಅವರ ಕುಟುಂಬದ ಮದುವೆಗೆಂದು ಆಗಮಿಸಿದ್ದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯ ಅಭಿವೃದ್ಧಿಗೆ ಜೆಡಿಎಸ್ ಪಕ್ಷದ ಕೊಡುಗೆ ಏನೆಂಬುದು ಜನರಿಗೆ ಗೊತ್ತಿದೆ. ಅಲ್ಲದೆ ಮಾಜಿ ಪ್ರಧಾನಿ ದೇವೇಗೌಡರು, ಮಾಜಿ ಸಿಎಂ ಕುಮಾರಸ್ವಾಮಿ ಅವರ ಅವಧಿಯಲ್ಲಿ ಕೈಗೊಂಡಿರುವ ಶಾಶ್ವತ ಕೆಲಸ ಕಾರ್ಯಗಳು ಜಿಲ್ಲಾದಂತ ಕಾಣುತ್ತಿವೆ ಎಂದರು.

ಇಷ್ಟಿದ್ದರೂ ಜೆಡಿಎಸ್ ಮುಗಿಯಿತು ಎನ್ನುವವರಿಗೆ ಸ್ಥಳೀಯ ನಮ್ಮ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಕೃತಿಯಲ್ಲಿ ಮಾಡಿ ತೋರಿಸಲಿದ್ದಾರೆ ಎಂದರು. ದೇವೇಗೌಡರು, ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಮೊದಲು ತಾಲೂಕು ವಾರು ಸಮ್ಮೇಳನ ನಡೆಸಲು ರೂಪುರೇಷ ಸಿದ್ಧ ಪುಟ 2

ಮೊದಲ ಪುಟದಿಂದ

## ನೀರಾವರಿ ಯೋಜನೆಗೆ ಬದ್ಧ

ತಯಾರು ಮಾಡಿ ಕೇಂದ್ರಕ್ಕೆ ಕಳುಹಿಸಿದ್ದೇವೆ" ಎಂದು ಹೇಳಿದರು."ತುಂಗ ಭದ್ರಾ ಅಣೆಕಟ್ಟು ಕ್ರೆಸ್ಟ್ ಗೇಟ್ ದುರಸ್ತಿ ಬಳಿಕ ರಾಜ್ಯದ ಎಲ್ಲಾ ಅಣೆಕಟ್ಟುಗಳ ಸುರಕ್ಷತೆಗಾಗಿ ಅವುಗಳ ರಿಪೇರಿಗೆ ಯೋಜನೆಯನ್ನು ಸಿದ್ಧಪಡಿಸಿ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದೇವೆ. ಇನ್ನು ಈ ಜಲಾಶಯಕ್ಕೆ ನವಲಿಯಲ್ಲಿ ಸಮಾನಾಂತರ ಜಲಾಶಯ ನಿರ್ಮಾಣ ಮಾಡುವ ವಿಚಾರವಾಗಿ ತೆಲಂಗಾಣ ಹಾಗೂ ಆಂಧ್ರ ಪ್ರದೇಶ ರಾಜ್ಯಗಳ ಸಚಿವರ ಜೊತೆ ಚರ್ಚೆ ಮಾಡಲಾಗುವುದು. ಈ ವಿಚಾರವಾಗಿ ಪ್ರತ್ಯೇಕ ಸಭೆ ಮಾಡಲು ಈಗಾಗಲೇ ಎರಡೂ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೇನೆ" ಎಂದರು.

**ಜನರಿಗೆ ಸರ್ಕಾರದ ಮೇಲೆ ನಂಬಿಕೆ ಇದೆ:** ಅನ್ನಭಾಗ್ಯ ಹಾಗೂ ಗೃಹಲಕ್ಷ್ಮಿ ಹಣ ಫಲಾನುಭವಿಗಳಿಗೆ ತಲುಪಿಲ್ಲ, ಸರ್ಕಾರದ ಬೊಕ್ಕಸ ಖಾಲಿಯಾಗಿದೆ ಎಂಬ ಬಿಜೆಪಿ ಟೀಕೆ ಬಗ್ಗೆ ಕೇಳಿದಾಗ, "ಇದೆಲ್ಲವೂ ಸುಳ್ಳು, ಸರ್ಕಾರಕ್ಕೆ ಸಂಪನ್ಮೂಲ ಕ್ರೂಢೀಕರಣ ಒಂದೇ ದಿನಕ್ಕೆ ಆಗುವುದಿಲ್ಲ. ಹಂತ ಹಂತವಾಗಿ ಬರುತ್ತದೆ. ಆರ್ಥಿಕ ವರ್ಷಾಂತ್ಯದ ವೇಳೆಗೆ ಎಲ್ಲವೂ ಸರಿಯಾಗುತ್ತದೆ. ಸರ್ಕಾರಕ್ಕೆ ಹಣದ ಸಮಸ್ಯೆ ಇಲ್ಲ. ಆರ್ಥಿಕವಾಗಿ ನಾವು ಬಲಿಷ್ಠವಾಗಿದ್ದೇವೆ. ಅನ್ನಭಾಗ್ಯದಲ್ಲಿ ಜನರಿಗೆ ತಲುಪಬೇಕಾದ ಅಕ್ಕಿ ತಲುಪುತ್ತಿದೆ. ಮಾಧ್ಯಮಗಳು ಹಾಗೂ ವಿರೋಧ ಪಕ್ಷಗಳ ಹೊರತಾಗಿ, ಈ ವಿಚಾರದಲ್ಲಿ ಜನಸಾಮಾನ್ಯರಿಗೆ ಅಸಮಾಧಾನ ಇಲ್ಲ. ಜನರು ಈ ವಿಚಾರದಲ್ಲಿ ಸಂತೋಷವಾಗಿದ್ದಾರೆ. ಜನರಿಗೆ ನಮ್ಮ ಮೇಲೆ ನಂಬಿಕೆ ಇದೆ. ಎರಡು, ಮೂರು ತಿಂಗಳು ಹಣ ಬಾಕಿ ಇದ್ದು, ಈ ತಿಂಗಳು ಬಿಡುಗಡೆಯಾಗಲಿದೆ" ಎಂದು ತಿಳಿಸಿದರು.

## ಕುಟುಂಬದ ಐವರು ಸಾವು

ಗಾಯಗೊಂಡಿರುವ 7 ಮಂದಿಯನ್ನು ಗ್ವಾಲಿಯರ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಗ್ರಾಮಸ್ಥರಿಂದ ರಸ್ತೆ ತಡೆ: ಐವರ ಸಾವಿನ ಬೆನ್ನಲ್ಲೇ ಕುಟುಂಬ ಸದಸ್ಯರು ಹಾಗೂ ಗ್ರಾಮಸ್ಥರು ರಸ್ತೆ ತಡೆ ನಡೆಸಿದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದರು. ರಸ್ತೆ ಅಗಲೀಕರಣ ಹಾಗೂ ಆಡಳಿತ ದೋಷದ ಕುರಿತು ಪೊಲೀಸರು ಹಾಗೂ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು. 24 ಗಂಟೆಯಲ್ಲಿ ಎರಡನೇ ಭೀಕರ ಅಪಘಾತ: ಈ ಪ್ರದೇಶದಲ್ಲಿ ಪದೇ ಪದೇ ಅಪಘಾತವಾಗುತ್ತಿದೆ. ಕಳೆದ 24 ಗಂಟೆಯಲ್ಲಿ ಸಂಭವಿಸಿದ ಎರಡನೇ ದುರಂತ ಇದು. ಇಲ್ಲಿನ ಕಿರಿದಾದ ರಸ್ತೆಗಳೇ ದುರಂತಕ್ಕೆ ಕಾರಣ ಎಂದು ಸ್ಥಳೀಯರು ಆಕ್ರೋಶ ಹೊರಹಾಕಿದ್ದಾರೆ. ಭಾನುವಾರ ಮದುವೆ ಮುಗಿಸಿ ಮರಳುತ್ತಿದ್ದ ಯುವಕನೊಬ್ಬನಿಗೆ ಟ್ರಕ್ ಗುದ್ದಿ, ಆತ ಭೀಕರವಾಗಿ ಸಾವನ್ನಪ್ಪಿದ್ದ. ಈ ಘಟನೆಯಿಂದಾಗಿ ಜವಾಹರಪುರ ಗ್ರಾಮದ ಬಾಸ್ ಹೆದ್ದಾರಿಯ ಎರಡೂ ಬದಿಗಳಲ್ಲಿ ಟ್ರಾಫಿಕ್ ಜಾಮ್ ಉಂಟಾಗಿತ್ತು.

## ಅದ್ಭುತ ವ್ಯವಸ್ಥೆ ಕಲ್ಪಿಸಿದ್ದಾರೆ

ಜೋಶಿ-ಕಮಲಾ ಜೋಶಿ ದಂಪತಿ ಸೇರಿದಂತೆ ಮಕ್ಕಳು, ಮೊಮ್ಮಕ್ಕಳಾದಿಯಾಗಿ ಕುಟುಂಬದ ಸದಸ್ಯರೆಲ್ಲರೂ ಪುಣ್ಯಸ್ನಾನ ಗೈದು ಭಕ್ತಿ ಸಮರ್ಪಿಸಿದರು.ಈ ವೇಳೆ ಪ್ರಯಾಗರಾಜ್ ನಲ್ಲಿ ಸುದ್ದಿ ಸಂಸ್ಥೆ ಜತೆ ಮಹಾಕುಂಭದ ಅನನ್ಯ ಅನುಭವವನ್ನು ಹಂಚಿಕೊಂಡರು ಸಚಿವ ಪ್ರಲ್ಹಾದ ಜೋಶಿ. "ಪ್ರಯಾಗರಾಜ್ ಮಹಾಕುಂಭ ಮೇಳ ಹಿಂದೂ ಧರ್ಮದ ಒಂದು ಸಾಮೂಹಿಕ ತೀರ್ಥಯಾತ್ರೆಯಾಗಿ ಯಶಸ್ವಿಯಾಗಿ ಜರಗುತ್ತಿದೆ ಎಂದು ಸಂತಸ ವ್ಯಕ್ತಪಡಿಸಿದರು.ತ್ರಿವೇಣಿ ಸಂಗಮದಲ್ಲಿ ಇಂದು ಕುಟುಂಬ ಸಹಿತ ಪಾಲ್ಗೊಂಡು ಪವಿತ್ರ ಸ್ನಾನ ಮಾಡುವ ಸುವರ್ಣ ಅವಕಾಶ ಲಭ್ಯವಾಗಿದ್ದು ನಮ್ಮ ಪುಣ್ಯ. ಇದು ನಮಗೆ ಅತ್ಯಂತ ಮಹತ್ವದ ಮತ್ತು ಭಕ್ತಿ ಸಮರ್ಪಣೆಯ ದೈವಿಕ ಕ್ಷಣವಾಗಿದೆ ಎಂದು ಖುಷಿಪಟ್ಟರು.

ಮಹಾಕುಂಭ ಒಂದು ಶ್ರೇಷ್ಠ ಆಧ್ಯಾತ್ಮಿಕ ಅನುಭವ ನೀಡುತ್ತದೆ. ಇಲ್ಲಿ ಪವಿತ್ರ ಸ್ನಾನ ಮಾಡುವುದು ಭವ್ಯವಾದ ಯಶಸ್ಸು, ನಂಬಿಕೆ ಮತ್ತು ಸಂಸ್ಕೃತಿಯ ಪ್ರತೀಕವಾಗಿದೆ ಎಂದು ತಮ್ಮ ಅನನ್ಯ ಅನುಭವವನ್ನು ಹಂಚಿಕೊಂಡರು.

ಯೋಜಿಗಿ ವ್ಯವಸ್ಥೆ ಅದ್ಭುತ: ಪ್ರಯಾಗರಾಜ್ ಮಹಾಕುಂಭದಲ್ಲಿ ಪ್ರಧಾನಿ ಮೋದಿಜಿ ಅವರ ನೇತೃತ್ವ, ಮಾರ್ಗದರ್ಶನದಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಅದ್ಭುತ ವ್ಯವಸ್ಥೆ ಕಲ್ಪಿಸಿದ್ದಾರೆ ಎಂದು ಸಚಿವ ಜೋಶಿ ಕೊಂಡಾಡಿದರು. ಸಾವಿರಾರು ವರ್ಷಗಳಿಂದ, ವೇದ-ಪುರಾಣಕಾಲದಿಂದ ಮಹಾಕುಂಭ ಮೇಳ ಆಚರಣೆಯಲ್ಲಿದೆ. ದೇಶದೆಲ್ಲೆಡೆಯಿಂದ ಕೋಟ್ಯಂತರ ಸಂಖ್ಯೆಯಲ್ಲಿ ಸಾಧು-ಸಂತರು, ಭಕ್ತರು ಆಗಮಿಸುತ್ತಿದ್ದಾರೆ. ಅತ್ಯಂತ ಶಾಂತಿ, ಸಂಯಮದಿಂದ ಪಾಲ್ಗೊಂಡು ಅವರವರ ಪೂಜಾ ಪದ್ಧತಿಯಲ್ಲಿ ಧಾರ್ಮಿಕ ಉತ್ಸವ ಆಚರಿಸಿ ಅಭೂತಪೂರ್ವವಾಗಿ ಯಶಸ್ವಿಗೊಳಿಸುತ್ತಿದ್ದಾರೆ ಎಂದು ಸಚಿವ ಜೋಶಿ ಸಂತಸ ವ್ಯಕ್ತಪಡಿಸಿದರು. ಅವ್ರು ನಕಾರಾತ್ಮಕ ಆಲೋಚನೆ ಉಳ್ಳವರು: ನಕಾರಾತ್ಮಕವಾಗಿ ಆಲೋಚನೆ ಮಾಡುವವರು ಅದೇ ರೀತಿ ಪ್ರತಿಕ್ರಿಯಿಸುವುದು ಸಾಮಾನ್ಯ. ಆದರೆ, ಇಲ್ಲಿ ಸಕಾರಾತ್ಮಕ ಶಕ್ತಿಯೇ ಹೆಚ್ಚಿದೆ. ಸನಾತನ ಹಿಂದೂ ಧರ್ಮದ ಪ್ರಬಲ ಶಕ್ತಿ ಎಂಥದ್ದು ಎಂಬುದನ್ನು ಈ ಮಹಾಕುಂಭ ಪ್ರದರ್ಶಿಸಿದೆ ಎಂದು ಸಚಿವ ಜೋಶಿ ಪ್ರತಿಪಾದಿಸಿದರು.

## ಬೇರೆಯವರಿಗೆ ಬಿಟ್ಟುಕೊಡಲಿ

ಬಗ್ಗೆ ಚರ್ಚಿಸಲು ಪ್ರಗತಿಪರಿಶೀಲನಾ ಸಭೆ ನಡೆಸಿದ್ದೇನೆ. ಅದರಂತೆ ಗದಗಿಗೂ ಬಂದು ಸಭೆ ನಡೆಸಲಾಗಿದೆ. ರಾಜ್ಯದ ದೇಶದ ಸಮಸ್ಯೆಗಳ ವಿಷಯಗಳಿಗೆ ಹೆಚ್ಚು ಆದ್ಯತೆ ಕೊಡಬೇಕೇ ವಿನಃ ಸಚಿವ ಸಂಪುಟ ಸರ್ಜರಿ ಅದು-ಇದು ಎನ್ನುವ ವಿಷಯಕ್ಕೆ ಮಹತ್ವ ನೀಡಬಾರದು.ಜನರ ಸಮಸ್ಯೆಗಳಿಗಿಂತ ಅಭಿವೃದ್ಧಿಗಿಂತ ಸಚಿವ ಸಂಪುಟದ ವಿಷಯವೇನಷ್ಟೂ ಮಹತ್ವದ್ದಲ್ಲ.ಮಹತ್ವದ ಜನರ ವಿಚಾರಗಳಿಗೆ ಗಮನ ನೀಡಬೇಕು ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಹಾಗೂ ರಾಜಣ್ಣ ವಿಚಾರ ಅವರವರಿಗೆ ಬಿಟ್ಟಿದ್ದಾಗಿದೆ.ಯಾರೂ ಹೊಸ ಸಿಎಂ ವಿಚಾರವನ್ನು ತೇಲಿಬಿಟ್ಟಿದ್ದಾರೆಯೋ ಅವರನ್ನೇ ಸುದ್ದಿಗಾರರು ಪ್ರಶ್ನಿಸಬೇಕೇ ಹೊರತು ನನ್ನನ್ನಲ್ಲ.ನನಗೆ ಸಂಬಂಧವಿಲ್ಲದ ಅಥವಾ ತಿಳಿಯದೇ ಇರುವ ವಿಚಾರದ ಬಗ್ಗೆ ಮಾತನಾಡುವುದು ಸೂಕ್ತವಲ್ಲ.ನಾನು ಯಾರ ಪರವೂ ಅಲ್ಲ,ವಿರೋದವೂ ಅಲ್ಲ.ನಾನು ಕಾಂಗ್ರೆಸ್ ಪಕ್ಷದ ಪರ ಎಂದು ಸುದ್ದಿಗಾರರ ಪ್ರಶ್ನೆಯೊಂದಕ್ಕೆ ಸಂತೋಷ್ ಲಾಡ್ ಉತ್ತರಿಸಿದರು.

ಕುಂಭಮೇಳದಲ್ಲಿ ಎಷ್ಟೊಂದು ಜನರ ಸಾವಾಗಿದೆ.ಸಾವಿರಾರು ಜನರಿಗೆ ಅನಾನುಕೂಲವಾಗಿದೆ.ಈ ಬಗ್ಗೆ ಕೇಂದ್ರ ಸರ್ಕಾರ ಸೂಕ್ತ ಕ್ರಮಗಳನ್ನು ಕೈಗೊಂಡು ಭಕ್ತಾದಿಗಳಿಗೆ ನೆರವಾಗುವಂತೆ ಸುದ್ದಿಗಾರರು ಕೇಂದ್ರವನ್ನು ಪ್ರಶ್ನೆ ಮಾಡಬೇಕು ಎಂದರು.ಪ್ರಗತಿ ಪರಿಶೀಲನಾ ಸಭೆಯಲ್ಲಿ ಗದಗ ಜಿಲ್ಲೆಯ ಪ್ರವಾಸದಲ್ಲಿರುವ ಶ್ರೀ ಸಂತೋಷ್ ಲಾಡ್ ಮಾನ್ಯ ಕಾರ್ಮಿಕ ಸಚಿವರು ಇವರು ಇಂದು ಗದಗ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು ಈ ಸಭೆಯಲ್ಲಿ ಕಾನೂನು ಸಚಿವ ಹೆಚ್ ಕೆ ಪಾಟೀಲ್,ಶಾಸಕರಾದ ಜಿ.ಎಸ್ ಪಾಟೀಲ್, ಸಂಕನೂರು ಚಂದ್ರು ಲಮಾಣಿ ಹಾಗೂ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಾರತಿ, ಕಾರ್ಮಿಕ ಇಲಾಖೆಯ ಆಯುಕ್ತ ಗೋಪಾಲಕೃಷ್ಣ ಮತ್ತು ಕಾರ್ಮಿಕ ಇಲಾಖೆಯ ಅಧಿಕಾರಿಗಳು ಪಾಲ್ಗೊಂಡಿದ್ದರು

## ಬೆಟ್ಟಿಂಗ್: ಮೂವರು ಬಲಿ

ಆಂಥೋನಿ ಮತ್ತು ನಾದಿನಿ ಶರ್ಮಿಳಾ ಆಲಿಯಾಸಿ ಸ್ವಾತಿ ಮೇಲೆ ಮೋಸದ ಆರೋಪ ಹೊರಿಸಿ ಸೋಮವಾರ (ಫೆ.17) ರಂದು ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಸಾಯುವ ಮುನ್ನ ಜೋಶಿ ಆಂಥೋನಿ ವಿಡಿಯೋ ಮಾಡಿದ್ದು, "ಸಹೋದರ ಜೋಬಿ, ಆತನ ಪತ್ನಿ ಶರ್ಮಿಳಾ ಮೋಸದಿಂದ ನನ್ನ ಸಹೋದರಿ ಮೂಲಕ ಊರು ತುಂಬ ಸಾಲ ಪಡೆದು ಮೋಸ ಮಾಡಿದ್ದಾರೆ. ನನ್ನ ಸಹೋದರಿಗೆ ಗಂಡ ಇಲ್ಲ, ಅವರು ಮೋಸ ಮಾಡಿದ್ದಾರೆ. ನನ್ನ ಸಾವಿಗೆ ತಮ್ಮ ಜೋಬಿ ಆಂಥೋನಿ ಮತ್ತು ಆತನ ಪತ್ನಿ ಶರ್ಮಿಳಾ ಕಾರಣ. ಅವರಿಗೆ ಶಿಕ್ಷೆ ಕೊಡಿಸಿ" ಎಂದು ವಿಡಿಯೋದಲ್ಲಿ ಹೇಳಿ ನೇಣಿಗೆ ಶರಣದಾಗಿದ್ದಾರೆ.

ಜೋಶಿ ಆಂಥೋನಿ ಸಾವಿನ ವಿಚಾರ ತಿಳಿದು ತಮ್ಮ ಜೋಬಿ ಆಂಥೋನಿ ಹಾಗೂ ಈತನ ಪತ್ನಿ ಶರ್ಮಿಳಾ ಅಲಿಯಾಸಿ ಸ್ವಾತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜೋಬಿ ಹಾಗೂ ಶರ್ಮಿಳಾ ಐಪಿಎಲ್ ಹಾಗೂ ಆನ್ ಲೈನ್ ಗೇಮ್‌ನಲ್ಲಿ ಲಕ್ಷಾಂತರ ಸಾಲ ಮಾಡಿಕೊಂಡಿದ್ದರು. ಸಾಲಗಾರರು ಪ್ರತಿ ನಿತ್ಯ ಮನೆಯ ಬಳಿ ಬಂದು ದುಡ್ಡು ಕೇಳುತ್ತಿದ್ದರು. ಇದರಿಂದ ಮನನೊಂದ ಜೋಷಿ ಆಂಥೋನಿ ಸೋಮವಾರ ಮೈಸೂರು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇಂದು (ಫೆ.18) ಜೋಬಿ ಹಾಗೂ ಶರ್ಮಿಳಾ ವಿಜಯನಗರದ ಕ್ರೀಡಾ ಮೈದಾನದ ಬಳಿ ನೇಣಿಗೆ ಶರಣಾಗಿದ್ದಾರೆ.

## ವಾಲ್ಮೀಕಿ ಹೆಸರಲ್ಲಿ ಮೆಡಿಕಲ್ ಕಾಲೇಜು: ಸಿಎಂ ಸಹಮತ

**ಬೆಂಗಳೂರು:** ಮಹರ್ಷಿ ವಾಲ್ಮೀಕಿ ಹೆಸರಿನಲ್ಲಿ ಸಮುದಾಯಕ್ಕೆ ಬೆಂಗಳೂರಿನ ಹೊರ ವಲಯದಲ್ಲಿ ಒಂದು ಮೆಡಿಕಲ್ ಕಾಲೇಜು, ಇಂಜಿನಿಯರಿಂಗ್ ಕಾಲೇಜು ಹಾಗೂ ನರ್ಸಿಂಗ್ ಕಾಲೇಜು ಸ್ಥಾಪನೆಗೆ ಮುಂದಿನ ಬಜೆಟ್ ನಲ್ಲಿ ಘೋಷಣೆ ಮಾಡಬೇಕು ಎಂದು ವಾಲ್ಮೀಕಿ ಸಮುದಾಯದ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿತು.

ಮಾಜಿ ಸಂಸದರಾದ ವಿ.ಎಸ್. ಉಗ್ರಪ್ಪ ನೇತೃತ್ವದಲ್ಲಿ ಮುಖ್ಯಮಂತ್ರಿಗಳ ನಿವಾಸ ಕಾವೇರಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ನಿಯೋಗ, ಟಿ.ಎಸ್.ಪಿ ಹಣ ದುರುಪಯೋಗವಾಗುವುದನ್ನು ತಡೆಯಬೇಕು. ಹಿಂದುಳಿದ ಆಯೋಗವು ನೀಡಿರುವ ಜಾತಿ ಗಣತಿ ವರದಿಯನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ನಿಯೋಗವು ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿತು.

ನಕಲಿ ಜಾತಿ ಪ್ರಮಾಣ ಪತ್ರ ಹಾವಳಿಗೆ ಕಡಿವಾಣ ಹಾಕಬೇಕು. ನಕಲಿ ಜಾತಿ ಪ್ರಮಾಣ ಪತ್ರ ನೀಡುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಇಡೀ ಉತ್ತರ ಕರ್ನಾಟಕದಲ್ಲಿ ನಕಲಿ ಜಾತಿ ಪ್ರಮಾಣ ಪತ್ರದ ಹಾವಳಿ ಹೆಚ್ಚಾಗಿದೆ.

ತಕ್ಷಣ ಈ ಸಮಸ್ಯೆ ಬಗೆಹರಿಸಲಯ ಸೂಕ್ತ ಕ್ರಮ ಕೈಗೊಂಡು ಈ ಬಗ್ಗೆ ಒಂದು ಆದೇಶ ಹೊರಡಿಸಬೇಕು ಎಂದು ಆಗ್ರಹಿಸಲಾಯಿತು.ಎಸ್ಸಿ. ಎಸ್ಟಿ. ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ



ಖಎಕ/ಖಿಖಕ ಹಣ ಮೀಸಲಿಡಬೇಕು. ಆ ಹಣವನ್ನು ಆಯಾ ಸಮುದಾಯಗಳಿಗೆ ಮಾತ್ರ ಬಳಸಬೇಕು ಎಂದು ಆಗ್ರಹಿಸಿದ ನಿಯೋಗ, ಪ್ರತಿವರ್ಷ ಖಎಕ/ಖಿಖಕಯಲ್ಲಿ 1000 ಕೋಟಿ ರೂ. ಪರಿಶಿಷ್ಟ ಪಂಗಡದ ಮಕ್ಕಳ ಶಿಕ್ಷಣಕ್ಕೆ ಮಾತ್ರ ಮೀಸಲಿಡಬೇಕು. ಮೀಸಲಾತಿ ಭಿಕ್ಷೆಯಲ್ಲ, ಅದು ನಮ್ಮ ಸಂವಿಧಾನಿಕ ಹಕ್ಕು. ಹೀಗಾಗಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿತು.

ಎಸ್.ಟಿ. ಜನಾಂಗ ಹೆಚ್ಚಿರುವ ಜಿಲ್ಲೆಗಳಲ್ಲಿ ಕೆಐಎಡಿಬಿಯಿಂದ ವಾಲ್ಮೀಕಿ ಕೈಗಾರಿಕಾ ಪ್ರದೇಶ ನಿರ್ಮಿಸಿ, 50 ಜನಗಳಿಗೆ ತಲಾ 2 ಎಕರೆ ಕೈಗಾರಿಕೆ ಸ್ಥಾಪನೆಗೆ ಅವಕಾಶ ನೀಡಿ, 10 ಕೋಟಿ ರೂ. ಶ್ಯೂರಿಟಿಯೊಂದಿಗೆ ನೀಡಬೇಕು. ಜೊತೆಗೆ ಒಂದು ಹಂತದ ವರೆಗೆ ಆ ಜಮೀನು ಪರಭಾರೆಗೆ ಅವಕಾಶ ನೀಡದೆ ಸರ್ಕಾರದ ಹೆಸರಿನಲ್ಲಿ ಇಟ್ಟುಕೊಂಡು ಅವರ ಆರ್ಥಿಕ ಅಭಿವೃದ್ಧಿಗೆ ಒತ್ತಾಸೆಯಾಗಿ ನಿಲ್ಲಬೇಕು ಎಂದು ಆಗ್ರಹಿಸಿದರು.

ಎಸ್ಟಿ ಸಮುದಾಯದ ಜನರಿಗೆ ಕನಿಷ್ಠ 50 ಕ್ಷೇತ್ರದಲ್ಲಿ 100 ಎಕರೆ ಕೃಷಿ ಭೂಮಿ ನೀಡಿ, ವಾಲ್ಮೀಕಿ ಕೃಷಿ ಕೇಂದ್ರ ಎಂದು ನಾಮಕರಣ ಮಾಡಬೇಕು. ಆ ಮೂಲಕ ಕೃಷಿ ಕ್ಷೇತ್ರದಲ್ಲಿ ತೊಡಗಿಸಿಕೊಂಡಿರುವ ಕೂಲಿ ಕಾರ್ಮಿಕರ, ಬಡ ರೈತರ ಉತ್ತೇಜನಕ್ಕೆ ಸಹಕಾರಿಯಾಗಿ ಸರ್ಕಾರ ಸಹಾಯಧನ ನೀಡಬೇಕು ಎಂದು ಆಗ್ರಹಿಸಿದರು.

ನಿಯೋಗದ ಮನವಿ ಆಲಿಸಿದ ಮುಖ್ಯಮಂತ್ರಿಗಳು ಈ ಬಗ್ಗೆ ಪರಿಶೀಲನೆ ನಡೆಸಿ ಪರಿಶಿಷ್ಟ ಪಂಗಡದ ಸಮುದಾಯಗಳ ಅಭಿವೃದ್ಧಿಗೆ ಆದ್ಯತೆ ನೀಡುವುದಾಗಿ ಭರವಸೆ ನೀಡಿದರು.

ನಿಯೋಗದಲ್ಲಿ ಕರ್ನಾಟಕ ರಾಜ್ಯ ವಾಲ್ಮೀಕಿ ಸಮಾಜದ ಸಮಾನ ಮನಸ್ಕರ ವೇದಿಕೆಯ ಕಾರ್ಯಾಧ್ಯಕ್ಷರಾದ ಎಂ. ನರಸಿಂಹಯ್ಯ, ಖಜಾಂಚಿ ಈ. ರಾಜಪ್ಪ, ಉಪಾಧ್ಯಕ್ಷರಾದ ರೇವತಿ ಭೀಮಪುತ್ರಿ, ರಾಜಣ್ಣ ಟಿ. ಚಿತ್ರದುರ್ಗ, ಅನಸೂಯ ಕೆಂಪನಹಳ್ಳಿ, ಪ್ರಧಾನ ಕಾರ್ಯದರ್ಶಿಗಳಾದ ಸಿಂಗಾಪುರ ವೆಂಕಟೇಶ್, ರಮೇಶ್ ಹಿರೇಜಂಬೂರು, ಜಿ. ನಾಗರಾಜು ಗಾಣದಹುಣಸೆ, ಕಾರ್ಯದರ್ಶಿಗಳಾದ ತುಳಸೀರಾಮ್ ಟಿ.ಆರ್, ಸಂಘಟನಾ ಕಾರ್ಯದರ್ಶಿ ರವಿಚಂದ್ರ ಮತ್ತಿತರರು ಉಪಸ್ಥಿತರಿದ್ದರು.

## ಜಿ.ಪಂ, ತಾ.ಪಂ ಚುನಾವಣೆಗೆ ಕೊನೆಗೂ ಕೂಡಿ ಬಂತು ಮುಹೂರ್ತ

**ಬೆಂಗಳೂರು:** ಮೂರು ವರ್ಷಗಳಾದರೂ ನಡೆಯದೇ ಇರುವ ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆಗೆ ಕೊನೆಗೂ ಮುಹೂರ್ತ ಕೂಡಿ ಬಂದಿದೆ.

ಮೇ ತಿಂಗಳ ಬಳಿಕ ಅಂದರೆ ಜೂನ್ ತಿಂಗಳಲ್ಲಿ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಚುನಾವಣೆ ನಡೆಯೋದು ಬಹುತೇಕ ಖಚಿತವಾಗಿದೆ. ಮೇ ತಿಂಗಳ ಅಂತ್ಯದೊಳಗೆ ಚುನಾವಣಾ ಆಯೋಗಕ್ಕೆ ಸರ್ಕಾರ ಮೀಸಲಾತಿ ಪಟ್ಟಿ ಸಲ್ಲಿಸಲಿದ್ದು, ಈ ಬಗ್ಗೆನಿನ್ನೆ ಹೈಕೋರ್ಟ್ ಗೆ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಸ್ಪಷ್ಟನೆ ಕೊಟ್ಟಿದ್ದಾರೆ ರಾಜ್ಯ ಚುನಾವಣಾ ಆಯೋಗ ಸಲ್ಲಿಸಿದ್ದ ನ್ಯಾಯಾಂಗ ನಿಂದನೆ ಅರ್ಜಿ ವಿಚಾರಣೆಯನ್ನ ನಿನ್ನೆ ಹೈಕೋರ್ಟ್ ನಡೆಸಿತ್ತು. ಸರ್ಕಾರ ಮೀಸಲಾತಿ ಪಟ್ಟಿ ಕೊಟ್ಟರೆ ವೇಳಾಪಟ್ಟಿ ಪ್ರಕಟಿಸಲಾಗುತ್ತದೆ ಎಂದು ಚುನಾವಣಾ ಆಯೋಗ ಪರ ವಕೀಲ ಪಣೀಂದ್ರ ಹೈಕೋರ್ಟ್ ಗೆ ತಿಳಿಸಿದ್ದರು. ಈ ವೇಳೆ ಮೇ ತಿಂಗಳ ಅಂತ್ಯದಲ್ಲಿ ಮೀಸಲಾತಿ ಪಟ್ಟಿ ನೀಡುತ್ತೇವೆ. ಮೇ ತಿಂಗಳ ಬಳಿಕ ಚುನಾವಣಾ ನಡೆಸುವುದಾಗಿ ಅಡ್ವೋಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ತಿಳಿಸಿದ್ದರು.




**ಭಾರತ ರತ್ನ ಮಾಜಿ ಪ್ರಧಾನ ಮಂತ್ರಿ ಶ್ರೀ ಅಟಲ್ ಬಿಹಾರಿ ವಾಜಪೇಯಿ ರವರ ಜನ್ಮ ಶತಮಾನೋತ್ಸವ ಅಭಿಯಾನದ ಅಂಗವಾಗಿ ಅವರ ಜೊತೆ ಕೆಲಸ ನಿರ್ವಹಿಸಿರುವ ಹಾಗೂ ಹಿರಿಯ ಕಾರ್ಯಕರ್ತರಾದ ಶ್ರೀಮತಿ ಸರೋಜಿನಿ ಮುತ್ತಣ್ಣ ರವರ ಜಯನಗರದ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಮತ್ತು ಮುಖಂಡರು ಭೇಟಿ ನೀಡಿತು. ಅಲ್ಲಿ ಅಟಲ್‌ಜೀ ಅವರ ಒಡನಾಟ ಸಂಬಂಧಿತ ಮಾಹಿತಿ ಸಂಗ್ರಹಿಸಿದರು. ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಹಾಗೂ ಶಾಸಕ ಸಿ.ಕೆ ರಾಮಮೂರ್ತಿ, ಶಾಸಕ ಉದಯ ಗರುಡಾಚಾರ್, ಅಟಲ್ ಜನ್ಮ ಶತಮಾನೋತ್ಸವ ಅಭಿಯಾನದ ರಾಜ್ಯ ಸಂಚಾಲಕ ಜಗದೀಶ್ ಹಿರೇಮನಿ, ರಾಜ್ಯ ಸಮಿತಿ ಸದಸ್ಯ ಸದಾಶಿವ್ ಮತ್ತು ಪಕ್ಷದ ಮುಖಂಡರು ಭಾಗವಹಿಸಿದ್ದರು.**

## ಅಮೆರಿಕದಲಿ 14 ಮಂದಿ ಬಲಿ

**ವಾಷಿಂಗ್ಟನ್:** ಚಳಿ ಮತ್ತು ಬಿರುಗಾಳಿಗೆ ಅಮೆರಿಕದಲ್ಲಿ 14 ಮಂದಿ ಮೃತಪಟ್ಟಿದ್ದಾರೆ. ಬಿರುಗಾಳಿ-ಬಲದ ಗಾಳಿ ಮತ್ತು ಕಟುವಾದ ಶೀತದ ತಾಪಮಾನವು ಅಮೆರಿಕಾದಾದ್ಯಂತ ಆವರಿಸಿದೆ.

ರಾಷ್ಟ್ರೀಯ ಹವಾಮಾನ ಸೇವೆ ಮೊಂಟಾನಾ ಮತ್ತು ಉತ್ತರ ಡಕೋಟಾದಲ್ಲಿ ದಾಖಲೆಯ ಶೀತ ವನ್ನು ಉಂಟುಮಾಡುತ್ತದೆ ಎಂದು ಎಚ್ಚರಿಸಿದೆ. ಕೆಂಟುಕಿಯಲ್ಲಿ ಸಾವಿನ ಸಂಖ್ಯೆ ಈಗ 12 ಕ್ಕೆ ಏರಿದೆ ಎಂದು ಕೆಂಟುಕಿ ಗವರ್ನರ್ ಆಂಡಿ ಬೆಶಿಯರ್ ಸಾಮಾಜಿಕ ಮಾಧ್ಯಮದ ಪೋಸ್ಟ್‌ನಲ್ಲಿ ಹೇಳಿದ್ದರೆ, ಪಶ್ಚಿಮ ವರ್ಜೀನಿಯಾ ಗವರ್ನರ್ ಪ್ಯಾಟ್ರಿಕ್ ಮೊರಿಸೆ ಅವರು ತಮ್ಮ ರಾಜ್ಯದಲ್ಲಿಹವಾಮಾನದಿಂದ ಕನಿಷ್ಠ ಒಂದು ಸಾವನ್ನು ಕಂಡಿದೆ ಎಂದು ಮಾಹಿತಿ ನೀಡಿದ್ದಾರೆ.

ಮಾತ್ರವಲ್ಲ, ಮತ್ತಷ್ಟು ಪ್ರವಾಹವನ್ನು ನಿರೀಕ್ಷಿಸಲಾಗಿದೆ ಎಂದು ಅವರು ಎಚ್ಚರಿಸಿದರು. ಇದಲ್ಲದೆ, ಜಾರ್ಜಿಯಾದ ದಕ್ಷಿಣ ನಗರವಾದ ಅಟ್ಲಾಂಟಾದಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ. ಮನೆಯ ಮೇಲೆ ಅತ್ಯಂತ ದೊಡ್ಡ ಮರವೊಂದು ಬಿದ್ದಿದ್ದರಿಂದ ವ್ಯಕ್ತಿ ಸಾವನ್ನಪ್ಪಿದ್ದಾನೆ ಎಂದು ಅಗ್ನಿಶಾಮಕ ಅಧಿಕಾರಿ ಸ್ಕಾಟ್ ಪೊವೆಲ್ ಸ್ಥಳೀಯ ಮಾಧ್ಯಮಗಳಿಗೆ ತಿಳಿಸಿದ್ದಾರೆ.

## ಇಬ್ಬರ ಸಾವು

**ಬೆಂಗಳೂರು:** ಕಂಠಪೂರ್ತಿ ಕುಡಿದು ವೇಗವಾಗಿ ಚಾಲನೆ ಮಾಡಿದ ಕಾರು ಮರಕ್ಕೆ ಡಿಕ್ಕಿ ಹೊಡೆದು ಇಬ್ಬರು ಕಾಲೇಜು ವಿದ್ಯಾರ್ಥಿಗಳು ಸ್ಥಳದಲ್ಲೇ ಸಾವನ್ನಪ್ಪಿ, ಮತ್ತಿಬ್ಬರು ಗಾಯಗೊಂಡ ಘಟನೆ ಬನ್ನೇರುಘಟ್ಟ ಸಮೀಪದ ರಾಗಿಹಳ್ಳಿ ಬಳಿ ನಡೆದಿದೆ.ಗೊಟ್ಟಿಗೆರೆಯ ಖಾಸಗಿ ಕಾಲೇಜಿನ ವಿದ್ಯಾರ್ಥಿಗಳಾದ ಕೇರಳ ಮೂಲದ ಸಹಾಹುಕ್ (28) ಮತ್ತು ಅರ್ಶು (23) ಮೃತಪಟ್ಟವರು. ದೇವ ನಾರಾಯಣ (23) ಮತ್ತು ಸಾಹಿಲ್ (23) ನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಚಿಂತಾಜನಕವಾಗಿದೆ. ಸಿಫ್ಟ್ ಕಾರಿನಲ್ಲಿ ಅತಿವೇಗವಾಗಿ ಬಂದು ಕಾರು ಚಾಲಕನ ನಿಯಂತ್ರಣ ತಪ್ಪಿ ಮರಕ್ಕೆ ಡಿಕ್ಕಿಯಾಗಿದೆ. ಅಪಘಾತದ ರಭಸಕ್ಕೆ ಕಾರು ಸಂಪೂರ್ಣ ಛಿದ್ರ ಛಿದ್ರವಾಗಿದೆ. ನಾಲ್ವರು ಕಳೆದ ರಾತ್ರಿ ಪಾರ್ಟಿ ಮಾಡಿ ಕಂಠಪೂರ್ತಿ ಮದ್ಯ ಸೇವನೆ ಮಾಡಿದ್ದರು ಎಂದು ತಿಳಿದು ಬಂದಿದೆ. ಸುದ್ದಿ ತಿಳಿದ ತಕ್ಷಣವೇ ಸ್ಥಳಕ್ಕೆ ಬನ್ನೇರುಘಟ್ಟ ಪೊಲೀಸರು ಭೇಟಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿ ಮುಂದಿನ ತನಿಖೆಯನ್ನು ಕೈಗೊಂಡಿದ್ದಾರೆ.

## ನೀವೇ ಹೊಣೆ: ಸಿಎಂ

ರಾಜ್ಯದಲ್ಲಿ ಕಿಂಚಿತ್ತೂ ಅವಕಾಶ ಇಲ್ಲ ಅಧಿಕಾರಿಗಳು ಸ್ಪಷ್ಟವಾಗಿ ಅರ್ಥ ಮಾಡಿಕೊಂಡು ಕೆಲಸ ಮಾಡಿ. ಅನಧಿಕೃತ ಬಡಾವಣೆಗಳಿಂದ ಕಂದಾಯ ಬರುತ್ತಿಲ್ಲ, ಪರಿಣಾಮ ಜನರಿಗೆ ನಾಗರಿಕ ಸವಲತ್ತುಗಳೂ ಸಿಗುತ್ತಿಲ್ಲ, ಸ್ಥಳೀಯ ಸಂಸ್ಥೆಗಳಿಗೆ ಆದಾಯವೂ ಬಂದ್ ಆಗಿದೆ. ಇವೆಲ್ಲಾ ಅನಾನುಕೂಲಗಳಿಗೂ ಅಂತ್ಯ ಹಾಡಬೇಕಿದೆ. ಕಂದಾಯ ಕಟ್ಟದಿರುವುದರಿಂದ ಇಷ್ಟೆಲ್ಲಾ ಸಮಸ್ಯೆಗಳಾಗಿವೆ. ಒಂದು ಬಾರಿ, ಇದೊಂದು ಬಾರಿ ಬಿ ಖಾತಾ ಕೊಟ್ಟು ಅಂತ್ಯ ಹಾಡುತ್ತೇವೆ ಎಂದು ತಿಳಿಸಿದರು.

ನಿಮಗೆ 3 ತಿಂಗಳು ಮಾತ್ರ ಟೈಮ್ ಕೊಟ್ಟಿದ್ದೀವಿ. ಇಷ್ಟರೊಳಗೆ ಅಭಿಯಾನ ನಡೆಸಿ ಪೂರ್ಣಗೊಳಿಸಿ. ಯಾವುದೇ ರಾಜಿ ಇಲ್ಲ. ಅಧಿಕಾರಿಗಳು ರಾಜಿ ಮಾಡಿಕೊಂಡರೆ ಸಹಿಸಲ್ಲ. ಅನಧಿಕೃತ ಬಡಾವಣೆಗಳು ಮತ್ತೆ ತಲೆ ಎತ್ತಿದರೆ ಜಿಲ್ಲಾಧಿಕಾರಿ, ಮುಖ್ಯ ಅಧಿಕಾರಿ, ನಗರ ಯೋಜನಾ ಅಧಿಕಾರಿಗಳು ಜವಾಬ್ದಾರಿ ಆಗುತ್ತೀರಿ ನಿಮ್ಮ ಮೇಲೆ ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ಸೂಚಿಸಿದರು.ಮಧ್ಯವರ್ತಿಗಳಿಗೆ, ಬ್ರೋಕರ್‌ಗಳಿಗೆ ತಕ್ಷಣ ಗೇಟ್‌ಪಾಸ್ ಕೊಡಿ. ಇದನ್ನು ಮತ್ತು ಕಾಯ್ದೆಯ ದೂರದೃಷ್ಟಿಯನ್ನು ನೀವೆಲ್ಲರೂ ಸ್ಪಷ್ಟವಾಗಿ, ಖಚಿತವಾಗಿ ಅರ್ಥ ಮಾಡಿಕೊಳ್ಳಿ. ರಾಜ್ಯದಲ್ಲಿ ಇನ್ನೆಲ್ಲೂ ಅನಧಿಕೃತ ಬಡಾವಣೆಗಳು, ರೆವಿನ್ಯೂ ಬಡಾವಣೆಗಳು ತಲೆ ಎತ್ತಬಾರದು. ಅನಧಿಕೃತ , ರೆವಿನ್ಯೂ ಬಡಾವಣೆಗಳಲ್ಲಿ ಸೈಟು, ಮನೆ ಕಟ್ಟಿರುವವರಿಗೆ ತೊಂದರೆ ಆಗಬಾರದು. ಒಟ್ಟಾರೆಯಾಗಿ ಬಡವರು, ಮಧ್ಯಮ ವರ್ಗದವರಿಗೆ ಅನುಕೂಲ ಮಾಡಿಕೊಡಲು ಒನ್ ಟೈಮ್ ಸಲ್ಯೂಷನ್ ಕೊಟ್ಟಿದ್ದೀವಿ. 3 ತಿಂಗಳಲ್ಲಿ ಎಲ್ಲರಿಗೂ ಖಾತಾ ನೀಡಿ ಅಂತ್ಯ ಹಾಡಿ. ನಾನು ಮತ್ತು ಸಂಬಂಧಪಟ್ಟ ಎಲ್ಲಾ ಸಚಿವರೂ ಸ್ಪಷ್ಟಪಡಿಸಿದ್ದೇವೆ . ಹೊಸ ಗೊಂದಲಗಳಿಗೆ ಅವಕಾಶ ಮಾಡಿಕೊಡಬೇಡಿ. ಬಿ ಖಾತಾ ಇವತ್ತಿನಿಂದಲೇ ಕೊಡಲು ಶುರು ಮಾಡಿ ಎಂದು ಸಿಎಂ ಸೂಚಿಸಿದರು.

## ಜ್ಞಾನೇಶ್ ಕುಮಾರ್ ನೇಮಕ

ಮುಂಬರುವ ಪ್ರಮುಖ ಚುನಾವಣೆಗಳು: ಜ್ಞಾನೇಶ್ ಕುಮಾರ್ 26ನೇ ಸಿಇಸಿಯಾಗಿ ತಮ್ಮ ಅಧಿಕಾರವಧಿಯಲ್ಲಿ ಈ ವರ್ಷಾಂತ್ಯದಲ್ಲಿ ನಡೆಯಲಿರುವ ಬಿಹಾರ ವಿಧಾನಸಭೆ ಚುನಾವಣೆ ಮತ್ತು 2026ರಲ್ಲಿ ನಡೆಯಲಿರುವ ಕೇರಳ, ಪುದುಚೇರಿ ವಿಧಾನಸಭೆ ಚುನಾವಣೆಗಳ ಮೇಲ್ವಿಚಾರಣೆ ನಡೆಸಲಿದ್ದಾರೆ. ಅದೇ ರೀತಿ, 2026ರಲ್ಲಿ ತಮಿಳುನಾಡು ಮತ್ತು ಪಶ್ಚಿಮ ಬಂಗಾಳ ರಾಜ್ಯಗಳಿಗೂ ವಿಧಾನಸಭೆ ಚುನಾವಣೆ ನಡೆಯಲಿದ್ದು, ಅದರ ಮೇಲ್ವಿಚಾರಣೆಯನ್ನೂ ಮಾಡಲಿದ್ದಾರೆ. ಈ ಹಿಂದೆ, ಗೃಹ ಸಚಿವಾಲಯದಲ್ಲಿ ಕಾರ್ಯ ನಿರ್ವಹಿಸಿದ್ದ ಜ್ಞಾನೇಶ್ ಕುಮಾರ್, ಜಮ್ಮು ಕಾಶ್ಮೀರಕ್ಕೆ ನೀಡಲಾದ ವಿಶೇಷ ಸಾಂವಿಧಾನಿಕ ಸ್ಥಾನಮಾನ 370ನೇ ವಿಧಿ ರದ್ದಾದ ನಂತರದ ನಿರ್ಧಾರಗಳನ್ನು ಅನುಷ್ಠಾನಕ್ಕೆ ತರುವಲ್ಲಿ ಗುರುತರ ಪಾತ್ರ ನಿರ್ವಹಿಸಿದ್ದರು. ಮಾರ್ಚ್ 15, 2024ರಲ್ಲಿ ಇವರು ಕೇಂದ್ರ ಚುನಾವಣಾ ಆಯೋಗದಲ್ಲಿ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ್ದರು.

## ಸಾಂಪ್ರದಾಯಿಕ ಸ್ವಾಗತ

ಬರಮಾಡಿಕೊಂಡರು. ಇದೇ ವೇಳೆ ಕತಾರ್ ನಿಯೋಗವನ್ನು ರಾಷ್ಟ್ರಪತಿ ಮುರ್ಮು ಸ್ವಾಗತಿಸಿದರು.ಭಾರತ ಭೇಟಿಗಾಗಿ ಸೋಮವಾರ ತಮೀಮ್ ಬಿನ್ ಹಮದ್ ಅಲ್ ಥಾನಿ ಭಾರತಕ್ಕೆ ಆಗಮಿಸಿದರು.

ಪ್ರಧಾನಿ ನರೇಂದ್ರ ಮೋದಿ ಖುದ್ದು ವಿಮಾನ ನಿಲ್ದಾಣಕ್ಕೆ ತೆರಳಿ ಬರಮಾಡಿಕೊಂಡು ವಿಶೇಷ ಗೌರವ ನೀಡಿದ್ದರು. ಈ ಸಂದರ್ಭದಲ್ಲಿ ವಿದೇಶಾಂಗ ಸಚಿವ ಜೈಶಂಕರ್ ಕೂಡ ಉಪಸ್ಥಿತರಿದ್ದರು. "ಕತಾರ್ ದೊರೆ ತನ್ನ ಸಹೋದರನಿದ್ದಂತೆ" ಎಂದು ಹೇಳಿದ್ದ ಪ್ರಧಾನಿ ಮೋದಿ, ಅವರ ಭೇಟಿ ಫಲಪ್ರದವಾಗಲಿ ಎಂದು ಹಾರೈಸಿದ್ದರು.

ಕತಾರ್ ದೊರೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಚರ್ಚೆ ನಡೆಸಲಿದ್ದು, ಅವರಿಗಾಗಿ ವಿಶೇಷ ಔತಣಕೂಟವನ್ನು ಆಯೋಜಿಸಿದ್ದಾರೆ. ಇದಾದ ಬಳಿಕ ಪ್ರಧಾನಿ ಮೋದಿ ಅವರೊಂದಿಗೆ ಹಲವು ವಿಚಾರಗಳ ಕುರಿತು ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ.

ಕತಾರ್ ದೊರೆಯೊಂದಿಗೆ ಸಚಿವರು, ಹಿರಿಯ ಅಧಿಕಾರಿಗಳು ಹಾಗೂ ಉದ್ಯಮಿಗಳ ನಿಯೋಗವೂ ಆಗಮಿಸಿದೆ. ಈ ಮೊದಲು 2015ರ ಮಾರ್ಚ್‌ನಲ್ಲಿ ಕತಾರ್ ದೊರೆ ಭಾರತಕ್ಕೆ ಭೇಟಿ ನೀಡಿದ್ದರು. ಇದು ಅವರ ಎರಡನೇ ಭೇಟಿಯಾಗಿದೆ. ಕತಾರ್‌ನಲ್ಲಿ ಭಾರತದ ಅತೀ ದೊಡ್ಡ ವಲಸಿಗ ಸಮುದಾಯವಿದೆ. ಕತಾರ್ ಅಭಿವೃದ್ಧಿ ಮತ್ತು ಪ್ರಗತಿಯಲ್ಲಿ ಅವರ ಸಕಾರಾತ್ಮಕ ಕೊಡುಗೆಗಳು ಮೆಚ್ಚುಗೆ ಪಡೆದಿವೆ. ಈ ಭೇಟಿಯು ಎರಡು ದೇಶಗಳ ನಡುವಿನ ಹಲವು ಅಭಿವೃದ್ಧಿ ಪಾಲುದಾರಿಕೆಗೆ ಮತ್ತಷ್ಟು ಉತ್ತೇಜನ ನೀಡಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ವಿಮಾನ ಪಲ್ಟಿ; ಗಾಯ

ಡೆಲ್ಟಾ ಏರ್‌ಲೈನ್ಸ್‌ಗೆ ಸೇರಿದ 4819 ಸಂಖ್ಯೆಯ ವಿಮಾನದಲ್ಲಿ 76 ಮಂದಿ ಪ್ರಯಾಣಿಕರು ಮತ್ತು 4 ಮಂದಿ ಸಿಬ್ಬಂದಿ ಇದ್ದರು. ನಿಲ್ದಾಣದಲ್ಲಿ ವಿಮಾನ ಮಧ್ಯಾಹ್ನ 2.15ಕ್ಕೆ ಲ್ಯಾಂಡಿಂಗ್ ಆಗುತ್ತಿದ್ದಂತೆ ಈ ಅಪಘಾತ ಸಂಭವಿಸಿದೆ. ಮಗು ಸೇರಿದಂತೆ 18 ಮಂದಿಯ ಸ್ಥಿತಿ ಗಂಭೀರವಾಗಿದೆ. ಆದರೆ, ಅವರಿಗೆ ಯಾವುದೇ ಜೀವ ಭಯವಿಲ್ಲ" ಎಂದು ತಿಳಿಸಿದೆ.

ಅಮೆರಿಕದ ಮಿನ್ನೆಪೊಲಿಸ್‌ನಿಂದ ಆಗಮಿಸಿದ ಈ ವಿಮಾನ ಲ್ಯಾಂಡಿಂಗ್ ಆಗುತ್ತಿದ್ದಂತೆ ಏರ್‌ಪೋರ್ಟ್‌ನಲ್ಲಿ ಬಲವಾಗಿ ಗಾಳಿ ಬೀಸುತ್ತಿತ್ತು. ಜೊತೆಗೆ, ಹಿಮವೂ ಇದ್ದ ಹಿನ್ನೆಲೆಯಲ್ಲಿ ರನ್‌ವೇಯಲ್ಲಿ ಜಾರಿದೆ. ತಕ್ಷಣವೇ ತುರ್ತು ಸೇವಾ ಸಿಬ್ಬಂದಿ ರಕ್ಷಣೆಗೆ ಧಾವಿಸಿದ್ದಾರೆ. ಅಗ್ನಿ ಅನಾಹುತ ಸಂಭವಿಸದಂತೆ ಸುತ್ತಮುತ್ತಲ ಪ್ರದೇಶಕ್ಕೆ ಸೂಕ್ತ ವ್ಯವಸ್ಥೆ ಮಾಡಿದ್ದರು ಎಂದು ನಿಲ್ದಾಣದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಕೆನಡಾ ನಿರ್ಮಿತ ಎಂಬ್ರೇರ್ ಸಿಆರ್‌ಜೆ-900 ಜೆಟ್ ಅನ್ನು ಡೆಲ್ಟಾ ಅಂಗಸಂಸ್ಥೆ ಎಂಡೀವರ್ ಏರ್ ನಿರ್ವಹಿಸುತ್ತಿದೆ. ಈ ಅನಾಹುತದ ಕುರಿತು ಕೆನಡಾದ ಸಾರಿಗೆ ಭದ್ರತಾ ಮಂಡಳಿ ತನಿಖೆ ನಡೆಸಲಿದೆ. ದೊಡ್ಡ ಪ್ರಮಾಣದಲ್ಲಿ ಪ್ರಯಾಣಿಕರು ಇರುವಾಗ ಜೆಟ್ ಜಾರಿರುವುದು ಸಾಮಾನ್ಯ ಅಪಘಾತವಲ್ಲ ಎಂದು ತಿಳಿಸಿದ್ದು, ತನಿಖೆಗೆ ಅಮೆರಿಕ ಫೆಡರಲ್ ವೈಮಾನಿಕ ಆಡಳಿತ ಮತ್ತು ರಾಷ್ಟ್ರೀಯ ಸಾರಿಗೆ ಭದ್ರತಾ ಮಂಡಳಿ ನೆರವು ನೀಡಲಿದೆ ಎಂದು ಫ್ಲೋರಿಡಾದ ಸೇಂಟ್ ಪಿಟರ್‌ಬರ್ಗ್‌ನಲ್ಲಿರುವ ವೈಮಾನಿಕ ಸುರಕ್ಷಾ ಸಮಾಲೋಚನ ಘಟಕದ ಸಿಇಓ ಜಾನ್ ಕಾಗ್ಸ್ ತಿಳಿಸಿದ್ದಾರೆ.

ಲ್ಯಾಂಡಿಂಗ್ ವೇಳೆ ಗಂಟೆಗೆ 61 ಕಿಲೋ ಮೀಟರ್ ವೇಗದಲ್ಲಿ ಗಾಳಿ ಬೀಸುತ್ತಿತ್ತು. ಇಂತಹ ಗಾಳಿಯನ್ನು ನಿರ್ವಹಿಸುವಂತೆ ವಿಮಾನವನ್ನು ವಿನ್ಯಾಸ ಮಾಡಲಾಗಿದೆ. ಪೈಲಟ್ ಕೂಡ ಸಾಕಷ್ಟು ತರಬೇತಿ ಹೊಂದಿದವರು. ಹೀಗಿದ್ದೂ ಅಪಘಾತ ಪ್ರಶ್ನೆ ಮೂಡಿಸಿದೆ ಎಂದಿದ್ದಾರೆ.

ಡೆಲ್ಟಾ ಸಿಓಓ ಎಡ್ ಬ್ಯಾಸ್ಟಿನ್ ಅವರು ಅಪಘಾತಕ್ಕೆ ವಿಷಾದ ವ್ಯಕ್ತಪಡಿಸಿ, ಘಟನೆಯ ವಿವರಗಳನ್ನು ದೃಢಪಡಿಸುವ ಕೆಲಸ ನಿರ್ವಹಿಸುತ್ತಿದ್ದೇವೆ. ಶೀಘ್ರದಲ್ಲೇ ಸಂಸ್ಥೆಯ ಜಾಲತಾಣದಲ್ಲಿ ಮಾಹಿತಿ ಹಂಚಿಕೊಳ್ಳುತ್ತೇವೆ ಎಂದು ಹೇಳಿದ್ದಾರೆ.

## ಯಾರೂ ಹೇಳುತ್ತಿಲ್ಲ

ರಾಜಕೀಯ ಕ್ಷೇತ್ರದಲ್ಲಿ ಇವೆಲ್ಲಾ ಇದ್ದೇ ಇರುತ್ತೆ. ಎಲ್ಲರಿಗೂ ಆಸೆ ಆಕಾಂಕ್ಷೆ ಇರುತ್ತೆ. ನನಗೆ ಸಿಎಂ ಆಗುವ ಆಕಾಂಕ್ಷೆ ಇಲ್ಲ ಎಂದರು. ಕಾಂಗ್ರೆಸ್‌ನಲ್ಲಿ ಬಿರುಕಿಲ್ಲ ಪ್ರತಿಷ್ಠೆ ಇದೆ. ಬಿಜೆಪಿಯಲ್ಲಿ ಸಂಪೂರ್ಣ ಬಿರುಕು ಇದೆ. ಬಿಜೆಪಿಯಲ್ಲಿ ಪ್ರತಿಷ್ಠೆ ಭಿನ್ನಾಭಿಪ್ರಾಯವಿಲ್ಲ. ಆದರೆ ಸಂಪೂರ್ಣ ಬಿರುಕಿದೆ. ಬಿಜೆಪಿಯಲ್ಲಿರುವ ರಾಜಕಾರಣವೇ ಬೇರೆ. ನಮ್ಮಲ್ಲಿ ಎಲ್ಲರು ಚೆನ್ನಾಗಿದ್ದೇವೆ ಶಾಸಕರಲ್ಲಿ ವೈಮನಸ್ಸು ಇಲ್ಲ. ಕೆಲ ವಿಷಯದಲ್ಲಿ ಪ್ರತಿಷ್ಠೆಯಿಂದ ಏನೇನೋ ಮಾತನಾಡುತ್ತಿದ್ದಾರೆ ಎಂದರು.

## ಸಬ್‌ಇನ್ಸ್‌ಪೆಕ್ಟರ್ ವರ್ಗಾವಣೆ

ಗಲಾಟೆ ತಡೆಯಲು ಅವಕಾಶ ಇದ್ದರೂ ಕೂಡ ನಿರ್ಲಕ್ಷ್ಯ ಮಾಡಿದ ಆರೋಪ ಕೇಳಿ ಬಂದಿತ್ತು. ಹಾಗೆಯೇ ಆಕ್ಷೇಪಾರ್ಹ ಪೋಸ್ಟ್ ಹಾಕಿದ್ದ ಆರೋಪಿ ಸತೀಶ್ ಆಲಿಯಾಸ್ ಪಾಂಡುರಂಗನನ್ನ ರೂಪೇಶ್ ಠಾಣೆಗೆ ಕರೆತಂದಿದ್ದರು. ಆದರೆ ಬೆಳಿಗ್ಗೆಯಿಂದ ಸಂಜೆಯವರೆಗೂ ಸತೀಶ್ ಮೇಲೆ ಯಾವುದೇ ಕ್ರಮ ಕೈಗೊಳ್ಳಲು ಇನ್ಸ್ ಪೆಕ್ಟರ್ ರೂಪೇಶ್ ಹಿಂದೇಟು ಹಾಕಿದ್ದು, ಇದರಿಂದ ಮುಂದೆ ಮುಸ್ಲಿಂ ಯುವಕರ ಗುಂಪು ಜಮಾಯಿಸಿ ಗಲಾಟೆ ನಡೆಸಿತ್ತು. ಈ ಮಧ್ಯೆ ರೂಪೇಶ್ ಅವರ ವಿರುದ್ಧ ಹಲವು ಆರೋಪಗಳು ಕೇಳಿ ಬಂದ ಬೆನ್ನಲ್ಲೆ ವರ್ಗಾವಣೆ ಮಾಡಲಾಗಿದೆ.

## ಸಾಬೀತು ಪಡಿಸುತ್ತೇವೆ : ರೇವಣ್ಣ

ಮಾಡಿಕೊಳ್ಳಲಾಗುತ್ತಿದೆ. ಕಡೆಯಲ್ಲಿ ಜಿಲ್ಲಾ ಮಟ್ಟದಲ್ಲೂ ಬೃಹತ್ ಸಮ್ಮೇಳನ ನಡೆಸಲು ಚಿಂತನೆ ಮಾಡಲಾಗಿದೆ ಎಂದು ತಿಳಿಸಿದರು.

ಅಧಿಕಾರ ಶಾಶ್ವತ ಅಲ್ಲ, ಅಧಿಕಾರ ಸಿಕ್ಕಾಗ ಮಾಡಿದ ಕೆಲಸಗಳೇ ಶಾಶ್ವತ ಎಂದ ಅವರು, ಅದೇ ರೀತಿ ಅಧಿಕಾರಿಗಳೂ ಸಹ ನಡೆದುಕೊಳ್ಳಬೇಕು. ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರಿಗೆ ಕಿರು ಕುಳ ನೀಡುವುದಾಗಲೀ, ದಬ್ಬಾಳಿಕೆ ಮಾಡುವುದಾಗಲಿ ಮಾಡಿದರೆ ಯಾವುದೇ ಕಾರಣಕ್ಕೂ ಸಹಿಸಲ್ಲ ಎಂದು ಎಚ್ಚರಿಕೆ ನೀಡಿದರು.ಕೇಂದ್ರ ಬಜೆಟ್‌ನಲ್ಲಿ ಹಾಸನ ನಗರದ ಮೇಲೇತುವೆ ಸೇರಿದಂತೆ ಜಿಲ್ಲೆಗೆ ಯಾವುದೇ ಹೊಸ ಯೋಜನೆ ಘೋಷಣೆ ಹಾಗೂ ಅನುದಾನ ಬಿಡುಗಡೆ ಮಾಡದೇ ಇರುವ ಬಗ್ಗೆ ಕೇಂದ್ರ ಪ್ರಶ್ನೆಗೆ ಪೈಓವರ್ ಸೇರಿದಂತೆ ಜಿಲ್ಲೆಗೆ ಕೇಂದ್ರದಿಂದ ಏನೆಲ್ಲಾ ಕೆಲಸ ಕಾರ್ಯ ಆಗಬೇಕು ಎಂಬುದರ ಬಗ್ಗೆ ಈಗಾಗಲೇ ದೇವೇಗೌಡರು, ಕುಮಾರಸ್ವಾಮಿ ಅವರ ಗಮನಕ್ಕೆ ತಂದಿದ್ದು, ಅವರ ಶಕ್ತಿ ಬಳಸಿಕೊಂಡು ಜಿಲ್ಲೆಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸುತ್ತೇವೆ ಎಂದರು.

ಶೀಘ್ರ ಮಂಡನೆಯಾಗುವ ರಾಜ್ಯ ಬಜೆಟ್ ಬಗ್ಗೆ ಪ್ರತಿಕ್ರಿಯಿಸಿದ ರೇವಣ್ಣ, ಕಾದು ನೋಡಿ ನಂತರ ಮಾತನಾಡುವೆ. ಜಿಲ್ಲೆಗೆ ಅನ್ಯಾಯ ಆದರೆ ಸಹಿಸುವುದಿಲ್ಲ. ಅಭಿವೃದ್ಧಿ ವಿಷಯದಲ್ಲಿ ರಾಜಕಾರಣ ಮಾಡುವುದಕ್ಕೆ ಆಸ್ಪದ ನೀಡಲ್ಲ. ಅನ್ಯಾಯ ಆದರೆ ಹೋರಾಟ ಮಾಡುತ್ತೇವೆ ಎಂದರು. ಈ ವೇಳೆ ಜೆಡಿಎಸ್ ಮುಖಂಡರಾದ ಲಾಳನಕೆರೆ ಯೋಗೇಶ್, ಕುಡುಕುಂದಿ ಕುಮಾರ್, ರಾಜೇಶ್ ಧರ್ಮಶೇಖರ್, ನಗರಸಭೆ ಸದಸ್ಯರಾದ ಸುಜಾತ ರಮೇಶ್ ಮೊದಲಾದವರಿದ್ದರು.

## ಆರೋಪಿ ರಿಲೀಸ್

ಆರೋಪಿ ಸತೀಶ್ ಗೆ ಮೈಸೂರು ಕೋರ್ಟ್ ನಿನ್ನೆ ಷರತ್ತುಬದ್ಧ ಜಾಮೀನು ನೀಡಿದೆ. 2 ನೇ ಅಪರ ಸಿವಿಲ್ ಕೋರ್ಟ್ ಈ ಆದೇಶ ಪ್ರಕಟಿಸಿದೆ. ಫೆಬ್ರವರಿ 10 ರಂದು ಅವಹೇಳನಕಾರಿ ಪೋಸ್ಟ್ ಹಾಕಿದ್ದ ವಿಚಾರಕ್ಕೆ ಸಂಬಂಧಿಸಿದಂತೆ ಉದಯಗಿರಿ ಪೊಲೀಸ್ ಠಾಣೆ ಮೇಲೆ ಗುಂಪು ಕಲ್ಲು ತೂರಾಟ ನಡೆದಿತ್ತು. ಘಟನೆಯಲ್ಲಿ 14 ಮಂದಿ ಪೊಲೀಸರು ಗಾಯಗೊಂಡಿದ್ದರು ಹಾಗೂ ಹಲವು ಪೊಲೀಸ್ ವಾಹನಗಳು ಜಖಂ ಆಗಿದ್ದವು. ಪೊಲೀಸರು ಹಲವು ಎಫ್ ಐ ಆರ್ ದಾಖಲಿಸಿ ಹಲವರನ್ನ ಬಂಧಿಸಿದ್ದಾರೆ.

## ರೈತ ಮುಖಂಡರ ಜೊತೆ ಸಭೆ

"ನಾನು ಜಗಜಿತ್ ಸಿಂಗ್ ದಲ್ಲೆವಾಲ್ ಅವರ ಬಳಿ ಉಪವಾಸ ಸತ್ಯಾಗ್ರಹವನ್ನು ನಿಲ್ಲಿಸುವಂತೆ ಮನವಿ ಮಾಡಿದ್ದೇನೆ. ಅವರು ಕೂಡ ಅದಕ್ಕೆ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ್ದಾರೆ. ಶೀಘ್ರದಲ್ಲೇ ಆ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದಾಗಿಯೂ ಹೇಳಿದ್ದಾರೆ.

ನಾವು ರೈತರನ್ನು ಮತ್ತೊಮ್ಮೆ ಭೇಟಿ ಮಾಡಲು ನಿರ್ಧರಿಸಿದ್ದೇವೆ. ಫೆಬ್ರವರಿ 22ರಂದು ನಾವು ಮತ್ತೆ ರೈತರು ಮತ್ತು ರೈತ ಸಂಘಗಳೊಂದಿಗೆ ಚರ್ಚೆ ನಡೆಸುತ್ತೇವೆ. ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರ ನೇತೃತ್ವದಲ್ಲಿ ನಾವು ಮತ್ತೆ ಚರ್ಚೆಗಳನ್ನು ನಡೆಸುತ್ತೇವೆ" ಎಂದು ಪ್ರಲ್ಹಾದ್ ಜೋಶಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.

ಬೆಳೆ ಖರೀದಿ ಮತ್ತು ಕೃಷಿ ವಲಯಕ್ಕೆ ಬಜೆಟ್ ವೆಚ್ಚದಲ್ಲಿ ಹೆಚ್ಚಳದ ಬಗ್ಗೆ ಮೋದಿ ಸರ್ಕಾರ ರೈತರ ಕಲ್ಯಾಣಕ್ಕಾಗಿ ತೆಗೆದುಕೊಂಡ ಕ್ರಮಗಳ ಕುರಿತು ವಿವರಗಳನ್ನು ಹಂಚಿಕೊಂಡಿದ್ದೇನೆ ಎಂದು ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಬೆಳೆಗಳ ಮೇಲೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಕಾನೂನುಬದ್ಧ ಖಾತರಿ ಸೇರಿದಂತೆ ರೈತರ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಪ್ರತಿಭಟನೆಯ ಹಿನ್ನೆಲೆಯಲ್ಲಿ ಈ ಸಭೆ ನಡೆಯಿತು. ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ) ಮತ್ತು ಕಿಸಾನ್ ಮಜ್ದೂರ್ ಮೋರ್ಚಾದ 28 ಸದಸ್ಯರ ನಿಯೋಗವು ರೈತರ ಪ್ರತಿಭಟನೆಯ ಪರವಾಗಿ ನೇತೃತ್ವ ವಹಿಸಿದ್ದ ಸಭೆಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ನೇತೃತ್ವದ ತಂಡ ಪಾಲ್ಗೊಂಡು ಅವರ ಸಮಸ್ಯೆಗಳನ್ನು ಆಲಿಸಿತು.

# ಮಹದೇಶ್ವರಬೆಟ್ಟದಲ್ಲಿ ಶಿವರಾತ್ರಿ, ಯುಗಾದಿ ಜಾತ್ರೆ: ಸಕಲ ಸಿದ್ದತೆಗೆ ಸೂಚನೆ

**ಚಾಮರಾಜನಗರ:** ಜಿಲ್ಲೆಯ ಪ್ರಸಿದ್ದ ಯಾತ್ರಾಕ್ಷೇತ್ರ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಮಹಾಶಿವರಾತ್ರಿ ಹಾಗೂ ಯುಗಾದಿ ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತಾಧಿಗಳ ಸೌಲಭ್ಯಕ್ಕೆ ಅಗತ್ಯ ಸಿದ್ದತೆಯನ್ನು ಸಮರ್ಪಕವಾಗಿ ಕೈಗೊಳ್ಳಬೇಕೆಂದು ಶಾಸಕರಾದ ಎಂ.ಆರ್. ಮಂಜುನಾಥ್, ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಸೂಚಿಸಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಹದೇಶ್ವರ ಬೆಟ್ಟದಲ್ಲಿ ನಡೆಯಲಿರುವ ಮಹಾಶಿವರಾತ್ರಿ ಹಾಗೂ ಯುಗಾದಿ ಜಾತ್ರಾ ಮಹೋತ್ಸವ ಸಂಬಂಧ ನಡೆದ ಪೂರ್ವಸಿದ್ದತಾ ಸಭೆಯಲ್ಲಿ ಶಾಸಕರಾದ ಎಂ.ಆರ್. ಮಂಜುನಾಥ್ ಅವರು ವರ್ಚುವಲ್ ಮೂಲಕ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಭಾಗವಹಿಸುವ ಮೂಲಕ ಸಭೆ ನಡೆಸಿದರು.

ಮಲೆಮಹದೇಶ್ವರ ಕ್ಷೇತ್ರಕ್ಕೆ ನಾಡಿನ ನಾನಾ ಭಾಗಗಳಲ್ಲದೇ ಹೊರ ರಾಜ್ಯಗಳಿಂದಲೂ ಲಕ್ಷಾಂತರ ಮಂದಿ ಜಾತ್ರೆಗೆ ಆಗಮಿಸಲಿದ್ದಾರೆ. ಭಕ್ತಾಧಿಗಳಿಗೆ ಕುಡಿಯುವ ನೀರು, ನೆರಳಿನ ವ್ಯವಸ್ಥೆ, ವಾಸ್ತವ್ಯ, ದಾಸೋಹ, ದೇವರ ದರ್ಶನಕ್ಕೆ ಅಗತ್ಯ ಸೌಕರ್ಯಗಳನ್ನು ಯಾವುದೇ ತೊಂದರೆಯಿಲ್ಲದೆ ಕಲ್ಪಿಸಬೇಕು. ಹೀಗಾಗಿ ಎಲ್ಲ ಸಿದ್ದತೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕ್ಷೇತ್ರದಲ್ಲಿ ಶುದ್ದ ಕುಡಿಯುವ ನೀರಿನ ಘಟಕಗಳಿವೆ. ಹೆಚ್ಚು ಸಂಖ್ಯೆಯಲ್ಲಿ ಭಕ್ತಾಧಿಗಳು ಬರಲಿರುವುದರಿಂದ ಕುಡಿಯುವ ನೀರಿನ ಮಾದರಿಗಳನ್ನು ಪರೀಕ್ಷಿಸಬೇಕು. ಪಾದಯಾತ್ರೆಯಲ್ಲಿ ಸಹ ಸಾಕಷ್ಟು ಮಂದಿ ಕ್ಷೇತ್ರಕ್ಕೆ ಆಗಮಿಸುವುದರಿಂದ ಮಾರ್ಗ ಮಧ್ಯೆ ಕುಡಿಯುವ ನೀರಿನ ವ್ಯವಸ್ಥೆ ಇರಬೇಕು. ಮಹದೇಶ್ವರ ಬೆಟ್ಟದಲ್ಲಿ ಪ್ಲಾಸ್ಟಿಕ್ ನಿಷೇಧ ಇರುವುದರಿಂದ ಪ್ಲಾಸ್ಟಿಕ್ ಬಾಟಲ್, ಪ್ಲಾಸ್ಟಿಕ್ ವಸ್ತುಗಳನ್ನು, ಇತರೆ ತ್ಯಾಜ್ಯಗಳನ್ನು ಕೊಂಡೊಯ್ಯದಂತೆ ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕು ಎಂದರು.

ಜಾತ್ರಾ ಸಂದರ್ಭದಲ್ಲಿ ನೆರಳಿನ ವ್ಯವಸ್ಥೆ ಇರಬೇಕು. ಶೌಚಾಲಯ, ಸ್ನಾನದ ವ್ಯವಸ್ಥೆಗಳು ಸಮರ್ಪಕವಾಗಿ ಇರಬೇಕು. ಕ್ಷೇತ್ರದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಬೇಕು. ಆರೋಗ್ಯ ಇಲಾಖೆಯಿಂದ ಹೆಚ್ಚುವರಿ ವೈದ್ಯರು, ಸಿಬ್ಬಂದಿ ನಿಯೋಜಿಸಿ ಅಗತ್ಯ ಔಷಧಗಳನ್ನು ದಾಸ್ತಾನು ಮಾಡಿಕೊಳ್ಳಬೇಕು. ಪಾದಯಾತ್ರಿಗಳು ಬರುವ ಹಿನ್ನೆಲೆಯಲ್ಲಿ ಕೌದಳ್ಳಿ ಆರೋಗ್ಯ ಕೇಂದ್ರದಲ್ಲಿಯೂ ಪೂರ್ಣ ಅವಧಿಯಲ್ಲಿ ವೈದ್ಯಕೀಯ ಸೇವೆ ಲಭ್ಯವಾಗಬೇಕು. ಪಾದಯಾತ್ರೆಯಲ್ಲಿ ಕ್ಷೇತ್ರಕ್ಕೆ ಆಗಮಿಸುವ ಭಕ್ತಾಧಿಗಳಿಗೆ ನೇರವಾಗಿ ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಬೇಕು ಎಂದು ಸೂಚಿಸಿದರು.

ಜಾತ್ರಾ ಅವಧಿಯಲ್ಲಿ ಹೆಚ್ಚು ಸಂಖ್ಯೆಯಲ್ಲಿ ಬಸ್ಸುಗಳು ಕಾರ್ಯಾಚರಣೆಯಾಗಲಿ. ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಮತ್ತು ತಮಿಳುನಾಡು ರಾಜ್ಯದ ಭಾಗಗಳಿಂದಲೂ ಅಲ್ಲಿನ ಸರ್ಕಾರಿ ಬಸ್ಸುಗಳು ಹೆಚ್ಚು ನಿಯೋಜನೆಯಾಗಲಿ. ನಿಗಮದ ಅಧಿಕಾರಿಗಳನ್ನು ಕ್ಷೇತ್ರಕ್ಕೆ ನಿಯೋಜಿಸಿ ಜನರ ಅಗತ್ಯಕ್ಕೆ ತಕ್ಕಂತೆ ಬಸ್ಸುಗಳನ್ನು ಮುಂಚಿತವಾಗಿಯೇ ಹಾಕುವ ವ್ಯವಸ್ಥೆಯಾಗಲಿ. ಎಲ್ಲಿಯೇ ಆಗಲಿ ಬಸ್ಸುಗಳಿಗೆ



ಯಾವುದೇ ಕೊರತೆಯಾಗದಿರಲಿ ಎಂದು ಶಾಸಕರು ಹಾಗೂ ಜಿಲ್ಲಾಧಿಕಾರಿಗಳು ತಿಳಿಸಿದರು.

ಕ್ಷೇತ್ರದಲ್ಲಿ ಭಕ್ತಾಧಿಗಳಿಗೆ, ಗಣ್ಯರು ಸೇರಿದಂತೆ ಎಲ್ಲರಿಗೂ ಮಾಹಿತಿ ನೀಡುವ ಕಾರ್ಯ ಸಮರ್ಪಕವಾಗಿರಬೇಕು. ಯಾವುದೇ ಗೊಂದಲಗಳಿಗೆ ಅವಕಾಶವಾಗದಂತೆ ಸಿಬ್ಬಂದಿ ನಿಯೋಜನೆಯಾಗಬೇಕು. ದೇವಾಲಯದಲ್ಲಿ ನಡೆಯುವ ವಿಶೇಷ ಪೂಜೆ ಇನ್ನಿತರ ಕೈಂಕರ್ಯಗಳ ಬಗ್ಗೆ ಎಲ್.ಇ.ಡಿ ಮೂಲಕ ವೀಕ್ಷಣೆಗೆ ಅವಕಾಶವಾಗಬೇಕು. ನಿಗದಿಪಡಿಸಿದ ಸ್ಥಳಗಳಲ್ಲಿ ವಾಹನ ನಿಲುಗಡೆಯಾಗಬೇಕು. ಸುಸೂತ್ರವಾಗಿ ಜಾತ್ರೆ ನಡೆಯಲು ಪೂರಕವಾಗಿರುವ ಎಲ್ಲ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಬೇಕೆಂದು ಶಾಸಕರಾದ ಎಂ.ಆರ್. ಮಂಜುನಾಥ್ ಹಾಗೂ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದರು.

ಜಿಲ್ಲಾಪಂಚಾಯತ್‌ಮುಖ್ಯಕಾರ್ಯನಿರ್ವಾಹಕಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಕುಡಿಯುವ ನೀರಿನ ವ್ಯವಸ್ಥೆಗಳನ್ನು ಪರಿಶೀಲಿಸಲಾಗುವುದು. ಶುದ್ದ ಕುಡಿಯುವ ನೀರು ಸಂಗ್ರಹಣೆ ಪೂರೈಕೆ ಬಗ್ಗೆ ಖಾತರಿ ಪಡಿಸಿಕೊಳ್ಳಲಾಗುವುದು. ಗ್ರಾಮ ಪಂಚಾಯಿತಿ ವತಿಯಿಂದ ಜಾತ್ರಾ ದಿನಗಳಲ್ಲಿ ಹೆಚ್ಚಿನ ಸಿಬ್ಬಂದಿ ನಿಯೋಜಿಸಲಾಗುವುದು ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ. ಕವಿತಾ ಅವರು ಮಾತನಾಡಿ ಶಿವರಾತ್ರಿ ಜಾತ್ರೆಗೆ ಅಗತ್ಯ ಪೊಲೀಸ್ ಬಂದೋ ಬಸ್ತ್ ಮಾಡಲಾಗುತ್ತಿದೆ. ಇಬ್ಬರು ಡಿವೈಎಸ್‌ಪಿ, 9 ಇನ್ಸ್ಪೆಕ್ಟರ್, 32 ಸಬ್‌ಇನ್ಸ್ಪೆಕ್ಟರ್, 67 ಸಹಾಯಕ ಸಬ್‌ಇನ್ಸ್ ಪೆಕ್ಟರ್, 421 ಕಾನ್ಸ್ ಟೇಬಲ್, 98 ಮಹಿಳಾ ಪೊಲೀಸರು, 401 ಗೃಹ ರಕ್ಷಕರು, ಡಿಆರ್ 4 ತುಕಡಿ, ಕೆಎಸ್‌ಆರ್‌ಪಿ 1 ತುಕಡಿಯನ್ನು ನಿಯೋಜಿಸಲಾಗಿದೆ ಎಂದು ತಿಳಿಸಿದರು.

ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಾ ಎ.ಇ ರಘು ಅವರು ಮಾತನಾಡಿ ಮಹಾಶಿವರಾತ್ರಿ ಜಾತ್ರೆ ಫೆಬ್ರವರಿ 25 ರಿಂದ ಆರಂಭವಾಗಲಿದ್ದು ಮಾರ್ಚ್ 1 ರವರೆಗೆ ನಡೆಯಲಿದೆ. ಯುಗಾದಿ ಜಾತ್ರಾ ಮಹೋತ್ಸವ ಮಾರ್ಚ್ 27 ರಿಂದ 30 ರವರೆಗೆ ಜರುಗಲಿದೆ. ಜಾತ್ರಾ ಅವಧಿಯಲ್ಲಿ ಭಕ್ತಾಧಿಗಳಿಗೆ ವಿಶೇಷ ದಾಸೋಹ ಇರಲಿದ್ದು, ಬೆಳಿಗ್ಗೆ 7 ರಿಂದ ಮಧ್ಯರಾತ್ರಿ 12 ಗಂಟೆಯವರೆಗೂ ನಿರಂತರವಾಗಿ ನಡೆಯಲಿದೆ. ಭಕ್ತಾಧಿಗಳ ಮೂಲ ಸೌಕರ್ಯಕ್ಕಾಗಿ ಎಲ್ಲ ವ್ಯವಸ್ಥೆಗಳಿಗೆ ಕ್ರಮ ವಹಿಸಲಾಗಿದೆ ಎಂದರು.

ಸಾಲೂರು ಬೃಹನ್ಮಾಠದ ಡಾ. ಶಾಂತಮಲ್ಲಿಕಾರ್ಜುನಸ್ವಾಮಿ, ಮಲೈ ಮಹದೇಶ್ವರಸ್ವಾಮಿ ಕ್ಷೇತ್ರಾಭಿವೃದ್ದಿ ಪ್ರಾಧಿಕಾರದ ನಾಮನಿರ್ದೇಶಿತ ಸದಸ್ಯರಾದ ಗಂಗನತಿಮ್ಮಯ್ಯ, ಭಾಗ್ಯಮ್ಮ, ಮಹದೇವಪ್ಪ.ಬಿ, ಮರಿಸ್ವಾಮಿ, ಆರ್.ಎಸ್. ಕುಮಾರ ವಿಜಯ, ದೇವಾಲಯದ ಅರ್ಚಕರಾದ ಕೆ.ವಿ. ಮಾದೇಶ್, ಮಲೆಮಹದೇಶ್ವರ ವನ್ಯಜೀವಿ ವಿಭಾಗದ ಅಧಿಕಾರಿ ಪರಮೇಶ್ವರ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ರಾಷ್ಟ್ರೀಯ ಭಾವೈಕ್ಯತೆ ಶಿಬಿರ




**ಶಿಡ್ಲಘಟ್ಟ:** ಬೆಂಗಳೂರಿನ ಯಲಹಂಕದ ಶೇಷಾದ್ರಿಪುರಂನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕೇಂದ್ರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ, ಬೆಂಗಳೂರಿನ ಪ್ರಾದೇಶಿಕ ನಿರ್ದೇಶನಾಲಯ ಕಚೇರಿಯ ಆಶ್ರಯದಲ್ಲಿ ರಾಷ್ಟ್ರೀಯ ಭಾವೈಕ್ಯತೆ ಶಿಬಿರ ನಡೆಯುತ್ತಿದ್ದು ಭಾಗವಹಿಸಿದ ಶಿಬಿರದಲ್ಲಿ ಶಿಬಿರಾರ್ಥಿಗಳು ರೇಷ್ಮೆಗೂಡು ಮಾರುಕಟ್ಟೆಗೆ ಭೇಟಿ ನೀಡಿದ್ದರು.

ವಿವಿಧ ರಾಜ್ಯಗಳ ಎನ್ನೆಸ್ಸೆಸ್ ವಿದ್ಯಾರ್ಥಿಗಳ ತಂಡವು ನಗರದ ರೇಷ್ಮೆಗೂಡು ಮಾರುಕಟ್ಟೆಗೆ ಶೈಕ್ಷಣಿಕ ಅಧ್ಯಯನ ಪ್ರವಾಸಕ್ಕೆಂದು ಆಗಮಿಸಿದ್ದು ಮಾರುಕಟ್ಟೆಯಲ್ಲಿನ ರೇಷ್ಮೆಗೂಡು ವಹಿವಾಟು, ರೇಷ್ಮೆ ಕೃಷಿ ಮತ್ತು ರೇಷ್ಮೆ ಉದ್ದಿಮೆ ಕುರಿತು ಸ್ಥಳೀಯ ಅಧಿಕಾರಿಗಳಿಂದ ಮಾಹಿತಿ ಪಡೆದರು.

ರೇಷ್ಮೆಗೂಡು ಮಾರುಕಟ್ಟೆಗೆ ಭೇಟಿ ನೀಡಿದ ವಿದ್ಯಾರ್ಥಿಗಳಿಗೆ ರೇಷ್ಮೆಗೂಡು ಮಾರುಕಟ್ಟೆಯ ಸಹಾಯಕ ನಿರ್ದೇಶಕ ಕೆ.ತಿಮ್ಮರಾಜು ಮಾಹಿತಿ ನೀಡಿ ರೇಷ್ಮೆಗೂಡು ಮಾರುಕಟ್ಟೆಗೆ ಅವಕವಾಗುವ ರೇಷ್ಮೆಗೂಡಿನ ಪ್ರಮಾಣಕ್ಕೆ ತಕ್ಕಂತೆ ಜಾಲರಿಗಳನ್ನು ನೀಡಿ ಪ್ರತಿ ಲಾಟಿಗೂ ಸರಣಿ ಕ್ರಮ ಸಂಖ್ಯೆಯನ್ನು ನೀಡಲಾಗುತ್ತದೆ,ಇ–ಹರಾಜು ಮೂಲಕ ರೀಲರುಗಳು ತಮಗೆ ಬೇಕಾಗುವ ರೇಷ್ಮೆಗೂಡಿಗೆ ನೀಡುತ್ತಾರೆ ಯಾರು ಹೆಚ್ಚಿನ ಬಿಡ್ ನೀಡುತ್ತಾರೋ ಅವರಿಗೆ ಆ ರೇಷ್ಮೆಗೂಡು ಲಾಟು ಸಿಗುತ್ತದೆ ಎಂದರು.

ಒಂದೊಮ್ಮೆ ರೈತನಿಗೆ ಬಿಡ್ ಬೆಲೆ ಸಮಾಧಾನ ತರದಿದ್ದಲ್ಲಿ ಬಿಡ್‌ನ್ನು ರದ್ದುಪಡಿಸುವ ಅವಕಾಶ ರೈತನಿಗಿದೆ. ಮೊದಲ ಸುತ್ತಿನ ಬಿಡ್‌ನಲ್ಲಿ ಹರಾಜು ಆಗದೆ ಉಳಿದ ರೇಷ್ಮೆಗೂಡಿಗೆ
ಎರಡನೇಬಾರಿಹರಾಜಿಗೆಅವಕಾಶನೀಡಲಾಗುವುದು. ಎರಡು ಬಾರಿಯ ಹರಾಜಿನಲ್ಲಿಯೂ ರೈತನಿಗೆ ಬೆಲೆ ಸಮಾಧಾನವಾಗದಿದ್ದಲ್ಲಿ ಮರು ದಿನದ ಬಿಡ್‌ಗೆ ಕಾಯಬಹುದು ಅಥವಾ ಬೇರೆ ರೇಷ್ಮೆಗೂಡು ಮಾರುಕಟ್ಟೆಗೆ ಹೋಗಲು ಮುಕ್ತ ಅವಕಾಶ ನೀಡಲಾಗುವುದು.

ಹರಾಜು ಪ್ರಕ್ರಿಯೆ ಮುಗಿದಾದ ಮೇಲೆ ಎಲೆಕ್ಟ್ರಾನಿಕ್ಸ್ ಯಂತ್ರಗಳಲ್ಲಿ ರೇಷ್ಮೆಗೂಡಿನ ನಿಖರ ತೂಕ ಮಾಡಲಾಗುತ್ತದೆ,ಹರಾಜು ಮುಗಿದ 24 ಗಂಟೆಗಳ ಒಳಗೆ ರೈತರ ಬ್ಯಾಂಕ್ ಖಾತೆಗೆ ಹಣ ಜಮೆ ಮಾಡಲಾಗುವುದು, ಇದರಿಂದ ರೇಷ್ಮೆಗೂಡಿನ ಗುಣಮಟ್ಟದ ಆಧಾರದಲ್ಲಿ ರೈತರಿಗೆ ಬೆಲೆ ಸಿಗಲಿದೆ ತಮಗೆ ಬೇಕಾದ ಗುಣಮಟ್ಟದ ರೇಷ್ಮೆಗೂಡು ರೀಲರುಗಳಿಗೆ ಸಿಗಲಿದೆ ಎಂದು ರೇಷ್ಮೆ ಕೃಷಿ ಮತ್ತು ರೇಷ್ಮೆ ಉದ್ದಿಮೆಯ ಸ್ಥಿತಿ ಗತಿಗಳ ಬಗ್ಗೆ ವಿವರ ನೀಡಿದರು.

ದೇಶದಲ್ಲಿಯೆ ಅತಿ ಹೆಚ್ಚು ರೇಷ್ಮೆಗೂಡು ವಹಿವಾಟು ನಡೆಯುವ ಮಾರುಕಟ್ಟೆ ಇದಾಗಿದ್ದು ಇಲ್ಲಿ ಇ.ಹರಾಜು ವ್ಯವಸ್ಥೆಯನ್ನು ಅಳವಡಿಸಿದೆ
ಗ್ರಾಮೀಣ ಉದ್ಯಮಶೀಲತೆ, ಆರ್ಥಿಕ ಸಬಲೀಕರಣ ಮತ್ತು ಶಾಶ್ವತ ಜೀವನೋಪಾಯದ ಮಹತ್ವವನ್ನು ತಿಳಿಸಿಕೊಡುವ ಹಿನ್ನಲೆಲ್ಲಿ ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಅಸ್ಸಾಂ, ದೆಹಲಿ, ಒಡಿಶಾ, ತಮಿಳುನಾಡು, ಕೇರಳ, ಮಹಾರಾಷ್ಟ್ರ, ತೆಲಂಗಾಣ, ಕರ್ನಾಟಕ, ರಾಜಸ್ಥಾನ ಸೇರಿದಂತೆ 11 ರಾಜ್ಯಗಳಿಂದ 250 ಸ್ವಯಂಸೇವಕರು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಪ್ರಾದೇಶಿಕ ಕೇಂದ್ರ ಕಚೇರಿಯ ನಿರ್ದೇಶಕರಾದ ಡಿ.ಕಾರ್ತಿಕೇಯನ್, ಯುವ ಅಧಿಕಾರಿ ವೈ.ಎನ್.ಉಪ್ಪಿನ್, ಶಿಭಿರಾಧಿಕಾರಿ ಕೇಶವಾರ ನವೀನ್, ರೇಷ್ಮೆಗೂಡು ಮಾರುಕಟ್ಟೆಯ ಶ್ರೀನಿವಾಸ್ ಹಾಜರಿದ್ದರು

# ಬಿದಲೂರು ಕ್ಲಸ್ಟರ್ ಹಂತದ ಎಫ್‌ಎಲ್‌ಎನ್ ಕಲಿಕಾ ಹಬ್ಬ

**ದೇವನಹಳ್ಳಿ:** ವಿದ್ಯಾರ್ಥಿಗಳು ಶಿಕ್ಷಕರ ಮೇಲೆ ವಿನಃಕಾರಣ ಪೋಷಕರಿಗೆ ಯಾವುದೇ ರೀತಿಯ ದೂರಗಳನ್ನು ಹೇಳುವುದನ್ನ ನಿಲ್ಲಿಸಬೇಕು, ಶಾಲೆಯಲ್ಲಿ ಪ್ರತಿಯೊಂದು ಉತ್ಸಾಹದಿಂದ ಕಲಿಯಬೇಕು ಆಗಮಾತ್ರ ಕಲಿಕಾ ಹಬ್ಬವಾಗುವುದು,ಮಕ್ಕಳ ಕಲಿಕೆಯಲ್ಲಿ ಶಿಕ್ಷಕರ ಪಾತ್ರ ಬಹುಮುಖ್ಯ ಅದರ ಸೂಕ್ಷ್ಮತೆಗಳನ್ನು ಅರಿತು ಕಲಿಕಾ ಮಾರ್ಗಗಳನ್ನು ಉತ್ತಮವಾಗಿ ರೂಪಿಸಿಕೊಳ್ಳಬೇಕು ಎಂದು ಬಿದಲೂರು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹಾಗೂ ಹಾಲಿ ಸದಸ್ಯರಾದ ಎಸ್ .ಪಿ ಮುನಿರಾಜು ಹೇಳಿದರು.

ತಾಲೂಕಿನ ಬಿದಲೂರು ಗ್ರಾಮ ಪಂಚಾಯತಿಯ ಸಾವಕನಹಳ್ಳಿಯ ಸರ್ಕಾರಿ ಪ್ರಾಥಮಿಕ ಪಾಠಶಾಲೆಯಲ್ಲಿ ಬಿದಲೂರು ಕ್ಲಸ್ಟರ್ ಹಂತದ "ಎಫ್‌ಎಲ್‌ಎನ್ –ಕಲಿಕಾ ಹಬ್ಬ "ವನ್ನು ಬಿದಲೂರು ಗ್ರಾಮ ಪಂಚಾಯಿತಿ ಅಧ್ಯಕ್ಷ ನಾಗರಾಜ ಮತ್ತು ಮಾಜಿ ಅಧ್ಯಕ್ಷ ಮತ್ತು ಹಾಲಿ ಸದಸ್ಯರಾದ ಎಸ್.ಪಿ .ಮುನಿರಾಜು ಉದ್ಘಾಟಿಸಿ ಮಾತನಾಡಿದರು.

ಕಲಿಕಾ ಹಬ್ಬದಲ್ಲಿ ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ಎಲ್ಲಾ ಸ್ಪರ್ಧೆಗಳಲ್ಲಿ ಸ್ಪರ್ಧಾ ಮನೋಭಾವದಿಂದ ಭಾಗವಹಿಸಬೇಕು ಆಗ ಮಾತ್ರ ವ್ಯಕ್ತಿತ್ವ ವಿಕಸನಗೊಂಡು ಸೋಲು ಗೆಲುವು ಸಮನಾಗಿ ಸ್ವೀಕರಿಸಿ ಮುಂದೆ ಬರಲು ಸಾಧ್ಯ ಹಾಗೂ ಕಲಿಕಾ ಹಬ್ಬದ ಪ್ರಯುಕ್ತ ವಿದ್ಯಾರ್ಥಿಗಳ ಪೋಷಕರಿಗಾಗಿ ಕ್ರೀಡೆಯನ್ನು ಆಯೋಜಿಸಿಲಾಗಿತ್ತು, ಕ್ರೀಡೆಯಲ್ಲಿ ವಿಜೇತರಾದಂತಹ ಪೋಷಕರಿಗೆ ಅಭಿನಂದನೆಗಳನ್ನು ತಿಳಿಸಿದರು.

ಕಲಿಕಾ ಹಬ್ಬದ ಪ್ರಯುಕ್ತ ಶಾಲೆಯ ವಿದ್ಯಾರ್ಥಿಗಳ ಪೋಷಕರಿಗೆ ಕ್ರೀಡೆಗಳನ್ನು ಆಯೋಜಿಸಲಾಗಿತ್ತು ವಿಜೇತರಾದ ಪೋಷಕರಿಗೆ ಬಹುಮಾನವನ್ನು ವಿತರಿಸಲಾಯಿತು.

ಕಲಿಕಾ ಹಬ್ಬದಲ್ಲಿ ವಿದ್ಯಾರ್ಥಿಗಳಿಗಾಗಿ ರಸಪ್ರಶ್ನೆ, ಗಟ್ಟಿಓದು, ಪೋಷಕರು ಮತ್ತು ಮಕ್ಕಳ ವೇದಿಕೆ ಕಾರ್ಯಕ್ರಮ, ಕಥೆ ಹೇಳುವುದು, ಕೈಬರಹ /



ಕ್ಯಾಲಿಗ್ರಫಿ ಸಂತೋಷದಾಯಕ ಗಣಿತ ,ಜ್ಞಾಪಕ ಪರೀಕ್ಷೆ ಸೇರಿದಂತೆ ಹಲವಾರು ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು.

ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಸ್ಪೂರ್ತಿ, ವಿಮಲಾ,ಪಿಡಿಓ ಸಿದ್ದರಾಜು, ಡಿಎಂಸಿ ಅಧ್ಯಕ್ಷರಾದ ಕಾಂಚನ, ವಿ .ಶಿವಕುಮಾರ್ ,ಸಿಆರ್ ಪಿ ಕ್ಷೇತ್ರ ಶಿಕ್ಷಣಾಧಿಕಾರಿ ಸುಮಾ, ಕ್ಷೇತ್ರ ಸಮನ್ವಯಾಧಿಕಾರಿ ಮಂಜುಳಾ ,ನಾಗರಾಜ್ .ಬಿ .ಆರ್, ಪಿ. ದೇವರಾಜು, ಮುನೀಂದ್ರ ,ಗಜೇಂದ್ರ, ಚೈತ್ರಾ ವೀರೇಗೌಡ, ಚಂದ್ರಶೇಖರ್ ,ಮಣಿ,ಜೈ ಕುಮಾರ್ ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# 10ನೇ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಗೊಳಿಸಿ



**ಮಾಗಡಿ:** ತಾಲೂಕು ಹತ್ತನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಯಶಸ್ವಿಗೊಳಿಸುವಂತೆ ಶಾಸಕ ಎಚ್.ಸಿ.ಬಾಲಕೃಷ್ಣ ಹೇಳಿದರು.

ತಾಲೋಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ಸಮ್ಮೇಳನದ ಲಾಂಛನ ಅನಾವರಣಗೊಳಿಸಿ ಮಾತನಾಡಿದ ಅವರು,ತಾಲೋಕಿನ ಮಾದಿಗೊಡ್ಡನಹಳ್ಳಿ ಗುಡ್ಡದ ರಂಗನಾಥ ಸ್ವಾಮಿ ದೇವಾಲಯದ ಆವರಣದಲ್ಲಿ ಮಾರ್ಚ್ ತಿಂಗಳಲ್ಲಿ ನೆರವೇರಲಿದೆ. ರಾಮನಗರ ಜಿಲ್ಲೆಯಾದ ಬಳಿಕ ತಾಲೋಕಿನಲ್ಲಿ 10ನೇ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿದ್ದು ಕನ್ನಡಿಗರ ಭಾಷಾಭಿಮಾನ ಮೆರೆಯಲು ನುಡಿ ಜಾತ್ರೆ ಅತ್ಯಗತ್ಯ ಹೀಗಾಗಿ ತಾಲೂಕು ಆಡಳಿತ ಸರ್ವ ರೀತಿಯಲ್ಲಿ ಸಹಕಾರ ನೀಡಲಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ನ ಅಧ್ಯಕ್ಷ ತಿ.ನಾ ಪದ್ಮನಾಭ ಮಾತನಾಡಿ ಮಾಗಡಿ ತಾಲೂಕಿನ ಸೋಲೂರು ಹಾಗೂ ಕುದೂರು ಹೋಬಳಿಯ ಗಡಿ ಭಾಗದಲ್ಲಿರುವ ಗುಡ್ಡದ ರಂಗನಾಥ ಸ್ವಾಮಿ ಬೆಟ್ಟದಲ್ಲಿ ಈ ಬಾರಿಯ ಸಮ್ಮೇಳನ ನಡೆಯುತ್ತಿದೆ. ಮುಂದಿನ ವಾರ ಸಮ್ಮೇಳನದ ಅಧ್ಯಕ್ಷರನ್ನು ಆಯ್ಕೆ ಮಾಡಲಾಗುವುದು,
ಸಮ್ಮೇಳನದ ಲಾಂಛನವನ್ನು ಬಿಡುಗಡೆ ಮಾಡಿಸುವುದು ಪ್ರತಿತಿ ಹೀಗಾಗಿ ಮಾಗಡಿ ತಾಲೂಕಿನ ವೈಶಿಷ್ಟ್ಯಗಳನ್ನು ಒಳಗೊಂಡ ಲಾಂಛನವನ್ನು ವಿನ್ಯಾಸಗೊಳಿಸಿ ತಾಲೂಕು ಆಡಳಿತದ ವತಿಯಿಂದ ಬಿಡುಗಡೆ ಮಾಡಿಸಲಾಗಿದೆ ಎಂದರು.

ಲಾಂಛನದ ವೈಶಿಷ್ಟ್ಯ ; ಸಾವನದುರ್ಗ ಬೆಟ್ಟ, ನಾಡಪ್ರಭು ಕೆಂಪೇಗೌಡರು ಹಾಗೂ ಮಾಗಡಿಯ ಐತಿಹಾಸಿಕ ಪ್ರವಾಸಿ ಕ್ಷೇತ್ರಗಳಾದ ಶ್ರೀರಂಗನಾಥ ಸ್ವಾಮಿ, ಶ್ರೀ ಸೋಮೇಶ್ವರ, ಗುಡ್ಡದರಂಗ, ತಟ್ಟೆಕೆರೆ ರಂಗನಾಥ, ಸುಗ್ಗನಹಳ್ಳಿ ಗರುಡ, ಕಲ್ಯ ಬೆಟ್ಟ, ಮಂಚನಬೆಲೆ ಜಲಾಶಯ ಹಾಗೂ ತಾಲೂಕಿನ ಸಾಹಿತ್ಯ ದಿಗ್ಗಜರದ ಹೆಚ್.ವಿ ನಂಜುಂಡಯ್ಯ, ಶಿವಕುಮಾರ ಸ್ವಾಮೀಜಿ, ಬಾಲ ಗಂಗಾಧರನಾಥ ಸ್ವಾಮೀಜಿ, ಕವಿ ಸಿದ್ದಲಿಂಗಯ್ಯ, ಸಾಲುಮರದ ತಿಮ್ಮಕ್ಕ, ಹೊನ್ನಪ್ಪ ಭಾಗವತರು, ಬೊಂಬೆ ಆಟದ ರಂಗನಾಥರ, ತಾಯಿ ಭುವನೇಶ್ವರಿಯ ಚಿತ್ರವನ್ನು ಒಳಗೊಂಡ ವಿನ್ಯಾಸಗಳು 10ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಲಾಂಛನದಲ್ಲಿ ಅಡಕವಾಗಿವೆ ಎಂದರು.

ಲಾಂಛನ ಬಿಡುಗಡೆ ವೇಳೆಯಲ್ಲಿ ತಹಶೀಲ್ದಾರ್ ಶರತ್ ಕುಮಾರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜೈಪಾಲ್, ಕಸಾಪ ಜಿಲ್ಲಾ ನಿರ್ದೇಶಕ ಎಂ.ಎಸ್.ಸಿದ್ದಲಿಂಗೇಶ್ವರ್, ಕೆಡಿಪಿ ಸದಸ್ಯ ರಾದ ಗೀತಾ, ಪ್ರಕಾಶ್, ಸಾಹಿತ್ಯ ಪರಿಷತ್ ಕಾರ್ಯದರ್ಶಿ ನಾರಾಯಣ್, ಟಿ.ಎಂ.ಶ್ರೀನಿವಾಸ್, ದೊಡ್ಡಿ ನಾಗೇಶ್ ಸೇರಿದಂತೆ ಅಧಿಕಾರಿಗಳು ಇದ್ದರು

# ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ

**ಚೇಳೂರು:** ಚೇಳೂರು ತಾಲ್ಲೂಕಿನ ಪಾಳ್ಯಕೆರೆ ಗ್ರಾಮದ ಮೂಲಕ ಹಾದು ಹೋಗಿರುವ ರಸ್ತೆ ಬದಿಗಳಲ್ಲಿರುವ ಕಟ್ಟಡಗಳ ತೆರವು ಗೊಳಿಸುವ ಕಾರ್ಯಾಚರಣೆ ನೆನಗುದಿಗೆ ಬಿದ್ದಿತ್ತು, ಇದೀಗ ಇತ್ಯಾರ್ಥವಾಗಿದೆ ಈ ರಸ್ತೆಗೆ 5 ಕೋಟಿ ವೆಚ್ಚದಲ್ಲಿ ರಸ್ತೆ ಸುಗಮ ಸಂಚಾರಕ್ಕೆ ಉತ್ತಮ ರಸ್ತೆಯನ್ನು ಮಾಡಲಾಗುತ್ತಿದೆ ಎಂದು ಬಾಗೇಪಲ್ಲಿ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ಹೇಳಿದರು.

ಸೋಮವಾರ ಪಾಳ್ಯಕೆರೆ ಗ್ರಾಮದಲ್ಲಿ 5 ಕೋಟಿ ವೆಚ್ಚದಲ್ಲಿ ರಸ್ತೆ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಪಾಳ್ಯಕೆರೆ ಗ್ರಾಮಸ್ಥರುಗಳು 20––20 ಅಡಿಗಳು ರಸ್ತೆ ಮಾಡಲು ಒಂದು ತಿಂಗಳಿಂದೆ ಸಹಮತಕ್ಕೆ ಒಪ್ಪಿದ್ದರಿಂದ ರಸ್ತೆ ಮಾಡಲು 5 ಕೋಟಿ ಹಣ ಬಂದಿದೆ. ರಸ್ತೆ ಮಧ್ಯದಿಂದ 20 ಅಡಿಗಳಿಗೆ ಕಾಮಗಾರಿ ಮಾಡುತ್ತಾರೆ ನೀವು ಅಡ್ಡಿ ಮಾಡಿದರೆ ಮಾರ್ಚಿದೊಳಗೆ ಅವರಿಗೆ ಬಿಲ್ಲು ಆಗುವುದಿಲ್ಲ ನಿಮ್ಮೂರು–ನಿಮ್ಮ ರಸ್ತೆಗೆ ಸಹಕಾರ ಕೊಡಬೇಕಾಗಿದೆ ಎಂದರು.

ಗುದ್ದಲಿ ಪೂಜೆಯಲ್ಲಿ ತಹಸೀಲ್ದಾರ್ ಶ್ರೀನಿವಾಸನಾಯುಡು ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯುಂತರ ಪ್ರದೀಪ್ ಲಾಯರ್ ಮಂಜುನಾಥರೆಡ್ಡಿ, ಹೆಚ್.ವಿ.ನಾರಾಯಣಸ್ವಾಮಿ ಚೇಳೂರು ಗ್ರಾ.ಪಂ. ಪಿಡಿಓ ಕೆ.ವೆಂಕಟಾಚಲಪತಿ ಮಾಜಿ ಅಧ್ಯಕ್ಷರಾದ ಮುದ್ದಲಪಲ್ಲಿ ಎಂ.ವಿ.ರಮೇಶ್‌ಚಂದ್ರಾರೆಡ್ಡಿ ಮಾಜಿ ಅಧ್ಯಕ್ಷ ರಾಮೋಜಿಪಲ್ಲಿ ಆರ್.ಇ.ಶ್ರೀನಿವಾಸ್ ಕಾಂಗ್ರೈ ಪಕ್ಷದ ಪಿ.ಆರ್.ಚಲಂ. ಪಾಳ್ಯಕೆರೆ ಟಿ.ಇ.ಬಾಷ. ಮ್ಯಾಕಲಪಲ್ಲಿ ಸುರೇಶ್.ಪಿ.ವಿ ವೆಂಕಟರೆಡ್ಡಿ ಬತ್ತಲವಾರಪಲ್ಲಿ ಟಿ.ಹರೀಷ್. ಇತರರು ಹಾಜರಿದ್ದರು.



# ನೌಕರರ ಸಮಸ್ಯೆ ಶೀಘ್ರ ಬಗೆಹರಿಸಬಹುದು



**ನಾಗಮಂಗಲ:** ಗ್ರಾಮ ಆಡಳಿತ ಅಧಿಕಾರಿಗಳ ಮುಷ್ಕರ ರಾಜ್ಯದಲ್ಲೇಡೆ ನಡೆಯುತ್ತಿದ್ದರು ಸರ್ಕಾರ ಇವರ ಬೇಡಿಕೆಗೆ ತಕ್ಷಣ ಸ್ಪಂದಿಸದೆ ಇರುವುದು ಜನಸಾಮಾನ್ಯರಲ್ಲಿ ತೀವ್ರ ಆಕ್ರೋಶವಾಗಿದೆ ಎಂದು ಮಾಜಿ ಶಾಸಕ ಸುರೇಶ್ ಗೌಡ ತಿಳಿಸಿದ್ದಾರೆ.

ಅವರು ನಾಗಮಂಗಲದಲ್ಲಿ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ತಾಲ್ಲೂಕು ಗ್ರಾಮ ಆಡಳಿತ ಅಧಿಕಾರಿಗಳು ನಾಗಮಂಗಲ ಪಟ್ಟಣದ ತಾಲೂಕು ಕಚೇರಿಯ ಆವರಣದಲ್ಲಿ ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರ ಪ್ರತಿಭಟನಾ ಸ್ಥಳಕ್ಕೆ ಬೇಟಿಕೊಟ್ಟು ಪ್ರತಿಭಟನಾಕಾರರ ಮನವಿಯನ್ನು ಸ್ವೀಕರಿಸಿ ಅವರು ತಮ್ಮ ಬೆಂಬಲ ವ್ಯಕ್ತ ಪಡಿಸಿದರು.

ಆಡಳಿತಾಧಿಕಾರಿಗಳು ನಮ್ಮ ಗ್ರಾಮೀಣ ಭಾಗದ ರೈತರಿಗೆ ಬೇಕಾದ ಎಲ್ಲಾ ಪ್ರಮಾಣಪತ್ರಗಳು ಸೇರಿದಂತೆ ಭೂಮಿಗೆ ಸಂಬಂಧಪಟ್ಟ ಎಲ್ಲಾ ಸೇವೆಗಳನ್ನು ರೈತರ ಮನೆ ಬಾಗಿಲಿಗೆ ಹೋಗಿ ಸಲ್ಲಿಸುತ್ತಿದ್ದಾರೆ. ಇವರು ಸಮರ್ಪಕವಾಗಿ ಕರ್ತವ್ಯ ನಿರ್ವಹಿಸಬೇಕಾದರೆ ಅವರಿಗೆ ಮೂಲಭೂತ ಸೌಕರ್ಯ ಒದಗಿಸುವುದು ಸಂವಿಧಾನ ಬದ್ಧವಾದ ಬೇಡಿಕೆಗಳನ್ನ ಈಡೇರಿಸುವುದು ಸರ್ಕಾರದಾಗಿದ್ದು ಇದುವರೆಗೂ ಎರಡನೇ ಬಾರಿ ಮುಷ್ಕರ ನೀಡಿದರು ಯಾವುದೋ ಒತ್ತಡಕ್ಕೆ ಮಣಿದು ಅಥವಾ ಬೇರೆ ಯಾವುದು ಮಾರ್ಗವನ್ನು ಅನುಸರಿಸಿ ಮುಷ್ಕರ ನಿಲ್ಲಿಸುವ ಪ್ರಯತ್ನ ಮಾಡುವಂತಿರಬೇಕೆಂದು ಕಾಣುತ್ತದೆ ಎಂದು ತಿಳಿಸಿದರು.

ಪ್ರತಿಭಟನಾಕಾರರು ಯಾವುದೇ ರೀತಿಯ ಕ್ರಮ ಜರುಗಿಸಿದರು ಧೃತಿಗೆಡದೆ ತಮ್ಮ ಹೋರಾಟ ಅಚಲವಾಗಿದೆ ನ್ಯಾಯ ಸಿಗುವವರೆಗೂ ಹೋರಾಟ ಅನಿವಾರ್ಯವಾಗಿದ್ದು ಈ ಸಂದರ್ಭದಲ್ಲಿ ತಮ್ಮ ಹಕ್ಕು ಬೇಡಿಕೆಗಳನ್ನು ಬಗೆಹರಿಸುವವರೆಗೂ ನಾವು ಈ ಹೋರಾಟದಲ್ಲಿ ಭಾಗಿಯಾಗುವ ಮುಖಾಂತರ ಸದಾ ಬೆಂಬಲವಾಗಿ ಇರುತ್ತೇವೆ ಎಂದು ಈ ಸಂದರ್ಭದಲ್ಲಿ ಭರವಸೆ ನೀಡಿದರು.

# ಶಾಸಕರ ನೇತೃತ್ವದಲ್ಲಿ ಪ್ರಗತಿ ಪರಿಶೀಲನಾ ಸಭೆ

**ಮುಳಬಾಗಿಲು:** ಜಲಜೀವನ ಮಿಷನ್ ಕಾಮಗಾರಿ ಎಲ್ಲಾ ಹಳ್ಳಿಗಳಲ್ಲಿ ನಡೆಯುತ್ತಿದ್ದು, ಗುತ್ತಿಗೆದಾರರು ಬೇಕಾಬಿಟ್ಟಿ ರಸ್ತೆಗಳನ್ನು ಹಗೆದು ಅವನು ಮುಚ್ಚದೆ ಹಾಳು ಮಾಡುತ್ತಿದ್ದಾರೆ, ಇದು ಸರಿಯಲ್ಲ ಹಾಗಾಗಿ ಶೀಘ್ರದಲ್ಲಿ ಎಲ್ಲಾ ಗುತ್ತಿಗೆದಾರರ ಸಭೆ ಕರೆಯಲು ಗ್ರಾಮೀಣ ಕುಡಿಯುವ ನೀರು ವಿಭಾಗದ ಅಧಿಕಾರಿಗಳಿಗೆ ಶಾಸಕ ಸಮೃದ್ಧಿ ಮಂಜುನಾಥ್ ತಿಳಿಸಿದರು
ನಗರದ ಕೋಮುಲ್ ಶಿಬಿರ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ತಾಲೂಕು ಮಟ್ಟದ ಅಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ತಾಲೂಕನ್ನು ಮಾದರಿಯಾಗಿ ಮಾಡಬೇಕು ಅದಕ್ಕೆ ಅಧಿಕಾರಿಗಳು ಕೈಜೋಡಿಸಲು ಸಾಕಷ್ಟು ಬಾರಿ ಮನವಿ ಮಾಡಿದ್ದೇನೆ, ನನ್ನ ಮನವಿಗೆ ಎಲ್ಲಾ ತಾಲೂಕು ಮಟ್ಟದ



ಅಧಿಕಾರಿ ವರ್ಗ ಸ್ಪಂದಿಸುತ್ತಿದ್ದಾರೆ ಹಾಗಾಗಿ ಅವರಿಗೆ ಅಭಿನಂದನೆಗಳನ್ನು ತಿಳಿಸುತ್ತೇನೆ ಎಂದರು.

ಎಲ್ಲಾ ಇಲಾಖೆಗಳು ನನ್ನ ಕೆಲಸದ ವೇಗಕ್ಕೆ ಸ್ಪಂದಿಸುತ್ತಿವೆ ಆದರೆ ಕಂದಾಯ ಇಲಾಖೆ ಮಾತ್ರ ನನಗೆ ಸೂಕ್ತ ಸ್ಪಂದನೆ ನೀಡುತ್ತಿಲ್ಲ, ನೂತನವಾಗಿ ತಾಲೂಕಿಗೆ ಬಂದಿರುವ ತಹಸೀಲ್ದಾರ್ ಗೀತಾ ಮೇಡಂ ರವರು ಇದೇ ತಾಲೂಕಿನ ಹೆಣ್ಣು ಮಗಳು ಹಾಗಾಗಿ ಅವರು ಇದುವರೆಗೂ ತಾಲೂಕು ಕಚೇರಿಯಲ್ಲಿ ಇದ್ದಂತಹ ವ್ಯವಸ್ಥೆಯನ್ನು ಕೆಡವಿ ಜನಸಾಮಾನ್ಯರಿಗೆ ಉತ್ತಮ ಆಡಳಿತ ನೀಡುತ್ತಾರೆ ಎಂಬ ನಂಬಿಕೆ ಇದೆ ಎಂದರು.

ತಾಲೂಕು ಕಚೇರಿಯಲ್ಲಿ ಕೆಲಸ ಮಾಡುವವರೊಂದಿಗೆ ಕೆಲವು ಬಲಾಢ್ಯರು ಸಿಂಡಿಕೇಟ್ ಮಾಡಿಕೊಂಡಿದ್ದಾರೆ. ಬೆಂಗಳೂರಿನಿಂದ ಬರುವ ರಿಯಲ್ ಎಸ್ಟೇಟ್ ಕುಳುಗಳಿಗೆ ರೆಡ್ ಕಾರ್ಪೆಟ್ ಹಾಕಿ ಸರ್ಕಾರಿ ಜಮೀನುಗಳಿಗೆ ನಕಲಿ ದಾಖಲೆಗಳನ್ನು ಸೃಷ್ಟಿಸಿ ಕೊಡುತ್ತಿದ್ದಾರೆ. ಇಡೀ ಜಿಲ್ಲೆಯಲ್ಲಿ ಹೆಚ್ಚು ಕೆರೆಗಳನ್ನು ಹೊಂದಿರುವ ತಾಲೂಕು ನಮ್ಮ ಮುಳಬಾಗಿಲು ಆದ್ದರಿಂದ ಕಂದಾಯ ಇಲಾಖೆ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಲು ಕಾರ್ಯಯೋಜನೆ ರೂಪಿಸಿಕೊಳ್ಳಲು ಸೂಚಿಸಿದರು.

ಸಭೆಯಲ್ಲಿ ತಾಹಸೀಲ್ದಾರ್ ವಿ.ಗೀತಾ, ತಾ.ಪಂ ಇಓ ಡಾ.ಕೆ ಸರ್ವೇಶ್, ನಗರಸಭೆ ಪೌರಾಯುಕ್ತ ವಿ.ಶ್ರೀಧರ್, ಬಿಇಓ ರಾಮಚಂದ್ರಪ್ಪ, ಸಿಡಿಪಿಓ ಶೋಭಾ, ನಗರ ಠಾಣೆ ವೃತ ನಿರೀಕ್ಷಕ ರಾಜಣ್ಣ, ಬೆಸ್ಕಾಂ ರಮೇಶ್, ಪಶು ಪಾಲನಾ ಇಲಾಖೆ ಅನುರಾಧ, ಗ್ರಾಮೀಣ ಕುಡಿಯುವ ನೀರು ವಿಭಾಗದ ಮುರಳಿ, ಸರ್ವೆ ಇಲಾಖೆ ಎಡಿಎಲ್ ಆರ್ ನಿವೇದಿತಾ, ಕೃಷಿ ಇಲಾಖೆ ರವಿಕುಮಾರ್, ತೋಟಗಾರಿಕೆ ಇಲಾಖೆ ಎನ್. ರಮೇಶ್, ನರೇಗಾ ಸಹಾಯಕ ನಿರ್ದೇಶಕ ರವಿಚಂದ್ರ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು, ಪಿಡಿಓಗಳು ಇದ್ದರು.

# ಅಧಿಕಾರಿಗಳ ವಿರುದ್ಧ ಗೃಹಸಚಿವ ಪರಮೇಶ್ವರ ಗರಂ

**ಕೊರಟಗೆರೆ:** 10ಕೋಟಿಯ ಪಪಂ ಪ್ರಾಜೇಕ್ಟ್ ಬಗ್ಗೆ ನನ್ನ ಗಮನಕ್ಕೆ ಏಕೆ ತಂದಿಲ್ಲ. ಟೌನ್‌ನಲ್ಲಿ ಏನೇ ಸಮಸ್ಯೆ ಇದ್ರು ನನ್ನ ಗಮನಕ್ಕೆ ಎಂದಾದ್ರು ತಂದಿದೀರಾ. ಪಪಂಯನ್ನ ಪುರಸಭೆಯನ್ನಾಗಿ ಮಾಡಿರುವ ಪ್ರಸ್ತಾವನೆ ಯಾವ ಹಂತದಲ್ಲಿದೆ ನಿಮಗೇ ಗೋತ್ತಾ. ಅಭಿವೃದ್ದಿಯ ವಿಚಾರದಲ್ಲಿ ನಿರ್ಲಕ್ಷ ಮಾಡಿದ್ರೇ ನಿನ್ನನ್ನ ಅಮಾನತು ಮಾಡಿ ಮನೆಗೆ ಕಳಿಸ್ತೀನಿ ಎಂದು ಪಪಂ ಮುಖ್ಯಾಧಿಕಾರಿ ಕೆ.ಎಸ್.ಉಮೇಶ್‌ಗೆ ಗೃಹಸಚಿವ ಡಾ.ಜಿ.ಪರಮೇಶ್ವರ್ ಖಡಕ್ ಎಚ್ಚರಿಕೆ ನೀಡಿದ್ದಾರೆ.

ಕೊರಟಗೆರೆ ಪಟ್ಟಣದ ಪಪಂ ಸಭಾಂಗಣದಲ್ಲಿ ತಾಲೂಕು ಆಡಳಿತ ಮತ್ತು ತಾಪಂಯಿಂದ ಸೋಮವಾರ ಏರ್ಪಡಿಸಲಾಗಿದ್ದ ಕೊರಟಗೆರೆ ಕ್ಷೇತ್ರದ ತಾಲೂಕು ಮಟ್ಟದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸ್ಲಂಬೋರ್ಡ್‌ನಿಂದ ನಿವೇಶನ ರಹಿತರಿಗೆ ನೀಡುವ ಕಾಮೇನಹಳ್ಳಿಯ ವಸತಿ ಯೋಜನೆಯ ಕಥೆ ಏನಾಗಿದೆ. ಪೌರಕಾರ್ಮಿಕರಿಗೆ ನಿರ್ಮಾಣ ಮಾಡಿರುವ 13ವಸತಿ ಗೃಹಗಳ ಉದ್ಘಾಟನೆಗೆ ಮೀನಾಮೇಷ ಏಕೆ. ಸಾರ್ವಜನಿಕ ಶೌಚಾಲಯ ಮತ್ತು ಶುದ್ದ ಕುಡಿಯುವ ನೀರಿನ ಘಟಕಗಳ ಸ್ಥಿತಿಗತಿ ಏನಾಗಿದೆ ಹೇಳು. ತುಮಕೂರು ನಗರದಿಂದ ಕೊರಟಗೆರೆಗೆ ಕೇವಲ 15ನಿಮಿಷದಲ್ಲಿ ಬರಬಹುದೇ ಅಲ್ಲವೇ ಎಂದು ಮುಖ್ಯಾಧಿಕಾರಿ ವಿರುದ್ದ ಕಿಡಿಕಾರಿದರು.

ಅಭಿವೃದ್ದಿ ಕಾಮಗಾರಿಗಳ ಪ್ರಗತಿಯ ಮಾಹಿತಿ ಕೇಳಿದ್ರೇ ಆಕಡೆ ಮತ್ತು ಈ ಕಡೆ ಏನ್ ನೋಡ್ತಿರಾ. ಅಂಕಿಅಂಶದ ಮಾಹಿತಿ ತರದೇ ತ್ರೈಮಾಸಿಕ ಕೆಡಿಪಿ ಸಭೆಗೆ ಏತಕ್ಕೆ ಬರ್ತೀರಾ ಹೇಳಿ.



ಸರಕಾರಿ ಶಾಲೆ ಮತ್ತು ಅಂಗನವಾಡಿ ಕೇಂದ್ರದ ಕಟ್ಟಡಗಳ ನಿರ್ಮಾಣದ ಹಂತದ ಬಗ್ಗೆ ಉತ್ತರ ನೀಡದ ಜಿಪಂ ಎಇಇ ಮಂಜುನಾಥಗೆ ತರಾಟೆಗೆ ತೆಗೆದುಕೊಂಡು ಇದು ನಿಮ್ಮ ಜವಾಬ್ದಾರಿ ಅಲ್ಲವೇ ಎಂದು ತಾಪಂ ಇಓ ಅಪೂರ್ವಗೆ ಪ್ರಶ್ನಿಸಿದರು.

ಜಲಜೀವನ್ ಮೀಷನ್ ಯೋಜನೆಗೆ ರಾಜ್ಯ ಸರಕಾರ ಶೇ.55ರಷ್ಟು ನೀಡುತ್ತೇ.ತುಮಕೂರು ಜಿಲ್ಲೆಯ 2400ಕೋಟಿ ಅನುಧಾನ ಬರೀ ಪುಸ್ತಕದ ದಾಖಲೆಯಲ್ಲಿ ಖರ್ಚಾದರೇ ಸಾಲದು. ಕೊರಟಗೆರೆಯ 466ಕಾಮಗಾರಿ ಪೈಕಿ 82ಮಾತ್ರ ಪೂರ್ಣ ಆಗಿದೆ. ಇನ್ನೂಳಿದ ಕಾಮಗಾರಿ ಪೂರ್ಣ ಆಗೋದು ಯಾವಾಗ ಹೇಳಿ.

ಗ್ರಾಮೀಣ ಭಾಗದ ಅಭಿವೃದ್ದಿಗೆ ನೀಡಿರುವ ಅನುಧಾನ ನಿಗಧಿತ ಅವಧಿಯಲ್ಲಿ ಅನುಷ್ಠಾನ ಆದರೇ ಸರಿ ಇಲ್ಲವಾದ್ರೇ ಅದಕ್ಕೆ ಅಧಿಕಾರಿಗಳೇ ನೇರಹೊಣೆ ಎಂದು ತರಾಟೆಗೆ ತೆಗೆದುಕೊಂಡರು.

ಸರಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡೋದು ಬಡವರ ಮಕ್ಕಳು ಮಾತ್ರ ಇದು ನಿಮಗೇಲ್ಲ ನೆನಪಿರಲಿ. ಮಗು ಪಾಸ್ ಆದ್ರೇ ಮಾತ್ರ ಪೋಷಕರು ಮುಂದಕ್ಕೆ ವ್ಯಾಸಂಗ ಮಾಡಿಸ್ತಾರೇ ಇಲ್ಲದಿದ್ರೇ ಶಾಲೆ ಬಿಡಿಸಿ ಕೆಲಸಕ್ಕೆ ಕಳಿಸ್ತಾರೇ.

ಶಿಕ್ಷಣ ಮತ್ತು ಆರೋಗ್ಯ ಇಲಾಖೆಯ ಸಮಸ್ಯೆಯ ಬಗ್ಗೆ ಪ್ರತ್ಯೇಕ ಅಂಕಿಅಂಶದ ವರದಿ ಸಿದ್ದಪಡಿಸಿ ನನಗೇ ಕಡ್ಡಾಯವಾಗಿ ನೀಡಬೇಕು. ಸರಕಾರಿ ಶಾಲೆ ಮತ್ತು ಆರೋಗ್ಯ ಕೇಂದ್ರಗಳಿಗೆ ಬೇಕಾದ ಅನುಧಾನ ನಾನು ತರ್ತಿನಿ ಎಂದರು.

ಕೆಡಿಪಿ ಸಭೆಯಲ್ಲಿ ಜಿಲ್ಲಾಧಿಕಾರಿ ಶುಭಕಲ್ಯಾಣ್, ಜಿಪಂ ಸಿಇಓ ಪ್ರಭು.ಜಿ, ಎಎಸ್ಪಿ ಅಬ್ದುಲ್‌ಖಾದರ್, ಆಹಾರ ಇಲಾಖೆ ಜಂಟಿ ನಿರ್ದೇಶಕ ಮಂಟೇಸ್ವಾಮಿ, ಸಮಾಜ ಜಂಟಿ ನಿರ್ದೇಶಕ ಕೃಷ್ಣಪ್ಪ, ಕೃಷಿ ಜಂಟಿ ನಿರ್ದೇಶಕ ಡಾ.ರಮೇಶ್, ಉಪನಿರ್ದೇಶಕ ಚೇತನ್, ಮಧುಗಿರಿ ಎಸಿ ಶಿವಪ್ಪ, ಡಿವೈಎಸ್ಪಿ ಮಂಜುನಾಥ, ಪಿಡಬ್ಲ್ಯೂಡಿ ಇಇ ಹನುಂತರಾವ್, ಕೊರಟಗೆರೆ ತಹಶೀಲ್ದಾರ್ ಮಂಜುನಾಥ, ತಾಪಂ ಇಓ ಅಪೂರ್ವ ಸೇರಿದಂತೆ 200ಕ್ಕೂ ಅಧಿಕ ಅಧಿಕಾರಿವರ್ಗ ಉಪಸ್ಥಿತರಿದ್ದರು.



## 10ಲಕ್ಷ ವೆಚ್ಚದ ಶುದ್ದನೀರಿನ ಘಟಕ..

ನೀಲಗೊಂಡನಹಳ್ಳಿ ಗ್ರಾಪಂಯ ಐ.ಕೆ.ಕಾಲೋನಿ ಗ್ರಾಮದಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ 10ಲಕ್ಷವೆಚ್ಚದ ಅನುಧಾನದಲ್ಲಿ ಶುದ್ದ ಕುಡಿಯುವ ನೀರಿನ ಘಟಕವನ್ನು ಗೃಹಸಚಿವ ಡಾ.ಜಿ.ಪರಮೇಶ್ವರ ಉದ್ಘಾಟಿಸಿದರು. ನಂತರ ಕೊರಟಗೆರೆ ಪಟ್ಟಣದ ರಾಜೀವ ಭವನದಲ್ಲಿ ಕಾಂಗ್ರೇಸ್ ಕಾರ್ಯಕರ್ತರ ಸಭೆಯನ್ನು ನಡೆಸಿ ಗ್ರಾಮೀಣ ಭಾಗದ ನೂರಾರು ಜನರಿಂದ ಅಹವಾಲು ಸ್ವೀಕರಿಸಿದರು.


62ಕೆರೆಗಳಿಗೆ 285ಕೋಟಿ ಅನುಧಾನ

ಏತ ನೀರಾವರಿ ಯೋಜನೆಯಡಿ ಸಣ್ಣ ನೀರಾವರಿ ಇಲಾಖೆಯಿಂದ ಕೊರಟಗೆರೆ ತಾಲೂಕಿನ 62ಕೆರೆಗಳಿಗೆ ಎತ್ತಿನಹೊಳೆ ನಾಲೆಯಿಂದ ನೀರು ತುಂಬಿಸುವ ಕಾಮಗಾರಿಗಳಿಗೆ 285ಕೋಟಿ ಅನುಧಾನ ಬಿಡುಗಡೆಯಾಗಿದ್ದು ತ್ವರಿತವಾಗಿ ಶಂಕುಸ್ಥಾಪನೆ ಆಗಲಿದೆ. ಕೊರಟಗೆರೆಯ ಕಸಬಾದ 10ಕೆರೆ, ಹೊಳವನಹಳ್ಳಿಯ 10, ಕೋಳಾಲದ 25 ಮತ್ತು ಚನ್ನರಾಯನದುರ್ಗದ 17ಕೆರೆಗಳಿಗೆ ಎತ್ತಿನಹೊಳೆ ನೀರು ಹರಿಯಲಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ ಮಾಹಿತಿ ನೀಡಿದರು.

**50ಕ್ಕೂ ಅಧಿಕ ಕಾಮಗಾರಿಗಳ ಪ್ರಗತಿ..**

ಗ್ರಾಮೀಣ ಭಾಗದ 16ಕಾಮಗಾರಿಗೆ ಮುಖ್ಯಮಂತ್ರಿ ವಿಶೇಷ ಯೋಜನೆಯಡಿ 10ಕೋಟಿ ಅನುಧಾನ ಬಂದಿದೆ. ನರೇಗಾ ಯೋಜನೆಯಡಿ ಸರಕಾರಿ ಶಾಲೆ ಮತ್ತು ಅಂಗನವಾಡಿ ಕೇಂದ್ರಗಳ ಅಭಿವೃದ್ದಿ. ಜಿಪಂ ಅರ್ನಿಬಂಧಿತ ಯೋಜನೆಯಡಿ 18ಗಾಮಗಾರಿಗೆ 42ಲಕ್ಷ ಸೇರಿದಂತೆ ಹತ್ತಾರು ಅಭಿವೃದ್ದಿ ಕಾಮಗಾರಿಗಳ ಅನುಷ್ಠಾನ ಮತ್ತು ಪ್ರಗತಿಯ ಬಗ್ಗೆ ಗೃಹಸಚಿವ ಡಾ.ಜಿ.ಪರಮೇಶ್ವರ ಅಧಿಕಾರಿಗಳಿಂದ ಮಾಹಿತಿ ಪಡೆದರು.

# ಭೂದೇವಿ, ಶ್ರೀದೇವಿ ವೆಂಕಟೇಶ್ವರ ಸ್ವಾಮಿ ನೂತನ ವಿಗ್ರಹ ಪ್ರತಿಷ್ಠಾಪನೆ



**ಮುಳಬಾಗಿಲು:** ತಾಲೂಕಿನ ಅಂಬ್ಲಿಕಲ್ ಪಂಚಾಯಿತಿ ವ್ಯಾಪ್ತಿಯ ಸಿದ್ದನಹಳ್ಳಿ ಗ್ರಾಮದ ಶ್ರೀ ಭೂದೇವಿ ಶ್ರೀದೇವಿ ಶ್ರೀ ವೆಂಕಟೇಶ್ವರ ಸ್ವಾಮಿ ನೂತನ ವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮಕ್ಕೆ ವಿಧಾನಸಭಾ ಕ್ಷೇತ್ರದ ಜೆಡಿಎಸ್ ನ ಪಕ್ಷದ ಶಾಸಕರಾದ ಸಮೃದ್ಧಿ ವಿ ಮಂಜುನಾಥ್ , ಕೋಲಾರ ಸಂಸದರದ ಮಲ್ಲೇಶ್ ಬಾಬು, ಮಾಜಿ ಸಂಸದರಾದ ಎಸ್. ಮುನಿಸ್ವಾಮಿ, ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಸಮಾಜಸೇವಕರಾದ ವಿ.ಅದಿನಾರಾಯಣ, ದೇವಿಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ದೇವಿಯ ಆಶೀರ್ವಾದ ಪಡೆದರು.

ನಂತರ ಮಾತನಾಡಿದ ಅವರು ಶ್ರೀ ಭೂದೇವಿ ಶ್ರೀದೇವಿ ಶ್ರೀ ವೆಂಕಟರಮಣ ಸ್ವಾಮಿ ದೇವರ ಆಶೀರ್ವಾದದಿಂದ ತಾಲೂಕಿನಲ್ಲಿ ಸಕಾಲಕ್ಕೆ ಒಳ್ಳೆಯ ಮಳೆಯಾಗಿ ರೈತರು ಸಂತೋಷದಿಂದ ಬಾಳಲೆಂದು ದೇವರಲ್ಲಿ ಪ್ರಾರ್ಥಿಸಿದರು.

ಈ ದೇವಸ್ಥಾನಕ್ಕೆ ಆರ್ಥಿಕ ಸಹಾಯ ಮಾಡಿದ ಎಲ್ಲ ಮುಖಂಡರಿಗೂ ಮತ್ತು ನಾಯಕರಿಗೂ ಗ್ರಾಮದ ಮತ್ತು ನಮ್ಮ ಎಲ್ಲಾ ಮುಖಂಡರ ಪರವಾಗಿ ಶುಭಾಶಯಗಳನ್ನು ತಿಳಿಸಿದರು.

ಇಂತಹ ಹಲವಾರು ಸಮಾಜ ಸೇವಾ ಕಾರ್ಯಕ್ರಮಗಳನ್ನು ಮಾಡುತ್ತಾ, ಜನರ ಸೇವೆ ಮಾಡಲು ಸಿದ್ದರಾಗಿದ್ದ, ಬಡಬಗ್ಗರ ದೀನದಲಿತರ ದೇವ ಕಾರ್ಯಗಳಿಗೆ ದೇವಸಕ್ಕೆ ಸಹಾಯ ಮಾಡೋದಾಗಿ ಹಾಗೂ ಮುಂಬರುವ ಚುನಾವಣೆಯಲ್ಲಿ ಅವಕಾಶ ಸಿಕ್ಕಿ ನಿಮ್ಮ ಸೇವೆ ಮಾಡಲು ಮುಂದೆ ಬಂದಾಗ ನಮ್ಮನ್ನು ಆಶೀರ್ವದಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ತಾಲೂಕಿನ ಜೆಡಿಎಸ್ ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ನಲ್ಲೂರು ರಘು ರೆಡ್ಡಿ, ಹಿರಿಯ ಮುಖಂಡರು ಹಾಗೂ ಖ್ಯಾತ ವಕೀಲರಾದ ಕೆ.ವಿ ಶಂಕರಪ್ಪ, ಡೆಕ್ಕನ್ ಸೀನಪ್ಪ , ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡರಾದ ಆಲಂಗೂರು ಶಿವಣ್ಣ, ರಾಮಲಿಂಗ ರೆಡ್ಡಿ, ಗುಜ್ಜನಹಳ್ಳಿ ಮಂಜುನಾಥ್, ಗಂಗಿ ರೆಡ್ಡಿ, ಬಿಜೆಪಿ ತಾಲೂಕು ಮುಖಂಡರಾದ ಮೈಸೂರು ಸುರೇಶ್, ವಿಶ್ವನಾಥ್ ರೆಡ್ಡಿ, ಹಾಗೂ ಎಲ್ಲಾ ಪಕ್ಷಗಳ ಮುಖಂಡರು, ಕಾರ್ಯಕರ್ತರು ಸಿದ್ದನಹಳ್ಳಿ ಗ್ರಾಮದ ಮುಖಂಡರು, ಯುವಕರು ಹಾಗೂ ಸುತ್ತಮುತ್ತಲ ಗ್ರಾಮಸ್ಥರು, ಭಕ್ತಾದಿಗಳು ಭಾಗವಹಿಸಿದ್ದರು.

## ಜಾತಿ ಆದಾಯ ಪ್ರಮಾಣ ಪತ್ರ ಪಡೆಯಲು ಸಹಾಯವಾಣಿ ಸ್ಥಾಪನೆ

ಚಾಮರಾಜನಗರ: ರಾಜ್ಯದಲ್ಲಿ ನಡೆಯುತ್ತಿರುವ ಸ್ಪರ್ಧಾತ್ಮಕ ಪರೀಕ್ಷೆ ಹಾಗೂ ನೇಮಕಾತಿ ಉದ್ದೇಶಗಳಿಗಾಗಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಅವಶ್ಯಕತೆ ಇರುವ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಅನುಕೂಲಕ್ಕಾಗಿ ತ್ವರಿತವಾಗಿ ಸ್ಪಂದಿಸಲು ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಹಾಯವಾಣಿ ಸ್ಥಾಪಿಸಲಾಗಿದೆ ಎಂದು ಜಿಲ್ಲಾಧಿಕಾರಿಯವರು ತಿಳಿಸಿದ್ದಾರೆ.

ಸಾರ್ವಜನಿಕರು ಜಾತಿ, ಆದಾಯ ಪ್ರಮಾಣ ಪತ್ರ ಪಡೆಯಲು ತೊಂದರೆ ಉಂಟಾದಲ್ಲಿ ಸಹಾಯವಾಣಿ ಕೇಂದ್ರದ ಸಂಖ್ಯೆ 08226–223160 ಹಾಗೂ ಜಿಲ್ಲಾ ಎಜೆಎಸ್‌ಕೆ ಸಮಾಲೋಚಕರ ಮೊ.ಸಂ 8861461509 ಗೆ ಕರೆ ಮಾಡಿದ್ದಲ್ಲಿ ಕೂಡಲೇ ಸ್ಪಂದಿಸಿ ಕ್ರಮವಹಿಸಲಾಗುವುದು. ಯಾವುದೇ ವಿದ್ಯಾರ್ಥಿಗಳು ಹಾಗೂ ಪೋಷಕರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶುಲ್ಕ ಮರುಪಾವತಿ ಸೌಲಭ್ಯಕ್ಕೆ ಅರ್ಜಿ

**ಚಾಮರಾಜನಗರ:** ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು 2024–25ನೇ ಸಾಲಿಗೆ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಅವಧಿಯನ್ನು ಮಾರ್ಚ್ 10ರವರೆಗೆ ವಿಸ್ತರಿಸಲಾಗಿದೆ.

ಅರ್ಜಿಯನ್ನು ವೆಬ್ ಸೈಟ್ https://ssp.postmatric.karnataka.gov.in ನಲ್ಲಿ ಸಲ್ಲಿಸಬಹುದು. ಕಾರ್ಯಕ್ರಮಗಳ ವಿವರ, ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ ವೆಬ್‌ಸೈಟ್ https://bcwd.karnataka.ರಂತ.ಎಟಿ, ಇಲಾಖಾ ಸಹಾಯವಾಣಿ ಸಂ 8050770005, ಇ–ಮೇಲ್ bcwdhelpline@gmail.com, ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ಸಹಾಯವಾಣಿ ಇ–ಮೇಲ್ postmatrichelp@karnataka.gov.in ಮತ್ತು ದೂ.ಸಂ 1902 ಸಂಪರ್ಕಿಸಬಹುದು. ಅರ್ಜಿ ಸಲ್ಲಿಸಲು ಮಾರ್ಚ್ 10 ಅಂತಿಮ ದಿನವಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

**ಚಾಮರಾಜನಗರ:**ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ನಗರದ ಆರ್ ಪ್ರೋಸೆಸ್ ಮತ್ತು ಎಸ್.ಎಂ.ಎಫ್.ಜಿ. ಇಂಡಿಯನ್ ಕ್ರೆಡಿಟ್ ಕಂಪನಿ ಲಿಮಿಟೆಡ್ ಸಹಯೋಗದೊಂದಿಗೆ ವಿವಿಧ ಹುದ್ದೆಗಳ ನೇಮಕಾತಿಗೆ ಫೆಬ್ರವರಿ 18ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಸಂದರ್ಶನ ನಡೆಸಲಾಗುವುದು.

ಆರ್ ಪ್ರೋಸೆಸ್ ಕಂಪನಿಯಲ್ಲಿ ಖಾಲಿ ಇರುವ 15 ಟ್ರೈನಿ ಪ್ರೋಸಸ್ ಅಸೋಸಿಯಟ್ ಹುದ್ದೆಗಳಿಗೆ 18ರಿಂದ 30 ವರ್ಷದೊಳಗಿನ ಯಾವುದೇ ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆ ಹೊಂದಿರುವವರು ಹಾಗೂ ಎಸ್.ಎಂ.ಎಫ್.ಜಿ. ಇಂಡಿಯನ್ ಕ್ರೆಡಿಟ್ ಕಂಪನಿ ಲಿಮಿಟೆಡ್ ನಲ್ಲಿ ಖಾಲಿ ಇರುವ 30 ಟೆಲಿಕಾಲಿಂಗ್, ಫೀಲ್ಡ್ ಆಫೀಸರ್ ಮತ್ತು ಡೇಟಾ ಎಂಟ್ರಿ ಆಪರೇಟರ್ ಹುದ್ದೆಗಳಿಗೆ 18 ರಿಂದ 32 ವರ್ಷದೊಳಗಿನ ಎಸ್.ಎಸ್.ಎಲ್.ಸಿ. ಪಿಯುಸಿ, ಐ.ಟಿ.ಐ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ ಪುರುಷ, ಮಹಿಳಾ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು.

ಆಸಕ್ತ ಅಭ್ಯರ್ಥಿಗಳು ಸ್ವ–ವಿವರ (ಬಯೋಡೆಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ದೂ.ಸಂ 08226–224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದೈಹಿಕ ಶಿಕ್ಷಕರ ಸಂಘದ ಅಧ್ಯಕ್ಷರ ಉಮೇಶ್ ಕಂಬಳಿ ಆಯ್ಕೆ

**ಕೊಪ್ಪಳ:** ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ನೂತನ ಅಧ್ಯಕ್ಷರಾಗಿ ಕುಕನೂರು ತಾಲೂಕಿನ ಯಡಿಯಾಪುರ ಹಿರಿಯ ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಕ ಉಮೇಶ ಕಂಬಳಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘ (ರಿ) ಬೆಂಗಳೂರು ರಾಜ್ಯದ್ಯಕ್ಷರಾದ ಶ್ರೀ ಚೌಡಪ್ಪ ಅಧ್ಯಕ್ಷರು ಇವರ ನಿರ್ದೇಶನದಂತೆ ಕೊಪ್ಪಳ ನಗರದ ಸರ್ಕಾರಿ ನೌಕರ ಸಂಘದ ಭವನದಲ್ಲಿ ಶನಿವಾರ ನಿವೃತ್ತ ದೈಹಿಕ ಶಿಕ್ಷಕರಾದ ಅನ್ನಪೂರ್ಣ ಅಸ್ಕಿಯವರ ಉಪಸ್ಥಿತಿಯಲ್ಲಿ ನೂತನ ಜಿಲ್ಲಾ ಅಧ್ಯಕ್ಷರಾಗಿ ಉಮೇಶ್ ಕಂಬಳಿ ಅವರನ್ನು ಆಯ್ಕೆ ಮಾಡಲಾಗಿದೆ.ಸಭೆಯಲ್ಲಿ ಐದು ತಾಲೂಕಿನ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಅಧ್ಯಕ್ಷರುಗಳು ಉಪಸ್ಥಿತರಿದ್ದರು.

ಕುಷ್ಟಗಿ ತಾಲೂಕಿನ ಅಧ್ಯಕ್ಷ ಜಗದೀಶ್ ಸೂಡಿ, ಗಂಗಾವತಿ ತಾಲೂಕಿನ ವೆಂಕಪ್ಪ ತಳವಾರ್, ಕೊಪ್ಪಳ ತಾಲೂಕು ಘಟಕದ ಶ್ರೀಮತಿ ಮಮತಾ ಗೊಂಡಬಾಳ, ಮತ್ತು ಕುಕನೂರು ತಾಲೂಕು ಘಟಕದ ಅಧ್ಯಕ್ಷರಾದ ಹನುಮಂತಗೌಡ ದಾದ್ಮಿ ಉಪಸ್ಥಿತರಿದ್ದರು.



ಸಭೆಯಲ್ಲಿ ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಕೊಪ್ಪಳ ಜಿಲ್ಲಾ ಘಟಕದ ನೂತನ ಅಧ್ಯಕ್ಷರನ್ನಾಗಿ ಉಮೇಶ ಕಂಬಳಿ ಅವರನ್ನು ಸರ್ವಾನುಮತದಿಂದ ಜಿಲ್ಲಾಧ್ಯಕ್ಷರನ್ನಾಗಿ ಅವಿರೋಧವಾಗಿ ಆಯ್ಕೆ ಮಾಡಲಾಯಿತು ಎಂದು ಜಿಲ್ಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ನಾಗರಾಜ್ ಟಿ ಹೇಳಿದರು. ಸಭೆಯಲ್ಲಿ ಕುಕನೂರು ತಾಲೂಕು ಪ್ರಧಾನ ಕಾರ್ಯದರ್ಶಿಗಳಾದ ಚಂದ್ರಶೇಖರ್ ದೊಡ್ಡಮನಿ ಹಿರಿಯ ಶಿಕ್ಷಕರಾದ ವಿರುಪಾಕ್ಷಪ್ಪ ಬಾಗೋಡಿ ಕೊಪ್ಪಳ, ಯು ಎಂ ಬಸವರಾಜ್, ಚಂದ್ರಶೇಖರ್ ಜಾಪಲ್ ಗಂಗಾವತಿ,ಆರ್ ಎಂ ದೇವರೆಡ್ಡಿ, ಸಂಗಪ್ಪ ಕೊಪ್ಪದ, ಅಶೋಕ ಅಲ್ಲಿಪುರ, ಚಂದ್ರಪ್ಪ, ವೀರಭದ್ರ ಶ್ಯಾನಭೋಗರ, ಎಸ್ ಎಂ ಹಿರೇಮಠ, ಪಿ ನದಾಫ್, ಪಿ ಬಿ ಪೂಜಾರ್, ಉದಯ್ ಕುಮಾರ್ ಚಾಕ್ರಿ, ಪಾಂಡುರಂಗ, ಶ್ರೀಮತಿ ಗಂಗವ್ವ ಹಟ್ಟಿ, ಶ್ರೀಮತಿ ಅನ್ನಪೂರ್ಣ, ಮಂಜುನಾಥ್ ಕಂಬಳಿ, ಗವಿಸಿದ್ದಪ್ಪ ಕೋನಸಾಗರ, ಪಾಂಡುರಂಗ ಅಲ್ಲೂರ್ ಉಪಸ್ಥಿತರಿದ್ದರು.

# ಫೆ.19ರಂದು ನೃತ್ಯ ಸಂಭ್ರಮ

**ಬೆಂಗಳೂರು:** ನೃತ್ಯ ದಿಶಾ ಟ್ರಸ್ಟ್ ವತಿಯಿಂದ ಫೆ.19ರ ಬುಧವಾರ ಮಲ್ಲತ್ತಹಳ್ಳಿ ಕಲಾಗ್ರಾಮದ ಸಮುಚ್ಚಯ ರಂಗಮಂದಿರದಲ್ಲಿ "ನೃತ್ಯ ಸಂಭ್ರಮ" ಎಂಬ ಶೀರ್ಷಿಕೆಯಲ್ಲಿ ವಿಭಿನ್ನ ಸಂಗೀತ ಮತ್ತು ನೃತ್ಯ ಕಾರ್ಯಕ್ರಮವನ್ನು ಟ್ರಸ್ಟಿನ ಸಂಸ್ಥಾಪಕ ನಿರ್ದೇಶಕರೂ ಹಾಗೂ ಗುರುಗಳೂ ಆದ 'ಕಲಾಭೂಷಿಣಿ' ಡಾ॥ ದರ್ಶಿನಿ ಮಂಜುನಾಥ್ ಆಯೋಜಿಸಿದ್ದಾರೆ.

ಮುಖ್ಯ ಅತಿಥಿಗಳು: ಗುರು.ವಿದುಷಿ ಶ್ರೀಮತಿ ಲತಾ ಕೆ. ಶಂಕರ್ (ಸಂಸ್ಥಾಪಕ ನಿರ್ದೇಶಕರು, ಕಲಾಮಯಿ ನೃತ್ಯ ಶಾಲೆ), ಶ್ರೀಮತಿ ಎಂ.ವಿ. ಅರುಂಧತಿ (ಹಿರಿಯ ಸಹಾಯಕ ನಿರ್ದೇಶಕರು, ನಗರ ಯೋಜನೆ, ಕರ್ನಾಟಕ ಸರ್ಕಾರ) ಮತ್ತು ಶ್ರೀ ಎಂ.ವಿ. ರಂಗಸ್ವಾಮಿ (ಮಾಜಿ ಜಿಲ್ಲಾ ಉಸ್ತುವಾರಿ ಸದಸ್ಯರು, ಹಾಸನ). ಸಹಕಾರ : ಸಂಸ್ಕೃತಿ ಸಚಿವಾಲಯ (ಭಾರತ ಸರ್ಕಾರ), ಕನ್ನಡ ಮತ್ತು ಸಂಸ್ಕೃತಿ ಇಲಾಖೆ (ಕರ್ನಾಟಕ ಸರ್ಕಾರ).



# ಜಾಣಕುರುಡು ಪ್ರದರ್ಶಿಸೋ ಚಾಮರಾಜನಗರ ಜಿಲ್ಲಾಡಳಿತ..!

**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

ಚಾಮರಾಜನಗರ: ಘನ ಉಚ್ಚನ್ಯಾಯಾಲಯದ ಜುವಿನ್ನೆಲ್ ಜಸ್ಟೀಸ್ ಕಮಿಟಿಯ ಸಭೆಯಲ್ಲಿ ಚರ್ಚಿತವಾಗಿರುವ ವಿಷಯಗಳ ಕುರಿತು ಮೂಡಿಸುವ ಸಂಬಂಧ ಕ್ರಿಯಾ ಯೋಜನೆ ರೂಪಿಸುವ ಬಗ್ಗೆ ಕೈಗೊಂಡ ಅಂಶಗಳ ಪೈಕಿ ಗಡಿಜಿಲ್ಲೆ ಚಾಮರಾಜನಗರದಲ್ಲಿ ಗಾಳಿಗೆ ತೂರಿದರೂ ಜಿಲ್ಲಾಡಳಿತ ಮಾತ್ರ ಜಾಣ ಕುರುಡು ಪ್ರದರ್ಶನ ಮಾಡಲಾಗುತ್ತಿದೆ ಎಂದರೆ ತಪ್ಪಾಗಲಾರದು.


ಉಪ ಕಾರ್ಯದರ್ಶಿಗಳು, ಜುವಿನೈಲ್ ಜಹೀ ಕಮಿಟಿ, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರು 12.10.2023 ರಂದು ನಡೆಸಿರುವ ಸಭೆಯಲ್ಲಿ, ಪುಸ್ತಾಪಿಸಿರುವ ಅಂಶಗಳಂತೆ, ಶಾಲಾ/ಕಾಲೇಜುಗಳ ಸಮೀಪ ಮದ್ಯದಂಗಡಿಗಳಿದ್ದು ಇದರಿಂದಾಗಿ ವಿಧ್ಯಾಭ್ಯಾಸಕ್ಕೆ ಹಾಗೂ ನಿರ್ವಹಣೆಗೆ. ತೊಂದರೆಯಾಗುತ್ತಿದ್ದಲ್ಲಿ ಸಂಬಂದಪಟ್ಟ ಶೈಕ್ಷಣಿಕ ಸಂಸ್ಥೆಗಳವರು ಅಬಕಾರಿ ಇಲಾಖೆಗೆ ದೂರು ಸಲ್ಲಿಸಲು ತಿಳಿಸುತ್ತಾ ಈ ಕುರಿತು ಅಬಕಾರಿ ಇಲಾಖೆಯಿಂದ ಕಮಕ್ಕೈಗೊಳ್ಳಲಾಗುವುದೆಂದು ಪತ್ರದಲ್ಲಿ ತಿಳಿಸಿದ್ದಾರೆ. ಜೊತೆಗೆ ವ್ಯಸನ ಮುಕ್ತಗೊಳಿಸುವ ಬಗ್ಗೆ ಸಾರ್ವಜನಿಕರು, ಶಾಲಾ ಮಕ್ಕಳು ಹಾಗೂ ಪಾಲಕರಲ್ಲಿ ಜಾಗೃತಿ ಮೂಡಿಸಲು ಕ್ರಿಯಾ ಯೋಜನೆಯನ್ನು ರೂಪಿಸಲು ಶಿಕ್ಷಣ ಇಲಾಖೆಯು ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿ ಕಾರ, ಮಾದಕ ದ್ರವ್ಯ ನಿಯಂತ್ರಣ ಬೂರೋ ಮತ್ತು ಅಬಕಾರಿ ಇಲಾಖೆ ಆಯುಕ್ತರೊಂದಿಗೆ ಸಮನ್ವಯ ಸಾಧಿಸಬೇಕು ಎಂದು ತಿಳಿಸಲಾಗಿದೆ.




ಅದರಂತೆ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಶಾಲಾ/ಕಾಲೇಜುಗಳ ಸಮೀಪ ಮದ್ಯದಂಗಡಿಗಳಿದ್ದು ಇದರಿಂದಾಗಿ ವಿಧ್ಯಾಭ್ಯಾಸಕ್ಕೆ ಹಾಗೂ ನಿರ್ವಹಣೆಗೆ, ತೊಂದರೆಯಾಗುತ್ತಿದ್ದಲ್ಲಿ ಸಂಬಂದಪಟ್ಟ ಶೈಕ್ಷಣಿಕ ಸಂಸ್ಥೆಗಳವರು ಅಬಕಾರಿ ಇಲಾಖೆಗೆ ದೂರು ಸಲ್ಲಿಸಿ ಸೂಕ್ತ ಕ್ರಮವಹಿಸಲು ಇತ್ತೀಚೆಗೆ ತಿಳಿಸಿದೆ.

ವಿಪರ್ಯಾಸವೆಂದರೆ ಈಗಾಗಲೆ ಆಸ್ಪತ್ರೆಯ ಮುಂಭಾಗ ಬಾರ್ ಇದ್ದು ಯಾವುದೊ ಒಂದು ಅಂಶದ ಮೇಲೆ ನ್ಯಾಯಾಲಯದಲ್ಲಿ ತಡೆಯಾಜ್ಞೆ ಇದೆ ಎನ್ನಲಾಗಿದೆ...ಇದರಿಂದ ಎಷ್ಟೊ ಹೋರಾಟಗಳು ನಡೆದು ಜಿಲ್ಲಾಡಳಿತಕ್ಕೆ ದೂರು ಸಲ್ಲಿಸಿದರೂ ಜಿಲ್ಲಾಡಳಿತ ಕ್ರಮಕೈಗೊಳ್ಳಲಾಗಿಲ್ಲ..ಆದರೆ ಸಮೀಪವೇ ಹೊಸ ಡಯಾಗ್ನಿಟಿಕ್ ಸೆಂಟರ್ ಹಾಗೂ ಕಾಲೇಜಿಗೆ ಇವರೆ ಪ್ರಾದಿಕಾರದ ಅದ್ಯಕ್ಷರಾಗಿರುವವರೆ ದೂರು ಬಂದರೂ ಮೌನವಹಿಸಿರೊದು ಜಾಣಕುರುಡು ಪ್ರದರ್ಶನವಾದಂತಾಗಿದೆ.

ಡಯಾಗ್ನಟಿಕ್ ಸೆಂಟರ್ ಗಳು ಆಸ್ಪತ್ರೆಯ ಇಂತಿಷ್ಟು ಸುತ್ತಳತೆಯ ದೂರದಲ್ಲಿ ಇರಬೇಕೆಂಬ ನಿಯಮ ಇದ್ದರೂ ನಗರಸಬೆ ಆಯುಕ್ತರು ಹಾಗೂ ಆರೋಗ್ಯ ಇಲಾಖೆ ಅದಿಕಾರಿಗಳು ಹಿಂಬಾಗಿಲಿನಿಂದ ಅಳತೆ ಮಾಡಿಸಿ ಅನುಮತಿ ನೀಡಿದ್ದಾರೆ. ಕಾನೂನು ಪಾಲಿಸಬೇಕಾದ ಜಿಲ್ಲಾ ಆರೋಗ್ಯ ಅದಿಕಾರಿಗಳಿಗೂ ಕಣ್ಣಿಗೆ ಮಣ್ಣೆರಚಿ ಆಸ್ಪತ್ರೆಯ ಮುಂಬಾಗಿಲಿನಿಂದಲೆ ರಾಜಾರೋಷವಾಗಿ ಕಾರ್ಯನಿರ್ವಹಣೆ ಮಾಡುತ್ತಿದೆ.



ಕರ್ನಾಟಕ ಸರ್ಕಾರ
ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001.

No :1545981 DPI-CPI0C4-8(OTRS)/98/2024 ದಿನಾಂಕ : 10-02-2025.

ಜ್ಞಾಪನಾ

ವಿಷಯ : ಘನ ಉಚ್ಛನ್ಯಾಯಾಲಯದ ಜುವಿನ್ನೈಲ್ ಜಸ್ಟೀಸ್ ಕಮಿಟಿಯ ಸಭೆಯಲ್ಲಿ ಚರ್ಚಿತವಾಗಿರುವ ವಿಷಯಗಳಕುರಿತು ಮೂಡಿಸುವ ಸಂಬಂಧ ಕ್ರಿಯಾ ಯೋಜನೆ (Action Plan) ರೂಪಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಪತ್ರ ಸಂಖ್ಯೆ ಇ.ಪಿ.165.ಪಿ.ಜಿ.ಸಿ 2024. ದಿನಾಂಕ : 15-07-2024
2) ಮಾನ್ಯ ಆಯುಕ್ತರು ಅಬಕಾರಿ ಇಲಾಖೆ ರವರ ಪತ್ರ ಸಂಖ್ಯೆ : ಎಕ್ಸ್‌ಸ್.NDPS/38/2023 ದಿನಾಂಕ : 26-02-2024.

-.-.-.-.-.-

ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಆಯುಕ್ತರು ಅಬಕಾರಿ ಇಲಾಖೆಯವರು ಸರ್ಕಾರ[illegible] ಬರೆದಿರುವ ತಮ್ಮ ಪತ್ರದಲ್ಲಿ ಉಪ ಕಾರ್ಯದರ್ಶಿಗಳು, ಜುವಿನ್ನೈಲ್ ಜಹೀ ಕಮಿಟಿ, ಕರ್ನಾಟಕ ಉಚ್ಚ[illegible] ನ್ಯಾಯಾಲಯ, ಬೆಂಗಳೂರು ರವರು ದಿನಾಂಕ: 12.10.2023 ರಂದು ನಡೆಸಿರುವ ಸಭೆಯಲ್ಲಿ, ಪುಸ್ತಾಪಿಸಿರು[illegible] ಅಂಶಗಳಂತೆ.

ಶಾಲಾ/ಕಾಲೇಜುಗಳ ಸಮೀಪ ಮದ್ಯದಂಗಡಿಗಳಿದ್ದು, ಇದರಿಂದಾಗಿ ವಿದ್ಯಾಭ್ಯಾಸಕ್ಕೆ ಹಾಗ[illegible] ನಿರ್ವಹಣೆಗೆ. ತೊಂದರೆಯಾಗುತ್ತಿದ್ದಲ್ಲಿ, ಸಂಬಂದಪಟ್ಟ ಶೈಕ್ಷಣಿಕ ಸಂಸ್ಥೆಗಳವರು ಅಬಕಾರಿ ಇಲಾಖೆ[illegible] ದೂರು ಸಲ್ಲಿಸಲು ತಿಳಿಸುತ್ತಾ ಈ ಕುರಿತು ಅಬಕಾರಿ ಇಲಾಖೆಯಿಂದ ಕಮಕ್ಕೈಗೊಳ್ಳಲಾಗುವುದೆಂದ[illegible] ತಿಳಿಸಿರುತ್ತಾರೆ.

ವ್ಯಸನ ಮುಕ್ತಗೊಳಿಸುವ ಬಗ್ಗೆ, ಸಾರ್ವಜನಿಕರು, ಶಾಲಾ ಮಕ್ಕಳು ಹಾಗೂ ಪಾಲಕರಲ್ಲಿ ಜಾಗೃ[illegible] ಮೂಡಿಸಲು ಕ್ರಿಯಾ ಯೋಜನೆಯನ್ನು ರೂಪಿಸಲು ಶಿಕ್ಷಣ ಇಲಾಖೆಯು ಕರ್ನಾಟಕ ರಾಜ್ಯ ಮಾನಸಿ[illegible] ಆರೋಗ್ಯ ಪ್ರಾಧಿ ಕಾರ, ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ ಮತ್ತು ಅಬಕಾರಿ ಇಲಾಖೆ ಆಯುಕ್ತರೊಂದಿ[illegible] ಸಮನ್ವಯ ಸಾಧಿಸಬೇಕು ಎಂದು ತಿಳಿಸಲಾಗಿದೆ.

ಅದರಂತೆ ತಮ್ಮ ಜಿಲ್ಲಾ ವಾಪ್ತಿಯಲ್ಲಿ, ಶಾಲಾ/ಕಾಲೇಜುಗಳ ಸಮೀಪ ಮದ್ಯದಂಗಡಿಗಳಿದ್ದು[illegible] ಇದರಿಂದಾಗಿ ವಿಧ್ಯಾಭ್ಯಾಸಕ್ಕೆ ಹಾಗೂ ನಿರ್ವಹಣೆಗೆ. ತೊಂದರೆಯಾಗುತ್ತಿದ್ದಲ್ಲಿ, ಸಂಬಂದಪಟ್ಟ ಶೈಕ್ಷಣಿ[illegible] ಸಂಸ್ಥೆಗಳವರು ಅಬಕಾರಿ ಇಲಾಖೆಗೆ ದೂರು ಸಲ್ಲಿಸಿ ಸೂಕ್ತ ಕ್ರಮವಹಿಸಲು ತಿಳಿಸಿದೆ.

ನಿರ್ದೇಶಕರು (ಪ್ರೌಢ ಶಿಕ್ಷಣ)

ಗೆ
ರಾಜ್ಯದ ಎಲ್ಲಾ ಶೈಕ್ಷಣಿಕ ಜಿಲ್ಲೆಗಳ ಉಪನಿರ್ದೇಶಕರು (ಆ) , ಶಾಲಾ ಶಿಕ್ಷಣ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.

ಬಾರ್ ಸಮೀಪದಲ್ಲಿ ಖಾಸಗಿ ಕಾಲೇಜು ಇದ್ದು ಪಾರ್ಕಿಂಗ್ ವ್ಯವಸ್ಥೆ ಇಲ್ಲದಿದ್ದರೂ ಆಟದ ಮೈದಾನ ಇಲ್ಲದಿದ್ದರೂ ಖಾಲಿ ಇರೊ ಸ್ಥಳ ತೋರಿಸಿ ಮಾನ್ಯತೆ ಪಡೆದು ಮೇಲಾದಿಕಾರಿಗಳನ್ನೆ ಯಾಮಾರಿಸಿದ್ದಾರೆ ಎನ್ನಲಾಗಿದೆ.

ಒಟ್ಟಿನಲ್ಲಿ ಜಿಲ್ಲಾದಿಕಾರಿಗಳ ಅದೀನದಲ್ಲಿ ಬರುಬ ಅಬ್ಕಾರಿ ,ಶಿಕ್ಷಣ ಹಾಗೂ ಆರೋಗ್ಯ ಇಲಾಖಾದಿಕಾರಿಗಳ ಬೇಜವಬ್ದಾರಿ ತನವೊ ,ಜಿಲ್ಲಾದಿಕಾರಿಗಳ ಖಡಕ್ ಆಡಳಿತ ಇಲ್ಲದೆ ಸೂಕ್ತ ಮಾರ್ಗದರ್ಶನ ನಿರ್ದೇಶನಗಳಿಲ್ಲದೆ ಇರೊದ್ರಿಂದ ನ್ಯಾಯಾಲಯದ ಆದೇಶಗಳುಣ ಇಲಾಖಾ ಮೇಲಾದಿಕಾರಿಗಳ ಆದೇಶಕ್ಕೆ ಬೆಲೆ ಇಲ್ಲದಂತಾಗಿದೆ ಎಂದರೆ ತಪ್ಪಾಗಲಾರದು.

ಅದಿಕಾರಿಗಳ ಬೇಜವಬ್ದಾರಿತನವೊ ಅಥವಾ ಯಾವ್ದೊ ಪ್ರಲೋಭನೆಗೊಳಪಟ್ಟು ಅನುಮತಿ ನೀಡಿ ಇದೀಗ ಶಾಲಾ ಕಾಲೇಜಿನ ಮುಖ್ಯಸ್ಥರು ಅಬ್ಕಾರಿ ಇಲಾಖೆ ದೂರು ಸಲ್ಲಿಸಬಹುದು ಎಂಬ ಜ್ಞಾಪನಾ ಪತ್ರ ವಾರದಿಂದೀಚೆಗೆ ಹೊರಡಿಸಿದ್ದು ಜಿಲ್ಲಾಡಳಿತ ಜಾಣಕುರುಡು ಪ್ರದರ್ಶನ ಮಾಡುತ್ತಿದ್ದು ಸ್ಥಳೀಯ ಕಾನೂನು ಸೇವೆಗಳ ಪ್ರಾದಿಕಾರ ದೂರು ದಾಖಲಿಸಿಕೊಂಡು ಕ್ರಮವಹಿಸಬೇಕಾಗಿದೆ.

# ವಿಷಯ ತಿಳಿದ ಕೂಡಲೇ ಸಮಸ್ಯೆ ಬಗೆಹರಿಸಿ



**ಶಿಡ್ಲಘಟ್ಟ:** ರೈತರ ಬೆಳೆಗಳು ಒಣಗಿ ಹೋದ ಮೇಲೆ ನೀವು ಕರೆಂಟ್ ಕೊಟ್ಟರೆಷ್ಟು, ಬಿಟ್ಟರೆಷ್ಟು ಯಾವುದೇ ದೂರು ಬರುವವರೆಗೂ ಕಾಯದೇ ವಿಷಯ ತಿಳಿದ ತಕ್ಷಣ ಸಮಸ್ಯೆಗಳನ್ನು ಬಗೆ ಹರಿಸಬೇಕು ಎಂದು ಚಿಂತಾಮಣಿ ವಿಭಾಗದ ಕಾರ್ಯನಿರ್ಹಾಕ ಇಂಜಿನಿಯರ್ ಕೆ.ಶ್ರೀನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ನಗರದ ಬೆಸ್ಕಾಂ ಕಛೇರಿಯಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ನಿಗಮ ನಿಯಮಿತ ವತಿಯಿಂದ ಅಧಿಕಾರಿಗಳ ಹಾಗು ಗ್ರಾಹಕರ ಕುಂದುಕೊರತೆಗಳ ಸಂವಾದ ಸಭೆಯಲ್ಲಿ ಅವರು ಮಾತನಾಡಿದರು.

ಟ್ರಾನ್ಸ್ ಫಾರ್ಮರ್ ಸುಟ್ಟಿದೆ ಎಂದು ರೈತರು ತಿಳಿಸಿದ ತಕ್ಷಣವೇ ಬೇರೆ ಟ್ರಾನ್ಸ್ ಫಾರ್ಮರ್ ಅಳವಡಿಸಿಕೊಡಬೇಕು ಎಂದರು

ದಿಬ್ಬೂರಹಳ್ಳಿ, ಕೋರ್ಲಪರ್ತಿ ಹಾಗೂ ತಿಮ್ಮಸಂದ್ರ ಶಾಖೆಗಳಲ್ಲಿ ಐಪಿ ಸೆಟ್‌ಗಳ ಲೈನ್‌ಗಳಲ್ಲಿ ಕಳೆದ ಎರಡು ತಿಂಗಳಿಂದ ಲೋಡ್ ಹೆಚ್ಚಾಗಿದೆ. ಕಾರಣವೇನು, ಹಿಂದಿನ ತಿಂಗಳು ಮತ್ತು ಈ ತಿಂಗಳಲ್ಲಿ ವ್ಯತ್ಯಾಸ ನೋಡಿದಾಗ ಅಲ್ಲಿನ ಬದಲಾವಣೆ ನಿಮಗೆ ಗೊತ್ತಾಗುತ್ತದೆ, ಎಷ್ಟು ಬೋರ್‌ವೆಲ್‌ಗಳಿವೆ ಅದರಲ್ಲಿ ಎಷ್ಟು ಕೊಳವೆಬಾವಿಗಳು ರಿಚಾರ್ಜ್ ಆಗಿವೆ, ಎಷ್ಟು ನಿಂತಿವೆ ಎಂಬುವುದರ ಬಗ್ಗೆ ಸಮೀಕ್ಷೆ ಮಾಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬೈರಸಂದ್ರ ಶ್ರೀನಿವಾಸ್ ಮಾತನಾಡಿ ಪಾರೆಸ್ಟ್ ಜಾಗದಲ್ಲಿ ಒಬ್ಬೊಬ್ಬರು ಹೋಗುವುದಕ್ಕೆ ಆಗುವುದಿಲ್ಲ, ಲೈನ್ ಹೋಗಿರುವ ಕಡೆ ಮರಗಳು ಮತ್ತು ಬೇಲಿ ಗಿಡಗಳು ಬೆಳೆದು ಹಬ್ಬಿಕೊಂಡು, ಮಳೆಗಾಲದಲ್ಲಿ ಎಪ್ 3 ಲೈನ್ ಮೇಲೆ ಮರಗಳು ಬಿದ್ದಾಗ ಮೂರು ದಿನಗಳಾದರು ಸಮಸ್ಯೆ ಬಗೆಹರಿಸಲು ಕಷ್ಟವಾಗುತ್ತದೆ. ಕರೆಂಟ್ ಇರುವುದಿಲ್ಲ ಮಳೆಗಾಲ ಪ್ರಾರಂಭವಾಗುವುದಕ್ಕೆ ಮೊದಲು ಲೈನ್ ದುರಸ್ಥಿ ಮಾಡಿಕೊಡಬೇಕು ಎಂದರು.

ಕಾರ್ಯನಿರ್ಹಾಕ ಇಂಜಿನಿಯರ್ ಕೆ. ಶ್ರೀನಾಥ್ ಸಭೆಯಲ್ಲಿ ರೈತರ ಸಮಸ್ಯೆಗಳನ್ನು ಆಲಿಸಿ ಮಾತನಾಡಿದ ಅವರು ಲೈನ್ ಬೇರೆ ಕಡೆ ಸ್ಥಳಾಂತರ ಮಾಡಲು ಅಧಿಕಾರಿಗೆ ಸೂಚನೆ ನೀಡಿದರು.

ರೈತ ಸಂಘದ ತಾಲ್ಲೂಕು ಅಧ್ಯಕ್ಷ ರವಿಪ್ರಕಾಶ್ ಮಾತನಾಡಿ ,ದಿಬ್ಬೂರಹಳ್ಳಿ ಶಾಖೆಯಲ್ಲಿ ಟ್ರಾನ್ಸ್ ಫಾರ್ಮರ್ ಸುಟ್ಟರೆ ನಿಮ್ಮದೇ ವಾಹನ ಇದ್ದರು ಕೂಡ ರೈತರು ಸುಟ್ಟ ಟ್ರಾನ್ಸ್‌ಫಾರ್ಮರ್‌ನ್ನು ಬಾಡಿಗೆ ವಾಹನದಲ್ಲಿ ಹಣ ಕೊಟ್ಟು ಸಾಗಾಣಿಕೆ ಮಾಡುತ್ತಿದ್ದಾರೆ ಎಂದರು.


ಒಂದು ಟ್ರಾನ್ಸ್ ಫಾರ್ಮರ್ ಕೊಡುವುದಕ್ಕೆ 7 ದಿನಗಳು ಆಗಬೇಕಾ ಅಷ್ಟರಲ್ಲಿ ಬೆಳೆಗಳು ಒಣಗಿ ಹೋಗುತ್ತವೆ ಎಂದು ರೈತರ ಸಮಸ್ಯೆಗಳ ಬಗ್ಗೆ ಹೇಳಿದರು.

ಅದಕ್ಕೆ ಉತ್ತರಿಸಿದ ಶಾಖಾಧಿಕಾರಿ ಆ ರೈತ ಫೋನ್ ಕಾಲ್ ಮಾಡಿ ಮಾತನಾಡುತ್ತಾರೆ ಆದರೆ ಆ ರೈತನ ಮುಖ ನೋಡಿಲ್ಲ ಅವರು ಕಛೇರಿ ಕಡೆ ಬಂದೇ ಇಲ್ಲ ನಾವು ಯಾರಂತ ತಿಳಿದುಕೊಳ್ಳಬೇಕು ನೇರವಾಗಿ ಕಛೇರಿಗೆ ಬಂದು ಮಾತನಾಡಿ ಅವರ ಸಮಸ್ಯೆ ತಿಳಿಸಿದರೆ ಅವರ ಸಮಸ್ಯೆಗೆ ಸ್ಪಂದಿಸುವ ಕೆಲಸ ಮಾಡುತ್ತೇವೆ ಎಂದು ಅವರು ಉತ್ತರಿಸಿದರು.

ನಿರಂತರ ಜ್ಯೋತಿ ವಿದ್ಯುತ್ ಲೈನ್ ಗೆ ಸಿಂಗಲ್ ಮೋಟರ್ ಕನೆಕ್ಷನ್ ಹಾಕಿಕೊಳ್ಳುತ್ತಾರೆ ಎಂದು ಗ್ರಾಹಕರು ಕೇಳಿದ ಪ್ರಶ್ನೆಗೆ ಉತ್ತರಿಸಿ ಅಂತಹವರು ಕನೆಕ್ಷನ್ ಹಾಕಿಕೊಂಡಾಗ ವಿಜಿಲೆನ್ಸ್ ತಿಳಿಸಿ ಅವರು ಸ್ಥಳಕ್ಕೆ ಬೇಟಿ ನೀಡಿ ಸೂಕ್ತ ಕ್ರಮ ಕೈಗೊಳ್ಳುತ್ತಾರೆ ಎಂದು ತಿಳಿ ಹೇಳಿದರು.

ಈ ಸಂದರ್ಭದಲ್ಲಿ ಬೆಸ್ಕಾಂ ಗ್ರಾಮಾಂತರ ಸಹಾಯಕ ಕಾರ್ಯಪಾಲಕ ಇಂಜನಿಯರ್ ಪ್ರಭು, ಬೆಸ್ಕಾಂ ನಗರ ಸಹಾಯಕ ಕಾರ್ಯಪಾಲಕ ಇಂಜನಿಯರ್ ಜಯರಾಂ, ಸಹಾಯಕ ಇಂಜಿನಿಯರ್ ಹಾಗು ಕಿರಿಯ ಇಂಜಿನಿಯರ್ ಗಳು, ಎಲ್ಲಾ ಶಾಖಾಧಿಕಾರಿಗಳು, ಗ್ರಾಹಕರು ಹಾಜರಿದ್ದರು.

# ದೇವಸ್ಥಾನ ನೆಮ್ಮದಿ ನೀಡುವ ಧಾರ್ಮಿಕ ಕೇಂದ್ರ



**ಚೇಳೂರು:** ದೇವಸ್ಥಾನಗಳು ಮನುಷ್ಯರಿಗೆ ಶಾಂತಿ ಮತ್ತು ನೆಮ್ಮದಿ ನೀಡುವ ಧಾರ್ಮಿಕ ಕೇಂದ್ರಗಳಾಗಿವೆ ಎಂದು ಸಮಾಜ ಸೇವಕ ಹಾಗೂ ಬಿಜೆಪಿ ಮುಖಂಡರಾದ ಗುಂಜೂರು ಆರ್.ಶ್ರೀನಿವಾಸರೆಡ್ಡಿ ತಿಳಿಸಿದರು.

ಚೇಳೂರು ತಾಲ್ಲೂಕಿನ ಪಾಳ್ಯಕೆರೆ ಗ್ರಾಮದಲ್ಲಿ ಶ್ರೀ ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಸ್ಥಾನದ ವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು ಯಾವುದೇ ಗ್ರಾಮಕ್ಕೆ ಕಾಲಿಟ್ಟರೂ ಗ್ರಾಮಸ್ಥರ ಶಕ್ತಿಗನುಸಾರ ಒಂದು ದೇವಾಲಯಗಳನ್ನು ಕಾಣಬಹುದು. ಇದು ಜನರು ದೇವರ ಬಗ್ಗೆ ಇಟ್ಟಿರುವ ನಂಬಿಕೆ ಹಾಗೂ ಭಕ್ತಿಯನ್ನು ತೋರಿಸುತ್ತದೆ. ಗ್ರಾಮಗಳಲ್ಲಿನ ದೇಗುಲಗಳು ಸಮಾಜದಲ್ಲಿ ಶಾಂತಿ ನೆಮ್ಮದಿ ಸೌಹಾರ್ದದ ಪ್ರತೀಕವಾಗಿವೆ. ನಮ್ಮ ಹಿರಿಯರು ನಡೆಸಿಕೊಂಡು ಬರುತ್ತಿದ್ದ ಧಾರ್ಮಿಕ ಸಂಪ್ರದಾಯಗಳನ್ನು ನಿರ್ಲಕ್ಷ್ಯ ಮಾಡದೆ ಅವರು ಹಾಕಿಕೊಟ್ಟ ಧಾರ್ಮಿಕ ದಾರಿಯಲ್ಲಿ ನಡೆದರೆ ಲೋಕಕ್ಕೆ ಒಳ್ಳೆಯದಾಗುತ್ತದೆ. ಇತ್ತೀಚೆಗೆ ಯುವ ಪೀಳಿಗೆ ಆಧುನಿಕತೆಯ ಗುಂಗಿನಲ್ಲಿ ಧಾರ್ಮಿಕ ಕಾರ್ಯಗಳಲ್ಲಿ ಭಾಗವಹಿಸುವುದು ಕಡಿಮೆಯಾಗುತ್ತಿದೆ. ಇದು ಶೋಚನೀಯ ವಿಚಾರ. ಧಾರ್ಮಿಕ ಚಟುವಟಿಕೆಗಳಲ್ಲಿ ಈಗಿನ ಯುವ ಪೀಳಿಗೆಯನ್ನು ಹೆಚ್ಚೆಚ್ಚು ತೊಡಗಿಸಿಕೊಳ್ಳುವುದರಿಂದ ಉತ್ತಮ ಸಮಾಜ ನಿರ್ಮಿಸಲು ಸಾಧ್ಯ. ಪೋಷಕರು ಮಕ್ಕಳಲ್ಲಿ ಉತ್ತಮ ಸಂಸ್ಕಾರಗಳನ್ನು ಬೆಳೆಸಬೇಕು. ಧಾರ್ಮಿಕತೆಯ ಬಗ್ಗೆ ತಿಳಿಸಬೇಕು, ಕೇವಲ ಪುಸ್ತಕಗಳಿಗಷ್ಟೇ ಸೀಮಿತ ಮಾಡಿದರೆ ಸಾಲದು. ಧಾರ್ಮಿಕತೆಯ ಪಾಠವನ್ನೂ ಸಹ ಮಾಡಬೇಕಾಗಿದೆ. ದೇವಾಲಯಗಳ ನಿರ್ಮಾಣ ಒಂದು ಪವಿತ್ರ ಕೆಲಸ. ಇದು ಕಷ್ಟದ ಕೆಲಸವಾದರು ನಿರಂತರವಾಗಿ ನಡೆಯುತ್ತಿರಬೇಕು. ಸಮಿತಿಯ ಪದಾಧಿಕಾರಿಗಳ ನಿಸ್ವಾರ್ಥ ಸೇವೆ, ಪ್ರಾಮಾಣಿಕ ಪರಿಶ್ರಮ ಬಹಳಷ್ಟು ಇರುತ್ತದೆ. ದೇವಾಲಯಗಳು ಪೂಜಾ ಕೇಂದ್ರಗಳು ಮಾತ್ರವಲ್ಲದೆ ರಾಷ್ಟದ ಸಾಮಾಜಿಕ–ಆರ್ಥಿಕತೆಯ ನಿರ್ಣಾಯಕ ಅಂಶಗಳಾಗಿವೆ. ದೇವಾಲಯಗಳು ಸಭೆ ಸಮಾರಂಭಗಳಿಗೆ ಕೇಂದ್ರಬಿಂದುಗಳಾಗಿ ಕಾರ್ಯನಿರ್ವಹಿಸುತ್ತವೆ, ಏಕತೆಯ ಭಾವನೆ ಮತ್ತು ಹಂಚಿಕೆಯ ಗುರುತನ್ನು ಬೆಳೆಸುತ್ತವೆ. ಹಬ್ಬಗಳು ಮತ್ತು ಕಾರ್ಯಕ್ರಮಗಳು ಸಾಮಾಜಿಕ ಗಡಿಗಳನ್ನು ಮೀರಿ ಜನರನ್ನು ಒಟ್ಟುಗೂಡಿಸುತ್ತವೆ. ಅನೇಕ ದೇವಾಲಯಗಳು ಶಿಕ್ಷಣ ಸಂಸ್ಥೆಗಳು ಮತ್ತು ಆಸ್ಪತ್ರೆಗಳನ್ನು ನಡೆಸುತ್ತಿವೆ, ಸಮಾಜದ ಕಲ್ಯಾಣಕ್ಕೆ ಕೊಡುಗೆ ನೀಡುತ್ತಿವೆ. ಶಿಕ್ಷಣವು ಕೇವಲ ಆಧ್ಯಾತ್ಮಿಕವಾಗಿರದೆ ಇತರ ಹಲವು ಕ್ಷೇತ್ರಗಳನ್ನು ಸಹ ಒಳಗೊಂಡಿದೆ. ಆದ್ದರಿಂದ ಸಮಾಜದಲ್ಲಿ ದೇವಸ್ಥಾನಗಳ ನಿರ್ಮಾಣ ಬಹಳ ಪ್ರಾಮುಖ್ಯತೆಯನ್ನು ಪಡೆದಿದೆ ಎಂದರು.

ಈ ಸಂದರ್ಭದಲ್ಲಿ ಶ್ರೀ ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಸ್ಥಾನದ ಆಡಳಿತ ಮಂಡಳಿಯ ಪದಾಧಿಕಾರಿಗಳು, ಸದಸ್ಯರು ಮತ್ತು ಗ್ರಾಮದ ಮುಖಂಡರು ಹಾಜರಿದ್ದರು.



**ಚೇಳೂರು ತಾಲ್ಲೂಕಿನ ಪಾಳ್ಯಕೆರೆ ಗ್ರಾಮದಲ್ಲಿ ಎರಡು ದಿನಗಳ ಕಾಲ ಶ್ರೀದೇವಿ ಭೂದೇವಿ ಸಮೇತ ಶ್ರೀ ಲಕ್ಷಿ ವೆಂಕಟರಮಣಸ್ವಾಮಿ. ಗಣಪತಿ. ಆಂಜನೇಯಸ್ವಾಮಿ. ಗರುಡ. ಗರುಡಸ್ಥಂಭ. ಮತ್ತು ಗೋಪುರ ಕುಂಭಾಭೀಷೇಕ. ಪ್ರತಿಷ್ಠಾಪನೆಯ ಮಹೋತ್ಸವವು ಈ ತಿಂಗಳ 16 ಮತ್ತು 17 ರಂದು ಸಡಗರದಿಂದ ನಡೆಯಿತು. ಅಭಿಷೇಕಗಳು. ಹೋಮ. ಹವನಗಳು. ಮಹಾಕುಂಭಾಬೀಷೇಕ. ಪುಷ್ಪಾಲಂಕಾರಗಳು ನಡೆಯಿತು. ಕ್ಷೇತ್ರದ ಶಾಸಕ ಎಸ್.ಎನ್.ಸುಬ್ಬಾರೆಡ್ಡಿ ತಹಸೀಲ್ದಾರ್ ಶ್ರೀನಿವಾಸನಾಯುಡು. ನೂರಾರು ದಾನಿಗಳು. ಭಕ್ತರು ಆಗಮಿಸಿದ್ದರು.**

# ಅಂಬೇಡ್ಕರ್ ಭವನ, ಅಂಗನವಾಡಿ ಕಾಮಗಾರಿಗಳಿಗೆ ಭೂಮಿಪೂಜೆ

**ಚಿಕ್ಕಬಳ್ಳಾಪುರ:** ಕಾಲಾವಕಾಶ ಬೇಡುವ ಸಮಸ್ಯೆಗಳಿಗೆ ಅಧಿಕಾರಿಗಳಿಂದಲೇ ಯಾವಾಗ ಮಾಡಿಕೊಡುತ್ತೀರಿ ಎಂದು ಬಾಯಿ ಬಿಡಿಸಿ ಅದೇ ದಿನಾಂಕವನ್ನು ದೂರುದಾರರಿಗೆ ತಿಳಿಸಿ ಈ ಅವಧಿ ಒಳಗೆ ಕೆಲಸ ಮಾಡಲಿಲ್ಲ ಎಂದರೆ ನನಗೆ ತಿಳಿಸಿ ಎನ್ನುತ್ತಾ ಸಾಂತ್ವನ ಹೇಳಿ ಕಳಿಸುತ್ತಿದ್ದ ದೃಶ್ಯಗಳು ಜನಪರ ನಾಯಕರೊಬ್ಬರ ನೈಜ ಕಾರ್ಯವೈಖರಿಗೆ ಹಿಡಿದ ಕನ್ನಡಿಯಂತಿತ್ತು ಎಸ್.ಗೊಲ್ಲಹಳ್ಳಿ ಪಂಚಾಯಿತಿಯಲ್ಲಿ ಮುಂದುವರೆದ ನಮ್ಮೂರಿಗೆ ನಮ್ಮ ಶಾಸಕ

ತಾಲೂಕು ಎಸ್.ಗೊಲ್ಲಹಳ್ಳಿ ಗ್ರಾಪಂನ ಗೊಲ್ಲದೊಡ್ಡಿ ಗ್ರಾಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ನಮ್ಮೂರಿಗೆ ನಮ್ಮ ಶಾಸಕ ಕಾರ್ಯಕ್ರಮ ಹಮ್ಮಿಕೊಂಡು ಜನರ ಕಷ್ಟಗಳಿಗೆ ಸ್ಪಂದಿಸಿದರು.

ತಾಲೂಕಿನ ಎಸ್.ಗೊಲ್ಲಹಳ್ಳಿ ಗ್ರಾ ಮ ಪ ಂ ಚಾ ಯಿ ತಿ ಯ ಲ್ಲಿ ಸೋಮವಾರ ಶಾಸಕ ಪ್ರದೀಪ್ ಈಶ್ವರ್ ಹಮ್ಮಿಕೊಂಡಿದ್ದ ನಮ್ಮೂರಿಗೆ ನಮ್ಮ ಶಾಸಕ ಕಾರ್ಯಕ್ರಮದಲ್ಲಿ ನೂತನ ಅಂಬೇಡ್ಕರ್ ಭವನ, ಅಂಗನವಾಡಿ ಕಟ್ಟಡ ಮತ್ತು ಸರಕಾರಿ ಶಾಲೆ ನವೀಕರಣ ಸೇರಿ ಒಟ್ಟು 12 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿದರು. ಗೊಲ್ಲದೊಡ್ಡಿ ಗ್ರಾಮದ ದೇವಾಲಯದ ಮುಂಭಾಗ ಚಾಪೆಯ ಮೇಲೆ ಕುಳಿತ ಶಾಸಕರು ಮತ್ತು ಅಧಿಕಾರಿಗಳು ಸಾರ್ವಜನಿಕರಿಗೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು ಅಹವಾಲು ಸಲ್ಲಿಸಿ ಕಷ್ಟಗಳನ್ನು ಹೇಳಿಕೊಂಡರು. ಅಹವಾಲು ಸ್ವೀಕರಿಸಿದ ಶಾಸಕರು ಪರಿಹಾರ ಆಗಬಹುದಾದ ಸಮಸ್ಯೆಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಾಣಿಸಿ ದರು. ಕಾಲಾವಕಾಶ ಬೇಡುವ ಸಮಸ್ಯೆಗಳಿಗೆ ಅಧಿಕಾರಿಗಳಿಂದಲೇ ಯಾವಾಗ ಮಾಡಿಕೊಡುತ್ತೀರಿ ಎಂದು ಬಾಯಿಬಿಡಿಸಿ ಅದೇ ದಿನಾಂಕವನ್ನು ದೂರುದಾರರಿಗೆ ತಿಳಿಸಿ ಈ ಅವಧಿ ಒಳಗೆ ಕೆಲಸ ಮಾಡಲಿಲ್ಲ ಎಂದರೆ ನನಗೆ ತಿಳಿಸಿ ಎನ್ನುತ್ತಾ ಸಾಂತ್ವಾನ ಹೇಳಿ ಕಳಿಸುತ್ತಿದ್ದ ದೃಶ್ಯಗಳು ಜನಪರ ನಾಯಕ ರೊಬ್ಬರ ನೈಜ ಕಾರ್ಯವೈಖರಿಗೆ ಹಿಡಿದ ಕನ್ನಡಿಯಂತಿತ್ತು.

ಈ ವೇಳೆ ಮಾಧ್ಯಮದೊಂದಿಗೆ ಮಾತನಾಡಿದ ಶಾಸಕ ಪ್ರದೀಪ್ ಈಶ್ವರ್ ಗೊಲ್ಲದೂಡ್ಡಿ ಗ್ರಾಮದಲ್ಲಿ 100 ಕ್ಕೂ ಹೆಚ್ಚು ಅರ್ಜಿಗಳು ಬಂದಿವೆ ಪಿಂಚಣಿ ಸಮಸ್ಯೆ ರಸ್ತೆ ಅಭಿವೃದ್ಧಿ ಬೀದಿ ದೀಪಗಳ ಅಳವಡಿಕೆ ಸೇರಿ ಹಲವಾರು ಸಮಸ್ಯೆಗಳ ಅಹ್ವಾಲು ಸ್ವೀಕರಿಸಿದ್ದು ಆದಷ್ಟೂ ಬೇಗ ಬಗೆಹರಿಸಲಾಗುವುದು ಎಂದು ತಿಳಿಸಿದರು.ಹಳ್ಳಿಗಳತ್ತ ಹೋದರೆ ಜನರ ಸಮಸ್ಯೆಗಳನ್ನು ಅರಿಯಲು ಸಾಧ್ಯ ಹಾಗಾಗಿ ಜನರ ಬಳಿಗೆ ಹೋಗಿ ಅವರ ಸಮಸ್ಯೆಗಳನ್ನು ಕೇಳಿ ಪರಿಹರಿಸಲು ಕಾಳಜಿಯಿಂದ ಕೆಲಸ ಮಾಡುತ್ತಿದ್ದೇನೆ ಎಂದರು.ಇನ್ನು ರಸ್ತೆಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುತ್ತಿದ್ದು ಚಿಕ್ಕಬಳ್ಳಾಪುರ ನಗರಕ್ಕೆ ಸಂಪರ್ಕ ಕಲ್ಪಿಸುವ ಮುಷ್ಟುರು ರಸ್ತೆ,ಕಂದವಾರ ರಸ್ತೆ ಸೇರಿ ಇನ್ನು ಹಲವು ರಸ್ತೆಗಳನ್ನು



40 ಕೋಟಿ ರೂ ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು ಒಂದು ವಾರದಲ್ಲಿ ಕಾಮಗಾರಿ ಶುರುವಾಗಲಿದೆ ಎಂದರು. ಇನ್ನು ಚಿಕ್ಕಬಳ್ಳಾಪುರದಲ್ಲಿ ಸ್ವತ್ತುಗಳ ಬಿ ಖಾತಾ ಮಾಡಿಸಿಕೊಳ್ಳಲು ಅಭಿಯಾನ ಶುರುವಾಗಲಿದ್ದು ಪ್ರತಿ ವಾರ್ಡ್ನನಲ್ಲಿ ಖಾತೆ ಕ್ಯಾಂಪ್ ಆಯೋಜಿಸಿಲಾಗುವುದು,

ಮಧ್ಯವರ್ತಿಗಳ ಹಾವಳಿ ತಪ್ಪಿಸಲು ಅಭಿಯಾನ ಶುರುವಾಗಲಿದ್ದು ಜನರು ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.ಇನ್ನು ಕಾಂಗ್ರೆಸ್ ಪಕ್ಷದ ನಿರ್ದೇಶನದಂತೆ ಪ್ರತಿ ಜಿಲ್ಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಕಚೇರಿ ನಿರ್ಮಾಣ ಆಗಲಿದ್ದು ಚಿಕ್ಕಬಳ್ಳಾಪುರದಲ್ಲಿ ಕೂಡ ಸ್ಥಳ ಗುರುತಿಸಲಾಗಿದೆ ಸರ್ಕಾರಕ್ಕೆ ಪ್ರಸ್ತಾವನೆ ಕಳಿಸಲಾಗಿದೆ ಎಂದರು.ಕರ್ನಾಟಕದ ಸಂಸ್ಕೃತಿಗೆ ಪಾರಂಪರೆಗೆ ಶ್ರೀ ಕೃಷ್ಣದೇವರಾಯರ ಅವರದೇ ಆದಂತಹ ಕೊಡುಗೆ ಇದೆ ಚಿಕ್ಕಬಳ್ಳಾಪುರದಲ್ಲಿ ಶ್ರೀ ಕೃಷ್ಣದೇವರಾಯರ ವಿಗ್ರಹ ಸ್ಥಾಪಿಸಲು ಮನವಿಗಳು ಬಂದಿವೆ ಸೂಕ್ತ ಜಾಗವನ್ನು ಗುರುತಿಸಿ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಚರ್ಚಿಸಿ ಶ್ರೀ ಕೃಷ್ಣದೇವರಾಯರ ವಿಗ್ರಹ ಪ್ರತಿಷ್ಠಾಪನೆಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದರು.

ಈ ಸಂಧರ್ಭದಲ್ಲಿ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೇಶವರೆಡ್ಡಿ, ನಗರಸಭೆ ಸದಸ್ಯ ಕಣಿತಹಳ್ಳಿ ವೆಂಕಟೇಶ್, ರಮಸ್ವಾಮಿ,ಶಿಶಿ, ಅರವಿಂದ್,ಗವಿರಾಯಪ್ಪ, ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಯುವ ಕಾಂಗ್ರೆಸ್ ಅಧ್ಯಕ್ಷ ನಾಗೇಶ್ ರೆಡ್ಡಿ,ತಹಶೀಲ್ದಾರ್ ಅನಿಲ್ ಕುಮಾರ್,ಇಒ ಮಂಜುನಾಥ್, ತಾಲೂಕು ಆರೋಗ್ಯಾಧಿಕಾರಿ ಡಾ.ಮಂಜುಳ,ತಾಲೂಕು ಸಹಾಯಕ ಕೃಷಿ ಅಧಿಕಾರಿ ಮುನಿರಾಜು.ಸೇರಿ ಎಲ್ಲಾ 36 ಇಲಾಖೆಗಳ ಅಧಿಕಾರಿಗಳು ಮತ್ತು ಇತರರು ಉಪಸ್ಥಿತರಿದ್ದರು.

# ಮಗುವಿಗೆ ಆರ್ಥಿಕ ನೆರವು

ಇಟ್ಟಪ್ಪನಹಳ್ಳಿ ಗ್ರಾಮದ ಸುಕನ್ಯಾ ಮತ್ತು ಅಂಬರೀಶ್ ದಂಪತಿಗಳ ಪುತ್ರ 10 ವರ್ಷದ ರಾಜೇಶ್ ಜನ್ಮತಹ: ವಿಶೇಷ ಚೇತನ ಮಗುವಾಗಿದೆ.ಕೈಕಾಲು ಕುತ್ತಿಗೆ ತಲೆ ನೇರವಾಗಿ ನಿಲ್ಲಲಾಗಲ್ಲ. ಮಲಗಿದ್ದ ಲ್ಲಿಯೇ ಮಗು ಇರುತ್ತದೆ.ಇಂತಹ ಮಗುವಿನ ಚಿಕಿತ್ಸೆಗೆ ಏನಾದರೂ ಸಹಾಯ ಮಾಡಿ ಎಂದು ತಾಯಿ ಶಾಸಕರಿಗೆ ಮನವಿ ಮಾಡಿದರು.ಕೂಡಲೇ ಸ್ಪಂಧಿಸಿದ ಅವರು ತಾಲೂಕು ವೈದ್ಯಾಧಿಕಾರಿಗಳಿಗೆ ಈ ಬಗ್ಗೆ ಗಮನಿಸಲು ಸೂಚಿಸಿದರಲ್ಲದೆ ತಾಯಿಗೆ 5 ಸಾವಿರ ನಗದು ನೀಡಿದರು. ಸ್ಥಳದಲ್ಲಿಯೇ ಇದ್ದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ನಮ್ಮ ಇಲಾಖೆಯಿಂದಲೂ ಮಗುವಿನ ಆರೈಕೆಗೆ ಪ್ರತಿ ತಿಂಗಳು 1ಸಾವಿರ ಕೊಡಿಸುವ ಬಗ್ಗೆ ಶಾಸಕರಿಗೆ ತಿಳಿಸಿದರು. ಇದರಿಂದ ಸಂತೋಷ ಗೊಂಡ ರಾಜೇಶ್ ಅವರ ತಾಯಿ ಶಾಸಕರಿಗೆ ಧನ್ಯವಾದಗಳನ್ನು ಸಲ್ಲಿಸಿದರು.

# ಬೆಳೆ ವಿಮೆ ರೈತ ಸಂಪರ್ಕ ಕೇಂದ್ರ ಸಂಪರ್ಕಿಸಿ

**ನಾಗಮಂಗಲ:** 2023 –2024 ನೇ ಸಾಲಿನ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಅಡಿ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಬೆಳೆ ವಿಮೆಗೆ ನೊಂದಣಿ ಯಾಗಿರುವ ರೈತರ ಪೈಕಿ 20648 ಪ್ರಸ್ತಾವನೆಗಳು ಬೆಳೆ ಸಂರಕ್ಷಣೆಯಲ್ಲಿ ದಾಖಲಾಗಿರುವ ದತ್ತಾಂಶ ಮತ್ತು ಬೆಳೆ ಸಮೀಕ್ಷೆಯಲ್ಲಿನ ದತ್ತಾಂಶಕ್ಕೂ ತಾಳೆ ಬಾರದ ಕಾರಣ ವಿಮಾ ಸಂಸ್ಥೆಯಿಂದ ತಿರಸ್ಕತಗೊಂಡಿದೆ.

ಸದರಿ ಪ್ರಸ್ತಾವನೆಗಳನ್ನ ಸಹಾಯಕ ಕೃಷಿ ನಿರ್ದೇಶಕರ ಕಚೇರಿ ರೈತ ಸಂಪರ್ಕ ಕೇಂದ್ರ ಆಯಾ ಗ್ರಾಮ ಪಂಚಾಯಿತಿಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆ ಮಾಡಿದ್ದು ರೈತರು ಆಕ್ಷೇಪಣೆ ಸಲ್ಲಿಸಲು 15 ದಿವಸಗಳ ಕಾಲಾವಕಾಶವಿರುತ್ತದೆ.

ರೈತರು ಸೂಕ್ತದಾಖಲಾತಿಗಳೊಂದಿಗೆ ರೈತ ಸಂಪರ್ಕ ಕೇಂದ್ರ ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ

# ಠಾಣೆಯಲ್ಲಿ ಸೀಮಂತ ಕಾರ್ಯಕ್ರಮ




**ಶಿಡ್ಲಘಟ್ಟ:** ಸುಮಾರು ವರ್ಷಗಳಿಂದ ಪೊಲೀಸ್ ಇಲಾಖೆಯಲ್ಲಿರುವ " ಶ್ರೀಮತಿ ಮಹಾನಂದ ಲಕ್ಷ್ಮಿಪತಿ" ಅವರು ತಮ್ಮ ಜತೆ ಕೆಲಸ ಮಾಡುವ ಹೆಣ್ಣು ಮಗಳು. ಆಕೆ ಗರ್ಭಿಣಿಯಾಗಿದ್ದು, ಠಾಣೆಯ ಎಲ್ಲಾ ಸಹೋದ್ಯೋಗಿಗಳು ಸೇರಿ ಕುಟುಂಬ ಸದಸ್ಯರ ರೀತಿಯಲ್ಲಿ ಸೀಮಂತ ಕಾರ್ಯ ನೆರವೇರಿಸಿ, ಶುಭ ಕೋರಲಾಗಿದೆ ಎಂದು ಆರಕ್ಷಕ ನಿರೀಕ್ಷಕ ಶ್ರೀನಿವಾಸ್ ತಿಳಿಸಿದ್ದಾರೆ.

ನಗರದ ಪೊಲೀಸ್ ಠಾಣೆಯ ಮಹಿಳಾ ಸಿಬ್ಬಂದಿ ಎಂಟು ತಿಂಗಳ ಗರ್ಭಿಣಿಯಾದ ' ಶ್ರೀಮತಿ ಮಹಾನಂದ ಲಕ್ಷ್ಮಿಪತಿ' ಅವರಿಗೆ ಪೋಲೀಸ್ ಠಾಣೆಯ ಸಿಬ್ಬಂದಿಯಿಂದ ಸೀಮಂತ ಕಾರ್ಯ ಮಾಡಿರುವುದರಿಂದ ಸಾರ್ವಜನಿಕರ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದ್ದಾರೆ.

ನಗರ ಠಾಣೆಯ ಪಿಎಸ್ಐ ವೇಣುಗೋಪಾಲ್ ಮಾತನಾಡಿ, ಬಿಡುವಿಲ್ಲದ ಕೆಲಸದ ಒತ್ತಡದಲ್ಲಿಯೂ ಮಹಿಳಾ ಸಿಬ್ಬಂದಿಯೊಬ್ಬರ ಸೀಮಂತ ನೆರವೇರಿಸಲಾಗಿದ್ದು ಪೋಲೀಸ್ ಇಲಾಖೆಯಲ್ಲಿ ಮಹಿಳೆಯರು ಕೆಲಸ ಮಾಡುವುದು ಕಠಿಣ,ಮಹಿಳಾ ಸಹೋದ್ಯೋಗಿಗಳ ಬಗ್ಗೆ ನಿರ್ಲಕ್ಷ್ಯ ಮತ್ತು ತಾತ್ಸಾರ ಮನೋಭಾವ ಇರುತ್ತದೆ ಎಂಬ ಭಾವನೆಯಿದೆ, ಆದರೆ ನಮ್ಮ ಠಾಣೆಯಲ್ಲಿ ಮಹಿಳಾ ಸಿಬ್ಬಂದಿಯನ್ನು ಗೌರವದಿಂದ ಕಾಣಲಾಗುತ್ತದೆ ಕುಟುಂಬದವರಂತೆ "ಸೀಮಂತ" ಮಾಡಿಕೊಟ್ಟಿರುವುದು ಅತ್ಯಂತ ಖುಷಿಕೊಟ್ಟಿದೆ ಎಂದರು.

ಈ ವೇಳೆ ನಗರ ಪೋಲಿಸ್ ಠಾಣೆಯ ಸಿಬ್ಬಂದಿ ವರ್ಗ ಹಾಗು ಇನ್ನಿತರರು ಪಾಲ್ಗೊಂಡಿದ್ದರು.

# ಸೇವಾಲಾಲ್ ಮಹಾರಾಜ್‌ರ ಭಕ್ತಿಗೀತೆ ಲೋಕಾರ್ಪಣೆ



**ಬೆಂಗಳೂರು:** ಬಂಜಾರ ಸಮಾಜದ ಪೂಜ್ಯ ಗುರುಗಳಾದ ಶ್ರೀ ಸಂತ ಸೇವಾಲಾಲ್ ಮಹಾರಾಜ್ ರವರ 286ನೇ ಜಯಂತಿ ಪ್ರಯುಕ್ತ ಎರಡು ಭಕ್ತಿ ಪ್ರದಾನ ಗೀತೆಗಳನ್ನು **@ gorbanjarasongs https://youtube.com** ನಲ್ಲಿ ಶ್ರೀ ಸಂತ ಸೇವಾಲಾಲ್ ಮಹಾರಾಜರ ಮತ್ತು ಶ್ರೀ ದುರ್ಗಾದೇವಿಯ ಕೃಪಾಶೀರ್ವಾದದಿಂದ ಶ್ರೀ ದುರ್ಗಾಬಾ ಮೂವಿ ಕ್ರಿಯೇಷನ್ಸ್ ಬ್ಯಾನರ್‌ನಡಿ ಯಲಹಂಕ ತಹಸಿಲ್ದಾರ್ ಶ್ರೇಯಸ್ ಲೋಕಾರ್ಪಣೆ ಗೊಳಿಸಿದರು.

ಶ್ರೀ ಸಂತ ಸೇವಾಲಾಲ್ ಮಹಾರಾಜ ಗುರುಗಳ ಭಕ್ತಿ ಪ್ರಧಾನ ಗೀತೆಗಳನ್ನು ನಿರ್ಮಾಪಕಿ ಸೀಮಾ ರಾಠೋಡ್ ಮತ್ತು ಯೂಟ್ಯೂಬ್ ಚಾನೆಲ್ ಮಾಲೀಕ ಡಿ. ಕುಮಾರಸ್ವಾಮಿ ಅವರುಗಳು ಹೂರತಂದಿದ್ದು, ಗೀತೆಗಳನ್ನು ಪ್ರಸಿದ್ಧ ಗಾಯಕರಾದ ದೇವೇಂದ್ರ ಎಮ್. ಎಮ್ ಹಾಗೂ ಮೌನಿಕಾ. ಸನ್ನಿ ಸಂತೋಷ್ ಪವಾರ್. ಅವರುಗಳು ಸುಮಧುರವಾಗಿ ಹಾಡಿದ್ದು, ಬಂಜಾರ ಸಮುದಾಯದ ಸಮಸ್ತ ಬಂಧುಗಳು ಸದುಪಯೋಗಪಡಿಸಿಕೊಂಡು ಪ್ರತಿನಿತ್ಯ ಸೇವಾಲಾಲ್ ಮಹಾರಾಜ್ ರವರನ್ನು ಸ್ಮರಿಸಬೇಕೆಂದು ಸಹ ನಿರ್ಮಾಪಕರು ಮನವಿ ಮಾಡಿದರು.

# ಜಾನಪದ ಜಾತ್ರೆ ಮುಂದೂಡಿಕೆ

**ಚಾಮರಾಜನಗರ:** ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ವಿಶೇಷ ಘಟಕ ಉಪಯೋಜನೆಯಡಿ ಫೆಬ್ರವರಿ 21ರಂದು ಮಲೆ ಮಹದೇಶ್ವರಬೆಟ್ಟದಲ್ಲಿ ನಿಗದಿಯಾಗಿದ್ದ ಜಾನಪದ ಜಾತ್ರೆ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ನಿರ್ದೇಶನದಂತೆ ಮುಂದೂಡಲಾಗಿದೆ ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯದ ತಂಬಾಕು ಬೆಳೆಗಾರರ ನೆರವಿಗೆ ಧಾವಿಸಿದ ಕೇಂದ್ರ



**ಬೆಂಗಳೂರು:** ರಾಜ್ಯದ ತಂಬಾಕು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಬೇಕು ಎಂದು ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ ಅವರ ನೇತೃತ್ವದ ನಿಯೋಗ ಮಾಡಿದ್ದ ಮನವಿಗೆ ಕೇಂದ್ರ ಸರಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ ನಿಖಿಲ್ ಅವರು; ಹುಣಸೂರು, ಪಿರಿಯಾಪಟ್ಟಣ, ಹೆಚ್.ಡಿ.ಕೋಟೆ ಸೇರಿದಂತೆ ರಾಜ್ಯದ ವಿವಿಧ ಭಾಗಗಳಲ್ಲಿ ಬೆಳೆಯಲಾಗಿರುವ ಪರವಾನಗಿ ರಹಿತ ತಂಬಾಕು ಬೆಳೆಗಾರರಿಗೂ ಮಾರಾಟಕ್ಕೆ ಅವಕಾಶ ನೀಡಿಕೆ ಹಾಗೂ ಆ ಬೆಳೆಗಾರರಿಗೆ ವಿಧಿಸಲಾಗುತ್ತಿದ್ದ ದಂಡ ಮನ್ನಾ ಮಾಡುವ ನಿರ್ಧಾರ ಕೈಗೊಂಡಿರುವ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವರಾದ ಪಿಯೂಷ್ ಗೋಯಲ್ ಅವರಿಗೆ ಧನ್ಯವಾದ ಹೇಳಿದ್ದಾರೆ.

ಕೇಂದ್ರದ ಆದೇಶದ ಬಗ್ಗೆ ಹರ್ಷ ವ್ಯಕ್ತಪಡಿಸಿರುವ ಅವರು; ಕಳೆದ 2024 ಡಿಸೆಂಬರ್ 2ರಂದು ನವದೆಹಲಿಯಲ್ಲಿ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಸಚಿವರಾದ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು. ಡಿಸೆಂಬರ್ 21ರಂದು ವಾಣಿಜ್ಯ ಇಲಾಖೆಯ ಉನ್ನತ ಅಧಿಕಾರಿಗಳ ಜತೆ ಮಹತ್ವದ ಸಭೆಯನ್ನು ನಡೆಸಲಾಗಿತ್ತು ಎಂದು ತಿಳಿಸಿದ್ದಾರೆ.

ಅಂದು ಸಚಿವರನ್ನು ಭೇಟಿ ಮಾಡಿದ ನಿಯೋಗದಲ್ಲಿ ಮೈಸೂರು–ಕೊಡಗು ಲೋಕಸಭೆ ಕ್ಷೇತ್ರದ ಸಂಸದರಾದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮಾಜಿ ಸಚಿವರಾದ ಸಾ.ರಾ.ಮಹೇಶ್, ಹುಣಸೂರು ಶಾಸಕ ಜಿ.ಟಿ.ಹರೀಶ್ ಗೌಡ ತಂಬಾಕು ಬೆಳೆಗಾರರು ಜತೆಯಲಿದ್ದರು ಎಂಬುದನ್ನು ನಿಖಿಲ್ ಅವರು ತಿಳಿಸಿದ್ದಾರೆ.

ಅಲ್ಲದೆ, ರಾಜ್ಯದ ತಂಬಾಕು ಬೆಳೆಗಾರ ರೈತರು ಕಳೆದ ವರ್ಷ ಮೇ, ಜುಲೈ ತಿಂಗಳಲ್ಲಿ ವಿಪರೀತ ಮಳೆಯಿಂದಾಗಿ ಸಂಕಷ್ಟಕ್ಕೆ ಸಿಲುಕಿದ್ದರು. ರಾಜ್ಯದಲ್ಲಿ ಬೆಳೆಯಲಾಗುವ ಎಫ್‌ಸಿವಿ ತಂಬಾಕು ಬೆಳೆಯ ಇಳುವರಿ ಗಣನೀಯವಾಗಿ ಕಡಿಮೆಯಾಗಿತ್ತು ಹಾಗೂ ತಂಬಾಕು ಎಲೆಗಳ ಗುಣಮಟ್ಟಕ್ಕೆ ದೊಡ್ಡ ಮಟ್ಟದಲ್ಲಿ ಹಾನಿಯಾಗಿತ್ತು. ಇದರಿಂದಾಗಿ ಬೆಳೆಗಾರರು ಭಾರೀ ನಷ್ಟಕ್ಕೆ ತುತ್ತಾಗಿದ್ದರು. ಕೇಂದ್ರ ಸರಕಾರ ಇದೀಗ ನೆರವಿಗೆ ಧಾವಿಸಿರುವ ಪರಿಣಾಮ ಸಾವಿರಾರು ಬೆಳೆಗಾರರಿಗೆ ಅನುಕೂಲವಾಗಲಿದೆ ಎಂದು ನಿಖಿಲ್ ಕುಮಾರಸ್ವಾಮಿ ಅವರು ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಸರಕಾರ ರೈತಪರವಾದ ಅನೇಕ ಐತಿಹಾಸಿಕ ನಿರ್ಧಾರಗಳನ್ನು ಕೈಗೊಂಡಿದ್ದು, ಅದರಲ್ಲಿ ರಾಜ್ಯದ ತಂಬಾಕು ಬೆಳೆಗಾರರ ಸಂಕಷ್ಟಕ್ಕೆ ಸ್ಪಂದಿಸಿರುವುದು ಕೂಡ ಒಂದಾಗಿದೆ. ಕೇಂದ್ರ ಸರಕಾರದ ಈ ನಿರ್ಧಾರದ ಮೂಲಕ ತಂಬಾಕು ಮಂಡಳಿಯ ಹರಾಜು ಕೇಂದ್ರಗಳಲ್ಲಿ ನೋಂದಾಯಿತ ಬೆಳೆಗಾರರಿಂದ ಹೆಚ್ಚುವರಿ ತಂಬಾಕು ಮತ್ತು ನೋಂದಾಯಿಸದಿರುವ ಬೆಳೆಗಾರರಿಂದ ಅನಧಿಕೃತ ತಂಬಾಕು ಮಾರಾಟಕ್ಕೆ ಅನುಮತಿ ನೀಡಲಿದೆ. ಜತೆಗೆ, ಯಾವುದೇ ಹೆಚ್ಚುವರಿ ಸೇವಾ ಶುಲ್ಕಗಳಿಲ್ಲದೆ ಬೆಳೆಗಾರರು ನ್ಯಾಯಯುತವಾಗಿ ಮಾರುಕಟ್ಟೆ ಬೆಲೆಯನ್ನು ಪಾರದರ್ಶಕವಾಗಿ ಪಡೆಯಬಹುದಾಗಿದೆ ಎಂದು ನಿಖಿಲ್ ಅವರು ಮಾಹಿತಿ ನೀಡಿದ್ದಾರೆ.

ಎಫ್‌ಸಿವಿ ತಂಬಾಕನ್ನು 53,325 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ. 40,487 ನೋಂದಾಯಿತ ಹಾಗೂ 12,838 ಪರವಾನಗಿ ರಹಿತ ಬೆಳೆಗಾರರು ಬೆಳೆಯುತ್ತಿದ್ದಾರೆ. ಕೇಂದ್ರದ ನಿರ್ಧಾರದಿಂದಾಗಿ ಪ್ರಮುಖವಾಗಿ 12,838 ತಂಬಾಕು ಬೆಳೆಗಾರರಿಗೆ ಅನುಕೂಲವಾಗಲಿದೆ. ಕರ್ನಾಟಕದ ತಂಬಾಕು ಬೆಳೆಗಾರರ ಸಂಕಷ್ಟ ನಿವಾರಿಸಲು ಕೇಂದ್ರದ ನರೇಂದ್ರ ಮೋದಿ ಅವರ ಸರಕಾರ ಐತಿಹಾಸಿಕ ನಿರ್ಧಾರ ಕೈಗೊಂಡಿದೆ ಎಂದು ಅವರು ತಿಳಿಸಿದ್ದಾರೆ.



# ಸ್ಟಾರ್ ನಟರ ಜತೆ ಮಿಂಚಿದ ನಟಿಯ ದುರಂತ ಕಥೆ

ಅವರು ಸ್ಟಾರ್ ನಟಿ. ಭಾರತೀಯ ಚಿತ್ರರಂಗವನ್ನೇ ಅಲುಗಾಡಿಸಿದವರು. 10ನೇ ವಯಸ್ಸಿಗೆ ಸಿನಿಮಾರಂಗಕ್ಕೆ ಕಾಲಿಟ್ಟರು. ನಾಯಕಿಯಾಗಿ ಸುಮಾರು 70ಕ್ಕೂ ಹೆಚ್ಚು ಚಿತ್ರಗಳಲ್ಲಿ ನಟಿಸಿದ್ದಾರೆ. ಸ್ಟಾರ್ ನಟರ ಜೊತೆ ಮಿಂಚಿದ್ದಾರೆ. ಹಲವು ಸೂಪರ್ ಹಿಟ್ ಚಿತ್ರಗಳನ್ನು ನೀಡಿದ್ದಾರೆ. ಬಾಲ್ಯದಲ್ಲೇ ಸ್ಟಾರ್‌ಡಮ್ ಅನ್ನು ಕಂಡವರು. ಬಾಲ್ಯದಲ್ಲಿ ಅನುಭವಿಸಿದ ಕಷ್ಟಗಳಿಗೆ ಸ್ಟಾರ್ ನಟಿಯಾಗಿ ಅವರು ಸ್ವಲ್ಪ ಮಟ್ಟಿಗೆ ಪರಿಹಾರ ಪಡೆದರು. ಆದರೆ ಅಷ್ಟರಲ್ಲೇ ಅವರನ್ನು ಮರಣ ಕಬಳಿಸಿತು. ಈ ನಟಿ ಯಾರು ಗೊತ್ತಾ..?

ಅವರು ಬೇರೆ ಯಾರೂ ಅಲ್ಲ, ಮಧುಬಾಲ. ಬಾಲಿವುಡ್‌ಗೆ ಅವರು ಒಂದು ಐಕಾನ್. ಕಾಲ ಬದಲಾದರೂ ನೆನಪಿನಲ್ಲಿ ಉಳಿಯುವ ತಾರೆ. ಮಧುಬಾಲ ಅಂದ್ರೆ ಇಂದಿಗೂ ಕಣ್ಣುಗಳು ತುಂಬಿ ಬರುವವರಿದ್ದಾರೆ. ಅವರನ್ನು ನೆನೆದು ಮನಸ್ಸು ಭಾರವಾಗುವ ಅಭಿಮಾನಿಗಳಿದ್ದಾರೆ. ಅವರ ಜೀವನ ಏರಿಳಿತಗಳಿಗೆ, ಏಳುಬೀಳುಗಳಿಗೆ, ಕಷ್ಟಸುಖಗಳಿಗೆ ಒಂದು ಉದಾಹರಣೆ. ಮಧುಬಾಲ 1950ರ ದಶಕದಲ್ಲಿ ಟಾಪ್ ನಟಿಯಾಗಿ ಮಿಂಚಿದ್ದರು. ಸುಮಾರು 20 ವರ್ಷಗಳ ಕಾಲ ಬಾಲಿವುಡ್ ಅನ್ನು ಆಳಿದರು. 70 ಚಿತ್ರಗಳಲ್ಲಿ ನಟಿಸಿ ಮೆಚ್ಚುಗೆ ಗಳಿಸಿದರು. ಎಲ್ಲಾ ರೀತಿಯ ಪಾತ್ರಗಳಲ್ಲಿ ಅದ್ಭುತವಾಗಿ ನಟಿಸಿದರು.

1933 ಫೆಬ್ರವರಿ 14ರಂದು ದೆಹಲಿಯಲ್ಲಿ ಜನಿಸಿದ ಮಧುಬಾಲ ಅವರ ನಿಜವಾದ ಹೆಸರು ಮುಂತಾಜ್ ಜೆಹಾನ್ ಬೇಗಂ ದೆಹ್ಲಾವಿ. ಸಾಂಪ್ರದಾಯಿಕ ಕುಟುಂಬದಲ್ಲಿ ಜನಿಸಿದ ಅವರು ಬಡತನದಿಂದ ತೊಂದರೆ ಅನುಭವಿಸಿದರು. ಹನ್ನೊಂದು ಮಕ್ಕಳಲ್ಲಿ ಇವರು ಐದನೇ ಮಗು. ತಂದೆಯ ಉದ್ಯೋಗ ಹೋದ ಕಾರಣ ಬದುಕು ಕಟ್ಟಿಕೊಳ್ಳಲು ಮುಂಬೈಗೆ ಬಂದರು. ಅದೇ ಸಮಯದಲ್ಲಿ ಮಧುಬಾಲ ಅವರನ್ನು ಬಾಲನಟಿಯಾಗಿ ಪರಿಚಯಿಸಲಾಯಿತು. 10ನೇ ವಯಸ್ಸಿಗೆ ಅವರು ಸಿನಿಮಾರಂಗಕ್ಕೆ ಕಾಲಿಟ್ಟರು. ಮೊದಲ ಚಿತ್ರಕ್ಕೆ ಮಧುಬಾಲ ಅವರ ಸಂಭಾವನೆ 150 ರೂಪಾಯಿಗಳು. ಆದರೆ ಮುಂತಾಜ್ ಎಂಬ ಹೆಸರು ಪರದೆಗೆ ಸರಿಯಲ್ಲ ಎಂದು ನಟಿ ದೇವಿಕಾ ರಾಣಿ ಅವರ ಹೆಸರನ್ನು ಮಧುಬಾಲ ಎಂದು ಬದಲಾಯಿಸಿದರು. ಮಧುಬಾಲ ಅಂದರೆ ಏನು ಗೊತ್ತಾ.. 'ಜೇನು ಹೂವು' ಎಂದರ್ಥ.

ಬಾಲಿವುಡ್‌ನಲ್ಲಿ ಹಲವು ಪ್ರೇಮಕಥೆಗಳನ್ನು ನಡೆಸಿದ್ದಾರೆ ಮಧುಬಾಲ. ಅವರಿಗೆ ಧೈರ್ಯ ತುಂಬಾ ಜಾಸ್ತಿ. ನಟ ಪ್ರೇಮ್ ನಾಥ್ ಅವರನ್ನು ಪ್ರೀತಿಸಿದ ಮಧುಬಾಲ, ನಂತರ ನಟ ದಿಲೀಪ್ ಕುಮಾರ್ ಅವರನ್ನು ಪ್ರೀತಿಸಿದರು. ಆದರೆ ಮಧುಬಾಲ ಅವರ ತಂದೆಯಿಂದ ಇಬ್ಬರೂ ಬೇರ್ಪಡಬೇಕಾಯಿತು. ಮಧುಬಾಲ ತಂದೆ ಮತ್ತು ದಿಲೀಪ್ ಕುಮಾರ್ ನಡುವೆ ಜಗಳ ನಡೆಯಿತು. ಆ ಜಗಳದಲ್ಲಿ ಮಧುಬಾಲ ತನ್ನ ತಂದೆಯ ಪರವಾಗಿಯೇ ನಿಂತರು. ಹಾಗಾಗಿ ದಿಲೀಪ್ ಮಧುಬಾಲರಿಗೆ ಬ್ರೇಕಪ್ ಹೇಳಿದರು.

ನಂತರ ಬಾಲಿವುಡ್ ಸ್ಟಾರ್ ಗಾಯಕ ಕಿಶೋರ್ ಕುಮಾರ್ ಅವರನ್ನು ಮದುವೆಯಾದರು ಮಧುಬಾಲ. ಆದರೆ ಆಗಲೇ ಸಿನಿಮಾರಂಗದಲ್ಲಿ ಸ್ಟಾರ್ ಆಗಿದ್ದ ಅವರ ಆರೋಗ್ಯ ಹದಗೆಟ್ಟಿತ್ತು. ಅವರಿಗೆ ಹುಟ್ಟಿನಿಂದಲೂ ಹೃದಯ ಸಮಸ್ಯೆ ಇತ್ತು. ಈ ವಿಷಯ ಅವರಿಗೆ ತಿಳಿದಿರಲಿಲ್ಲ. ವಿಷಯ ತಿಳಿದ ನಂತರ ಇಬ್ಬರ ನಡುವೆ ಮನಸ್ತಾಪಗಳು ಬಂದವಂತೆ. ಕೆಲವು ದಿನಗಳಲ್ಲೇ ಮಧುಬಾಲ ಹಾಸಿಗೆ ಹಿಡಿದರು. 1969 ಫೆಬ್ರವರಿ 23ರಂದು ಕೇವಲ 26ನೇ ವಯಸ್ಸಿಗೆ ಮಧುಬಾಲ ಕೊನೆಯುಸಿರೆಳೆದರು. ಅವರು ಸತ್ತರೂ, ಇತಿಹಾಸದಲ್ಲಿ ಉಳಿದಿದ್ದಾರೆ. ವಿಶೇಷವಾಗಿ ಬಾಲಿವುಡ್‌ನ ಪ್ರೇಮ ದೇವತೆಯಾಗಿ ಉಳಿದಿದ್ದಾರೆ.



# ಹೆಂಡ್ತಿ ವರ್ಜಿನ್ ಆಗಿರ್ಬೇಕು ಅನ್ಬೇಡಿ!



ಸದ್ಯ ರಾಜಮೌಳಿ ಸಿನಿಮಾಕ್ಕಾಗಿ ಹಾಲಿವುಡ್ ಮತ್ತು ಟಾಲಿವುಡ್ ನಡುವೆ ರನ್ನಿಂಗ್ ರೇಸ್ ಮಾಡುತ್ತಿರುವ ಪ್ರಿಯಾಂಕಾ ಚೋಪ್ರಾ ವರ್ಜಿನಿಟಿ ಬಗ್ಗೆ ಮಾತನಾಡಿದ್ದಾರೆ.

ಹೆಂಡತಿ ವರ್ಜಿನ್ ಆಗಿರಬೇಕು ಅಂತೆಲ್ಲ ಗಂಡಂದಿರು ಬಯಸಬಾರದು ಎಂದ ಪಿಂಕಿ ಮಾತಿಗೆ ಬೇರೆ ಬೇರೆ ಬಗೆಯ ಕಾಮೆಂಟ್‌ಗಳು ಹರಿದು ಬರ್ತಿವೆ. ಆದರೆ ಪ್ರಿಯಾಂಕಾ ಈ ಮಾತು ಹೇಳಿರೋದಕ್ಕೂ ಒಂದು ರೀಸನ್ನಿದೆ. ಅದನ್ನು ಕೇಳಿದ್ರೆ ನೀವೂ ಪಿಂಕಿ ಮಾತು ಸರಿ ಅಂತ ಥಂಬ್ಸ್‌ಅಪ್ ಮಾಡ್ತೀರ.

ಅಷ್ಟಕ್ಕೂ ಪ್ರಿಯಾಂಕಾ ಚೋಪ್ರಾ ಮೊದಲಿಂದಲೂ ನೇರ ಮಾತಿಗೆ ಫೇಮಸ್. ಆಕೆ ಮಾತಿಗೆ ಪಾಲಿಶ್ ಹಾಕಿ ಬೆಣ್ಣೆಯಲ್ಲಿ ಕೂದಲು ತೆಗೆದ ಹಾಗೆ ಮಾತನಾಡೋದು ಕಡಿಮೆ. ಬದಲಿಗೆ ಬುಲೆಟ್‌ನಂತೆ ನೇರ ತಾಕುವ ಹಾಗೆ ಮಾತಾಡ್ತಾರೆ. ಟೆಡ್ ಟಾಕ್ ನಂಥಾ ಪ್ಲಾಟ್‌ಫಾರ್ಮ್‌ಗಳಿಂದ ಹಿಡಿದು ಅನೇಕ ಪಾಡ್‌ಕಾಸ್ಟ್‌ಗಳವರೆಗೆ ಅನೇಕ ಕಡೆ ಪ್ರಿಯಾಂಕಾ ಮಾತಾಡ್ತಾ ಇರುತ್ತಾರೆ. ಎಷ್ಟೋ ವೇದಿಕೆಯಲ್ಲಿ ಅವರು ಮೋಟಿವೇಶನ್ ಸ್ಪೀಚ್ ಮಾಡಿದ್ದೂ ಇದೆ. ಹಾಗೆಂದು ಸ್ಟೈಲಿನಲ್ಲೂ ಈಕೆ ಹಿಂದೆ ಬಿದ್ದವರಲ್ಲ. ಹತ್ತು ದಿನಗಳ ಹಿಂದೆ ಈಕೆಯ ತಮ್ಮ ಸಿದ್ಧಾರ್ಥ ಚೋಪ್ರಾ ಮದುವೇಲಿ ಈ ನಟಿ ಮಿಂಚಿದ್ದೇ ಮಿಂಚಿದ್ದು. ಈಕೆಗಿಂತಲೂ ಈಕೆ ತೊಟ್ಟು ಎಪ್ಪತ್ತು ಕೋಟಿ ಬೆಲೆಬಾಳುವ ಮನೀಷ್ ಮಲ್ಹೋತ್ರ ವಿನ್ಯಾಸದ ನೆಕ್ಲೆಸ್ ಮಿಂಚಿತ್ತು. 200 ಕ್ಯಾರೆಟ್ ಪಚ್ಚೆ ಮತ್ತು ವಜ್ರಗಳಿಂದ ಮಾಡಲ್ಪಟ್ಟ ಬಲ್ಗರಿ ಹಾರವಂತೆ ಇದು. ಮೆಡಿಟರೇನಿಯನ್ ಕಡಲಿನ ಸಸ್ಯವಾದ ಕ್ಯಾಪೆಲ್ವೆನೆರೆಯಿಂದ ಸ್ಫೂರ್ತಿ ಪಡೆದು ಇದನ್ನು ಮನೀಷ್ ಆಂಡ್ ಟೀಮ್ ತಯಾರು ಮಾಡಿದೆ. 71.24 ಕ್ಯಾರೆಟ್ ಡೈಮಂಡ್ ಹರಳುಗಳು,ಪಚ್ಚೆ ಮಣಿಗಳಿಂದ ಭರ್ಜರಿ 130.77 ಕ್ಯಾರೆಟ್ ತೂಗುತ್ತಿದ್ದ ತೊಲಗಾತ್ರದ ಈ ನೆಕ್ಲೆಸ್‌ಗೆ 'ದಿ ಎಮರಾಲ್ಡ್ ವೀನಸ್' ಅನ್ನೋ ಹೆಸರಿಸಲಾಗಿದೆ. ಇದನ್ನು ತಯಾರಿಸಲು 1600 ಗಂಟೆಗಳನ್ನು ತೆಗೆದುಕೊಂಡಿದೆ ಅಂತೆಲ್ಲ ಸಿಕ್ಕಾಪಟ್ಟೆ ಸುದ್ದಿ ಆಗಿತ್ತು.

ಈಗ ವಿಷಯಕ್ಕೆ ಬರಾಣ, ನಮ್ ಪಿಂಕಿ ಮಾತಾಡಿದ್ದು ಸದ್ಯಕ್ಕೆ ಸಖತ್ ಸೌಂಡ್ ಮಾಡ್ತಿದೆ. ರಿಲೇಶನ್‌ಶಿಪ್ ಬಗ್ಗೆ ಈ ಹಿಂದೆ ಮಾತನಾಡಿದ್ದ ಪ್ರಿಯಾಂಕಾ, 'ನನ್ನ ಹಿಂದಿನ ಅನುಭವಗಳಿಂದ ನನಗೆ ಡೇಟಿಂಗ್ ಮಾಡಲು ಹಿಂಜರಿಕೆ ಆಗುತ್ತಿತ್ತು. ನನಗೆ ಕೌಟುಂಬಿಕ ವಾತಾವರಣ ಬಯಸುವ ವ್ಯಕ್ತಿಯ ಜೊತೆಗೆ ಬದುಕು ಕಟ್ಟಿಕೊಳ್ಳುವುದು ಇಷ್ಟವಿತ್ತು. ಈ ಹಿಂದಿನ ಸಂಬಂಧಗಳಲ್ಲಿ ನನ್ನ ಜೊತೆಗೆ ಇದ್ದವರಿಂದ ನಾನು ಬಹಳ ನೋವನ್ನು ಅನುಭವಿಸಿದ್ದೆ. ಹೀಗಾಗಿಯೇ ಆರಂಭದಲ್ಲಿ ನಿಕ್ ಜೊತೆ ಡೇಟ್ ಮಾಡಲೂ ಹಿಂಜರಿಕೆ ಇತ್ತು' ಅಂದಿದ್ದಾರೆ. ಜೊತೆಗೆ ಅವರಿಗೆ ತಾನು ಜೀವನ ಸಂಗಾತಿಯಾಗಿ ಆರಿಸುವ ಹುಡುಗ ಪ್ರಾಮಾಣಿಕನಾಗಿರಬೇಕು ಅನ್ನೋದು ಬಹಳ ಇತ್ತಂತೆ. ಇದಕ್ಕೂ ಹಿಂದಿನ ಕಹಿ ಅನುಭವಗಳೇ ಕಾರಣವಂತೆ. ತಾನು ತನ್ನ ಮದುವೆ ಆಗುವ ಹುಡುಗ ಹೀಗಿರಬೇಕು ಅಂತ ಒಂದು ಲಿಸ್ಟ್ ಹಾಕ್ಕೊಂಡಿದ್ರಂತೆ ಪ್ರಿಯಾಂಕಾ. ಅವೆಲ್ಲ ನಿಕ್ ಬಳಿ ಇದ್ದ ಕಾರಣ ಮದುವೆ ಆದರಂತೆ.
ಇಲ್ಲವಾದರೆ ಆತನ ಕೈ ಹಿಡಿಯುತ್ತಿರಲಿಲ್ವಂತೆ. ಇಂಥಾ ಪಿಂಕಿ ಇದೀಗ ಗಂಡಂದಿರೆಲ್ಲ ತಮ್ಮ ಹೆಂಡತಿ ವರ್ಜಿನ್ ಆಗಿರಬೇಕು ಅಂತ ಬಯಸಬಾರದು. ಅದರ ಬದಲಿಗೆ ಉತ್ತಮ ಗುಣ ನಡತೆಯ ಹುಡುಗಿ ಬೇಕು ಅಂತ ಬಯಸಬೇಕು. ಏಕೆಂದರೆ ವರ್ಜಿನಿಟಿ ಕತೆ ಒಂದು ರಾತ್ರಿಯಲ್ಲಿ ಮುಗಿದು ಹೋಗುತ್ತದೆ. ಗುಣ ನಡತೆ ಲೈಫ್‌ಟೈಮ್ ಇರುತ್ತೆ ಅನ್ನೋ ಮಾತನ್ನು ಹೇಳಿದ್ದಾರೆ. ಅದಕ್ಕೆ ಒಬ್ಬ ಉತ್ತಮ ಗುಣನಡತೆ ಇರುವ ಹುಡುಗಿ ಎಂದೂ ವರ್ಜಿನಿಟಿ ಕಳೆದುಕೊಳಲ್ಲ ಅನ್ನೋ ಮಾತು ಹೇಳಿ ನೆಟ್ಟಿಗರ ಕೈಯಿಂದ ಹಿಗ್ಗಾಮಗ್ಗ ಝಾಡಿಸಿ ಕೊಂಡಿದ್ದಾನೆ. ಇದನ್ನ ಹುಡುಗರಿಗೂ ಅಪ್ಪೈ ಮಾಡಿ ಅಂತ ತರಾಟೆಗೆ ತೆಗೆದುಕೊಂಡಿದ್ದಾರೆ. ಸದ್ಯಕ್ಕಂತೂ ಪಿಂಕಿ ಮಾತು ಸಖತ್ ಟ್ರೆಂಡಿಂಗ್ ಅಲ್ಲಿದೆ.



# ಎಷ್ಟೊಂದು ಹಾಟ್
## ಊರ್ಮಿಳಾ ಮಾತೋಂಡ್ಕರ್



ಮಾಸೂಮ್ ಚಿತ್ರದಲ್ಲಿ ಬಾಲ ಕಲಾವಿದೆಯಾಗಿ ಬಾಲಿವುಡ್ ಚಿತ್ರೋದ್ಯಮಕ್ಕೆ ಪ್ರವೇಶಿಸಿದ ನಟಿ ಊರ್ಮಿಳಾ ಮಾತೋಂಡ್ಕರ್ ಬಾಲಿವುಡ್‌ನ ರಂಗೀಲಾ ಗರ್ಲ್ ಎಂದೇ ಜನಪ್ರಿಯೆ. ರಾಮ್‌ಗೋಪಾಲ್ ವರ್ಮಾನ ರಂಗೀಲಾ ಸಿನಿಮಾ ಬಂದಾಗ ಆಕೆಗಿನ್ನೂ ಜಸ್ಟ್ ಇಪ್ಪತ್ತೊಂದು.

ಆಗ ಆಕೆ ನಿಗಿನಿಗಿ ಕೆಂಡ. ಇತ್ತೀಚೆಗೆ ಸಿನಿಮಾಗಳಿಂದ ದೂರವಿದ್ದರೂ ಅವರ ಸೌಂದರ್ಯ ಹಾಗೂ ಫಿಟ್ನೆಸ್ ಇಂದಿನ ನಟಿಯರಿಗೆ ಪೈಪೋಟಿ ನೀಡುತ್ತಿದೆ. ಊರ್ಮಿಳಾ ಮಾತೋಂಡ್ಕರ್ ಅವರು ತನಗಿಂತ 10 ವರ್ಷ ಚಿಕ್ಕವರಾದ ಮೊಹ್ಸಿನ್ ಅಖ್ತರ್ ಮಿರ್ ಅವರನ್ನು ವಿವಾಹವಾದರು. ಊರ್ಮಿಳಾ ತನ್ನ 8 ವರ್ಷಗಳ ಮದುವೆಯನ್ನು ಕೊನೆಗೊಳಿಸಲು ನಿರ್ಧರಿಸಿದ್ದು, ಇದೀಗ ಡೈವೋರ್ಸ್‌ಗೆ ಅಪ್ಲೈ ಮಾಡಿದ್ದಾರೆ. ಹೀಗಾಗಿ ಈಗ ಕೊಂಚ ಸುದ್ದಿಯಲ್ಲಿದ್ದಾರೆ.

50ರ ಹರೆಯದ ಊರ್ಮಿಳಾ ಮಾತೋಂಡ್ಕರ್ ಅವರನ್ನು ನೋಡಿದರೆ ಅವರ ವಯಸ್ಸು ಎಷ್ಟು ಎಂದು ಕಂಡುಹಿಡಿಯುವುದು ಕಷ್ಟ. ಆಕೆಯ ಮುಖದ ಹೊಳಪು ಮತ್ತು ಫಿಟ್ನೆಸ್ 30 ವರ್ಷ ವಯಸ್ಸಿನ ನಟಿಯರಂತೆಯೇ ಇದೆ. ಊರ್ಮಿಳಾ ಟೂರ್ ಹೋಗುವುದನ್ನು ಇಷ್ಟಪಡುತ್ತಾಳೆ ಮತ್ತು ಆಗಾಗ್ಗೆ ಪ್ರಯಾಣಿಸುತ್ತಾಳೆ. ಇದು ಆಕೆಯ ಮಾನಸಿಕ ಸದೃಢತೆಗೆ ಉತ್ತಮ ವ್ಯಾಯಾಮವಿದ್ದಂತೆ ಇದೆಯಂತೆ. ಆದರೆ, ಈ ವಯಸ್ಸಿನಲ್ಲೂ ಆಕೆ ಕ್ರಿಯಾಶೀಲಳಾಗಿರಲು ಆಹಾರ ಕ್ರಮ, ಸಮತೋಲಿತ ಜೀವನಶೈಲಿ ಹಾಗೂ ಉತ್ತಮ ದಿನಚರಿಯೇ ಕಾರಣ.

ಮುಖದ ಹೊಳಪಿನ ಜೊತೆಗೆ ದೇಹವನ್ನು ಆಕಾರದಲ್ಲಿಡಲು ಊರ್ಮಿಳಾ ಮಾತೋಂಡ್ಕರ್ ಒಂದು ಫಿಟ್ನೆಸ್ ಕ್ರಮ ಕಾಪಾಡಿಕೊಳ್ಳುತ್ತಾರೆ. ಊರ್ಮಿಳಾ ಈ ವಯಸ್ಸಿನಲ್ಲೂ ತನ್ನನ್ನು ತಾನು ಫಿಟ್ ಆಗಿ ಮತ್ತು ಯಂಗ್ ಆಗಿ ಇಟ್ಟುಕೊಳ್ಳಲು ಆರೋಗ್ಯಕರ ಜೀವನಶೈಲಿಯನ್ನು ಅನುಸರಿಸುತ್ತಾಳೆ. ಊರ್ಮಿಳಾ ತನ್ನ ದಿನಚರಿಯನ್ನು ಬಾಲಸೂರ್ಯನ ಕಿರಣಗಳಿಗೆ ಒಡ್ಡಿಕೊಳ್ಳುವುದರಿಂದ ಪ್ರಾರಂಭಿಸುತ್ತಾರೆ. ಅವಳು ಬೇಗನೆ ಎಚ್ಚರಗೊಳ್ಳುತ್ತಾಳೆ ಮತ್ತು ಪ್ರತಿದಿನ ಕೆಲವು ಸರಳ ಯೋಗಾಸನಗಳನ್ನು ಮಾಡುತ್ತಾಳೆ. ಅದ್ಕೂ ಮೊದಲು ನಿಂಬೆ ಮತ್ತು ಜೇನುತುಪ್ಪ ಸೇರಿಸಿದ ಒಂದು ದೊಡ್ಡ ಲೋಟ ನೀರನ್ನು ಕುಡಿಯುತ್ತಾಳೆ. ಇದು ಅವಳ ಚಯಾಪಚಯ ಮತ್ತು ಜೀರ್ಣಕ್ರಿಯೆಯನ್ನು ಸುಧಾರಿಸುತ್ತದೆ ಮತ್ತು ದೇಹದಿಂದ ವಿಷವನ್ನು ತೆಗೆದುಹಾಕುತ್ತದೆ.

ವ್ಯಾಯಾಮ ಮಾಡಲು ಮರೆಯುವುದಿಲ್ಲ. ಪ್ರತಿದಿನ ನಿಯಮಿತವಾಗಿ ಜಿಮ್‌ಗೆ ಹೋಗುತ್ತಾಳೆ. ತನ್ನ ದೇಹವನ್ನು ಶೇಪ್‌ನಲ್ಲಿ ಇಟ್ಟುಕೊಳ್ಳಲು ವಿಭಿನ್ನ ವ್ಯಾಯಾಮಗಳನ್ನು ಮಾಡುತ್ತಾಳೆ. ದೈನಂದಿನ ವ್ಯಾಯಾಮಗಳು ಹೃದಯದ ಆರೋಗ್ಯವನ್ನು ಸುಧಾರಿಸಲು, ಸ್ನಾಯುಗಳನ್ನು ಬಲಪಡಿಸಲು ಮತ್ತು ಶಕ್ತಿಯ ಮಟ್ಟವನ್ನು ಹೆಚ್ಚಿಸಲು ಸಹಾಯ ಮಾಡುತ್ತವೆ. ಇದು ವಯಸ್ಸಾದಂತೆ ಮುಖ್ಯವಾಗಿದೆ.

ಇದರೊಂದಿಗೆ ಊರ್ಮಿಳಾ ಅವರ ದಿನಚರಿಯಲ್ಲಿ ಯೋಗವೂ ಸೇರಿಕೊಂಡಿದೆ. ಯೋಗ ಅವಳನ್ನು ದೈಹಿಕವಾಗಿ ಆರೋಗ್ಯವಾಗಿರಿಸುತ್ತದೆ, ಜತೆಗೆ ಅವಳ ಮಾನಸಿಕ ಸ್ಥಿತಿಯನ್ನು ಸಮತೋಲನದಲ್ಲಿಡಲು ಸಹಾಯ ಮಾಡುತ್ತದೆ. ಯೋಗ 40 ವರ್ಷ ವಯಸ್ಸಿನ ನಂತರ ಜನರಿಗೆ ತುಂಬಾ ಪ್ರಯೋಜನಕಾರಿ. ಏಕೆಂದರೆ ಇದು ದೇಹದ ಫ್ಲೆಕ್ಸಿಬಿಲಿಟಿ ಹೆಚ್ಚಿಸಲು, ದೇಹ ಮತ್ತು ಮನಸ್ಸನ್ನು ವಿಶ್ರಾಂತಿ ಮಾಡಲು ಮತ್ತು ಒತ್ತಡವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ.

ಊರ್ಮಿಳಾ ಧ್ಯಾನ ಮಾಡಲು ಮರೆಯುವುದಿಲ್ಲ. ಧ್ಯಾನವು ಅವಳನ್ನು ಮಾನಸಿಕವಾಗಿ ಚುರುಕಾಗಿರಿಸುತ್ತದೆ ಮತ್ತು ಒತ್ತಡವನ್ನು ಕಡಿಮೆ ಮಾಡುತ್ತದೆ. ಧ್ಯಾನವು ಏಕಾಗ್ರತೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಆತಂಕವನ್ನು ಕಡಿಮೆ ಮಾಡುತ್ತದೆ ಮತ್ತು ಒಟ್ಟಾರೆ ಮಾನಸಿಕ ಆರೋಗ್ಯವನ್ನು ಸುಧಾರಿಸುತ್ತದೆ. ವಯಸ್ಸಿನೊಂದಿಗೆ, ದೈಹಿಕ ಸಾಮರ್ಥ್ಯದಷ್ಟೇ ಮಾನಸಿಕ ಸದೃಢತೆಯೂ ಮುಖ್ಯವಾಗುತ್ತದೆ.

ಊರ್ಮಿಳಾ ತಮ್ಮ ಆಹಾರ ಕ್ರಮದ ಬಗ್ಗೆಯೂ ವಿಶೇಷ ಗಮನ ಹರಿಸುತ್ತಾರೆ. ಅಗತ್ಯವಾದ ಪ್ರೋಟೀನ್‌ಗಳು ಮತ್ತು ಖನಿಜಗಳನ್ನು ಹೊಂದಿರುವ, ಮನೆಯಲ್ಲೇ ಬೇಯಿಸಿದ ಆಹಾರವನ್ನು ಸೇವಿಸುವತ್ತ ಅವಳು ಆದ್ಯತೆ ನೀಡುತ್ತಾಳೆ. ಅವಳು ತಿಂಗಳಿಗೆ ಒಂದು ಅಥವಾ ಎರಡು ಬಾರಿ ಮಾತ್ರ ಹೊರಗಿನ ಆಹಾರವನ್ನು ತಿನ್ನುತ್ತಾಳೆ. ಆಕೆಯ ಆಹಾರವು ಪೋಷಕಾಂಶಗಳ ಮಿಶ್ರಣ. ಇದು 50 ನೇ ವಯಸ್ಸಿನಲ್ಲಿ ಆಕೆಗೆ ಆರೋಗ್ಯವಾಗಿರಲು ಸಹಾಯ ಮಾಡುತ್ತದೆ.

# ಬರ್ಲಿನ್ ಚಲನಚಿತ್ರೋತ್ಸವದಲ್ಲಿ ಕನ್ನಡ ಚಿತ್ರ 'ವಾಘಚಿಪಾಣಿ'




ಅನುರಾಗ್ ಕಶ್ಯಪ್ ಪ್ರಸ್ತುತಪಡಿಸುತ್ತಿರುವ 'ವಾಘಚಿಪಾಣಿ' ಚಿತ್ರ ಬರ್ಲಿನ್ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಆಯ್ಕೆಯಾಗಿದೆ. ನಟೇಶ್ ಹೆಗಡೆ ಆ್ಯಕ್ಷನ್ ಕಟ್ ಹೇಳಿರುವ ಸಿನಿಮಾ ಇದು. ಈ ಪ್ರತಿಷ್ಠಿತ ಚಲನಚಿತ್ರೋತ್ಸವಕ್ಕೆ ಪ್ರವೇಶ ಪಡೆದ ಮೊದಲ ಕನ್ನಡ ಸಿನಿಮಾ ಇದು ಅನ್ನೋದು ಗಮನಾರ್ಹ ಸಂಗತಿ.

ಬರ್ಲಿನ್ ಫಿಲ್ಮ್ ಫೆಸ್ಟಿವಲ್ ಈಗಾಗಲೇ ಆರಂಭಗೊಂಡಿದ್ದು, ಟೈಗರ್ಸ್ ಪಾಂಡ್ ಅಥವಾ ವಾಘಚಿಪಾಣಿ ಸ್ಕ್ರೀನಿಂಗ್ ಸಹ ಶುರುವಾಗಿದೆ. ಫೆಬ್ರವರಿ 15ರ, ಶನಿವಾರದಂದು ಸಂಜೆ 7:15ಕ್ಕೆ ಪ್ರದರ್ಶನ (ವರ್ಲ್ಡ್ ಪ್ರೀಮಿಯರ್) ಕಂಡಿದೆ. ಫೆ.16, ಭಾನುವಾರ ಮಧ್ಯಾಹ್ನ 12:45ಕ್ಕೆ ಪ್ರದರ್ಶನ ಕಂಡಿದೆ. ಫೆ.18, ಮಂಗಳವಾರ ಅಂದರೆ ಸೋಮವಾರ ಬೆಳಗ್ಗೆ 9 ಗಂಟೆಗೆ ಪ್ರದರ್ಶನ (ಪ್ರೆಸ್ ಆ್ಯಂಡ್ ಇಂಡಸ್ಟ್ರಿ ಸ್ಕ್ರೀನಿಂಗ್) ಕಾಣಲಿದೆ. ಫೆ.20 ಗುರುವಾರ ಸಂಜೆ 7 ಗಂಟೆಗೆ ಮತ್ತು ಶುಕ್ರವಾರ ಮಧ್ಯಾಹ್ನ 2:30ಕ್ಕೆ ಪ್ರದರ್ಶನ ಕಾಣಲಿದೆ. ಚಿತ್ರದಲ್ಲಿ ನಟ ಅಚ್ಯುತ್ ಕುಮಾರ್ ನಟಿಸಿದ್ದಾರೆ.

# ನೋಲನ್ ಹೊಸ ಸಿನಿಮಾದ ಪೋಸ್ಟರ್ ಬಿಡುಗಡೆ

ವಿಶ್ವ ಸಿನಿಮಾ ರಂಗದ ಟಾಪ್ 10 ನಿರ್ದೇಶಕರಲ್ಲಿ ಕ್ರಿಸ್ಟೋಫರ್ ನೋಲನ್ ಹೆಸರು ಕೇಳಿ ಬರುತ್ತಿದೆ. ಐಎಂಡಿಬಿಯ ಸಾರ್ವಕಾಲಿಕ ಅತ್ಯುತ್ತಮ ಸಿನಿಮಾಗಳ ಪಟ್ಟಿಯಲ್ಲಿ ಅತಿ ಹೆಚ್ಚು ಸಿನಿಮಾಗಳು ಕ್ರಿಸ್ಟೋಫರ್ ನೋಲನ್ ಅವರದ್ದಿವೆ. ಸಿನಿಮಾ ಮಾಧ್ಯಮವನ್ನು ಬಹಳ ಸಂಕೀರ್ಣವಾದ ವೈಜ್ಞಾನಿಕ ವಿಷಯಗಳನ್ನು ಹೇಳಲು ನೋಲನ್ ಬಳಸಿಕೊಳ್ಳುತ್ತಾರೆ.



ನೋಲನ್‌ರ 'ಇನ್‌ಸೆಪ್ಷನ್', 'ಇಂಟರ್‌ಸ್ಟೆಲ್ಲರ್', ಸಮಯದ ಭಿನ್ನ ಕಾನ್ಸೆಪ್ಟ್ ಹಿಡಿದು ಮಾಡಿರುವ 'ಟೆನೆಟ್' ಇನ್ನೂ ಹಲವು ಅತ್ಯುತ್ತಮ ಸಿನಿಮಾಗಳನ್ನು ನೋಲನ್ ನಿರ್ದೇಶನ ಮಾಡಿದ್ದಾರೆ. ನೋಲನ್‌ರ ಈ ಹಿಂದಿನ ಸಿನಿಮಾ 'ಆಪನ್ ಹೈಮರ್'ಗೆ ಆಸ್ಕರ್ ಸಹ ಬಂದಿದೆ. ಇದೀಗ ನೋಲನ್ ಹೊಸ ಸಿನಿಮಾಕ್ಕೆ ಕೈ ಹಾಕಿದ್ದು, ಮೊದಲ ಪೋಸ್ಟರ್ ಬಿಡುಗಡೆ ಆಗಿದೆ.

ಕ್ರಿಸ್ಟೋಫರ್ ನೋಲನ್ ಇದೀಗ 'ದಿ ಒಡೆಸ್ಸೆ' ಹೆಸರಿನ ಸಿನಿಮಾ ನಿರ್ದೇಶನ ಮಾಡುತ್ತಿದ್ದಾರೆ. 'ಒಡೆಸ್ಸೆ' ಸಿನಿಮಾ ಅವರ ಈ ಹಿಂದಿನ ಕೆಲ ಸಿನಿಮಾಗಳಂತೆ 'ಮೈಂಡ್ ಬೆಂಡಿಂಗ್' (ಮೆದುಳಿಗೆ ಶ್ರಮ ಕೊಡುವ) ಸಿನಿಮಾ ಅಲ್ಲ. ಬದಲಿಗೆ ಇದೊಂದು ಸಾಹಸಮಯ ಕತೆ ಹೊಂದಿರುವ ಒಂದೇ ಸರಳ ರೇಖೆಯಲ್ಲಿ ನಡೆಯುವ ಸಿನಿಮಾ ಅಂತೆ. ಸಿನಿಮಾದಲ್ಲಿ ಮ್ಯಾಟ್ ಡೆಮನ್ ಪ್ರಧಾನ ಪಾತ್ರದಲ್ಲಿ ನಟಿಸಿದ್ದು, ಇದೀಗ ಸಿನಿಮಾದ ಮೊದಲ ಪೋಸ್ಟರ್ ಬಿಡುಗಡೆ ಆಗಿದೆ. ಗ್ರೀಕ್ ಪುರಾಣದ ಪ್ರಮುಖ ಪಾತ್ರ ಒಡಿಸಿಯಸ್ ಪಾತ್ರದಲ್ಲಿ ಮ್ಯಾಟ್ ಡೆಮನ್ ನಟಿಸುತ್ತಿದ್ದಾರೆ.

'ದಿ ಒಡೆಸ್ಸಿ' ಪುರಾತನ ಗ್ರೀಕ್‌ನ ಹೋಮರ್ ಬರೆದಿರುವ 'ಒಡೆಸ್ಸೆ' ಕಾವ್ಯದ ಸಿನಿಮಾ ರೂಪ ಎನ್ನಲಾಗುತ್ತಿದೆ. 'ಒಡೆಸ್ಸಿ' ಕಾವ್ಯದ ಕೆಲ ಭಾಗಗಳನ್ನು ಆಯ್ಕೆ ಮಾಡಿಕೊಂಡು ಕ್ರಿಸ್ಟೋಫರ್ ನೋಲನ್ ಈ ಸಿನಿಮಾ ಮಾಡುತ್ತಿದ್ದಾರೆ. ನೋಲನ್ ಈ ಹಿಂದೆ ಆಧುನಿಕ ಇತಿಹಾಸದ ಘಟನೆಗಳನ್ನು ಆಧರಿಸಿ ಸಿನಿಮಾ ಮಾಡಿದ್ದಿದೆ. ಎರಡನೇ ವಿಶ್ವಯುದ್ಧ ಆಧರಿಸಿದ'ಡಂಕಿರ್ಕ್', ಖ್ಯಾತ ವಿಜ್ಞಾನಿ ಆಪನ್‌ಹೈಮರ್ ಜೀವನ ಆಧರಿಸಿದ 'ಆಪನ್‌ಹೈಮರ್' ಸಿನಿಮಾಗಳನ್ನು ನೋಲನ್ ನಿರ್ದೇಶಿಸಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಪುರಾಣದ ಕತೆ ಆಧರಿಸಿದ ಸಿನಿಮಾ ಕೈಗೆತ್ತಿಕೊಂಡಿದ್ದಾರೆ.

'ದಿ ಒಡೆಸ್ಸೆ' ಸಿನಿಮಾವು 'ಒಡೆಸ್ಸೆ' ಭಾರಿ ಬಜೆಟ್‌ನ ಸಿನಿಮಾ ಆಗಲಿರಲಿದ್ದು, ಸಿನಿಮಾದಲ್ಲಿ ಮ್ಯಾಟ್ ಡೆಮನ್ ಜೊತೆಗೆ 'ಸ್ಪೈಡರ್‌ಮ್ಯಾನ್' ಖ್ಯಾತಿಯ ನಟ ಟಾಮ್ ಹಾಲೆಂಡ್, ಖ್ಯಾತ ನಟಿ ಅನ್ನಾ ಹ್ಯಾತ್‌ವೇ, 'ಸ್ಪೈಡರ್‌ಮ್ಯಾನ್' ನಾಯಕಿ ಜೆಂಡೇಯ, 'ಬ್ಲಾಕ್ ಪ್ಯಾಂಥರ್' ನಟಿ ಲುಪಿತಾ, ರಾಬರ್ಟ್ ಪ್ಯಾಟಿಸನ್ ಇನ್ನೂ ಹಲವು ಪ್ರಮುಖ ನಟರು ನಟಿಸುತ್ತಿದ್ದಾರೆ. ಈ ಸಿನಿಮಾವನ್ನು ಕ್ರಿಸ್ಟೋಫರ್ ನೋಲನ್ ಮತ್ತು ಅವರ ಪತ್ನಿ ನಿರ್ಮಾಣ ಮಾಡುತ್ತಿದ್ದಾರೆ. ಈ ಸಿನಿಮಾ ಮುಂದಿನ ವರ್ಷ ಜುಲೈ ತಿಂಗಳಲ್ಲಿ ಬಿಡುಗಡೆ ಆಗಲಿದೆ.

ಪ್ರಕಾಶಕ– ಸಂಪಾದಕ ಹಾಗೂ ಮಾಲೀಕ ಲಕ್ಷ್ಮೀಪ್ರಸನ್ನ ಆರ್.ಹೆಚ್. ಅವರಿಂದ #1652/6, 20ನೇ ತಿರುವು, 8ನೇ ಮುಖ್ಯರಸ್ತೆ, ಸಿ ಬ್ಲಾಕ್, ಸಹಕಾರ ನಗರ, ಬೆಂಗಳೂರು–560092 ಇಲ್ಲಿ ಪ್ರಕಟಗೊಂಡು, ಮುದ್ರಣ: ಪಿ.ಎನ್.ಪ್ರಿಂಟರ್ಸ್, ನರಸಿಪಾಳ್ಯ, ಅರಿಶಿಣಕುಂಟೆ(ಪೋ.), ನೆಲಮಂಗಲ, ಬೆಂಗಳೂರು–562123 ಇಲ್ಲಿ ಮುದ್ರಿಸಲ್ಪಟ್ಟಿದೆ. RNI.KAR/KAN/2009/31934, ದೂರವಾಣಿ: 9448074878
Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878